ಕನ್ನಡ ದಿನಪತ್ರಿಕೆ

# ಬೆಳಗಾವಿ ವರದಿ

27 ಮಾರ್ಚ | ಬುಧವಾರ
27 MARCH 2024

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 34 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಇಂದು ಕುಂದಾನಗರಿಗೆ ಶೆಟ್ಟರ್ ಎಂಟ್ರಿ



ಬೆಳಗಾವಿ: ಇಂದು ಬೆಳಗ್ಗೆ 10 ಘಂಟೆಗೆ ಮಾಜಿ ಮುಖ್ಯಮಂತ್ರಿ, ಬೆಳಗಾವಿ ಲೊಕಸಭಾ ಅಭ್ಯರ್ಥಿ ಜಗದೀಶ್ ಶೆಟ್ಟರ್ ಹೀರೆಬಾಗೆವಾಡಿ ಟೋಲ್ ಮೂಲಕ ಬೆಳಗಾವಿ ಲೊಕಸಭಾ ಕ್ಷೇತ್ರಕ್ಕೆ ಆಗಮಿಸಲಿದ್ದು ಬಿಜೆಪಿ ಕಾರ್ಯಕರ್ತರು ಅವರಿಗೆ ಸ್ವಾಗತ ಕೋರಲಿದ್ದಾರೆ.

ಬೆಳಗ್ಗೆ 10ಘಂಟೆಗೆ ಹೀರೆಬಾಗೆವಾಡಿ ಟೋಲ್ ಮೂಲಕ ಲೋಕಸಭಾ ಕ್ಷೇತ್ರಕ್ಕೆ ಆಗಮಿಸಿ 10.30ಕ್ಕೆ ಕಿಲ್ಲಾ ದುರ್ಗಾದೇವಿ ದೇವಸ್ಥಾನದಲ್ಲಿ ಪೂಜಾ ಕಾರ್ಯಕ್ರಮ, ನಂತರ ಬೈಕ್ ಸವಾರರು ಅವರಿಗೆ ಸಾಥ ನೀಡಲಿದ್ದು ಅಲ್ಲಿಂದ ಕೊರ್ಟ್ ಆವರಣದಲ್ಲಿರುವ ಸಂಗೊಳ್ಳಿ ರಾಯಣ್ಣ ಮೂರ್ತಿಗೆ ಮಾಲಾರ್ಪಣೆ, ರಾಣಿ ಚನ್ನಮ್ಮ ವೃತ್ತದಲ್ಲಿರುವ ಚನ್ನಮ್ಮನ ಮೂರ್ತಿಗೆ, ಅಂಬೇಡ್ಕರ್ ಮೂರ್ತಿಗೆ ಮಾಲಾರ್ಪಣೆ, ಗಣಪತಿ ದೇವಸ್ಥಾನದಲ್ಲಿ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಧರ್ಮವೀರ ಸಂಭಾಜಿ ವೃತ್ತದಲ್ಲಿ ಮೂರ್ತಿಗೆ ಮಾಲಾರ್ಪಣೆ, ಕಪಲೇಶ್ವರ ಮೆಲ್ಸೆತುವೆ ಮಾರ್ಗವಾಗಿ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿಗೆ ಮಾಲಾರ್ಪಣೆ, ಮಹಾತ್ಮಾ ಪುಲೆ ಮಾರ್ಗವಾಗಿ ಗೋವಾವೆಸ್ ದಲ್ಲಿರುವ ಜಗಜ್ಯೋತಿ ಬಸವೇಶ್ವರ ಮೂರ್ತಿಗೆ ಮಾಲಾರ್ಪಣೆ ನಡೆಸಿ ಸದಾಶಿವ ನಗರದಲ್ಲಿರುವ ಮಹಾನಗರ ಕಛೇರಿಯವರೆಗೆ ಬೈಕ್ ರ್ಯಾಲಿ ನಡೆಯಲಿದೆ ಎಂದು ಬಿಜೆಪಿ ಪ್ರಕಟಣೆ ತಿಳಿಸಿದೆ.

## ವಿಶೇಷ ಅನುದಾನ ಹಿಂಪಡೆದು, ತೆರಿಗೆ ಹಂಚಿಕೆಯಲ್ಲಿ ರಾಜ್ಯಕ್ಕೆ ಅನ್ಯಾಯ ಮಾಡುತ್ತಿದ್ದಾರೆ ನಿರ್ಮಲಾ ಸೀತಾರಾಮನ್: ಸಚಿವ ಕೃಷ್ಣ ಬೈರೇಗೌಡ

ಬೆಂಗಳೂರು: 2020 ರ ಜನವರಿ 30 ರಂದು ಸಂಸತ್ತಿನಲ್ಲಿ ಮಂಡಿಸಿದ ಕ್ರಿಯಾ ವರದಿಯಲ್ಲಿ 5,495 ಕೋಟಿ ರೂಪಾಯಿಗಳ ವಿಶೇಷ ಅನುದಾನದ ಶಿಫಾರಸನ್ನು ಮರುಪರಿಶೀಲಿಸುವಂತೆ 15 ನೇ ಹಣಕಾಸು ಆಯೋಗಕ್ಕೆ ಸೂಚಿಸಿದ್ದಾರೆ ಕೇಂದ್ರ ಹಣಕಾಸು ಸಚಿವೆ ನಿರಾಮಲಾ ಸೀತಾರಾಮನ್ ಅವರು ಸೂಚಿಸಿದ್ದು, ಈ ಮೂಲಕ ರಾಜ್ಯಕ್ಕೆ ಅನ್ಯಾಯ ಮಾಡುತ್ತಿದ್ದಾರೆಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಸೋಮವಾರ ಆರೋಪಿಸಿದ್ದಾರೆ.

ವಿಕಾಸೌಧದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾವುದೇ ರಾಜ್ಯಕ್ಕೆ 2019– 20ರಲ್ಲಿ ಕೊಟ್ಟಿದ್ದಕ್ಕಿಂತ ಕಡಿಮೆ ಅನುದಾನವನ್ನು ಕೊಡುವಂತಿಲ್ಲ ಎಂದು ಹಣಕಾಸು ಆಯೋಗವೇ ಹೇಳಿದೆ. 2019–20ರಲ್ಲಿ ರಾಜ್ಯಕ್ಕೆ ಕೇಂದ್ರದಿಂದ 36675 ಕೋಟಿ ರು. ತೆರಿಗೆ ಪಾಲು ಬಂದಿತ್ತು. 2020–21ಕ್ಕೆ ಇದು 31,180 ಕೋಟಿ ರು.ಗೆ ಕುಸಿದಿತ್ತು. ಹೀಗಾಗಿ ರಾಜ್ಯಕ್ಕೆ ಆಗಿರುವ 5495 ಕೋಟಿ ರು. ನಷ್ಟವನ್ನು ಕೇಂದ್ರ ಸರ್ಕಾರ ನೀಡಬೇಕು ಎಂದು ಆಯೋಗ ವಿಶೇಷ ಅನುದಾನಕ್ಕೆ ಶಿಫಾರಸು ಮಾಡಿದೆ. ಆದರೆ, ಈ ಹಣ ಈವರೆಗೆ ರಾಜ್ಯಕ್ಕೆ ಬಂದಿಲ್ಲ. 2021–26ನೇ ಸಾಲಿನಲ್ಲಿ



ಸುಮಾರು 6,000 ಕೋಟಿ ರು. ನೀಡಬೇಕೆಂದು ಶಿಫಾರಸು ಮಾಡಲಾಗಿದೆ. ಒಟ್ಟಾರೆ, 11,495 ಕೋಟಿ ರು. ಹಣ ರಾಜ್ಯಕ್ಕೆ ಬರಬೇಕಿದೆ. ಆದರೆ, ನಿರ್ಮಲಾ ಅಂತಹ ಶಿಫಾರಸೇ ಎಂದು ಮರೆಮಾಚುತ್ತಿದ್ದಾರೆ. ಆಯೋಗ ಮಾಡಿದ್ದ ಶಿಫಾರಸನ್ನು ಹಿಂಪಡೆಯುವಂತೆ ಅವರೇ ಪತ್ರ ಬರೆದು ಕರ್ನಾಟಕದ ಜನರಿಗೆ ಅನ್ಯಾಯ ಮಾಡಿದ್ದಾರೆಂದು ಆರೋಪಿಸಿದ್ದಾರೆ.

ಕರ್ನಾಟದಿಂದ ರಾಜ್ಯ ಸಭೆಗೆ ಆಯ್ಕೆಯಾಗಿರುವ ನಿರ್ಮಲಾ ಅವರಿಂದಲೇ ರಾಜ್ಯಕ್ಕೆ ತೆರಿಗೆ ಹಂಚಿಕೆ ಅನುದಾನದಲ್ಲಿ ಅನ್ಯಾಯವಾಗುತ್ತಿದೆ. ಮಾ.31ಕ್ಕೆ ಅವರು ಮೈಸೂರಿಗೆ ಆಗಮಿಸುತ್ತಿದ್ದು, ಈ ಬಗ್ಗೆ ಬಹಿರಂಗ ಚರ್ಚೆಗೆ ಸಿದ್ದರಿದ್ದಾರೆಯೇ ಹೇಳಲಿ. ಹಣಕಾಸು ಆಯೋಗದ 2021ನೇ ವರ್ಷದ ಅಂತಿಮ ವರದಿಯ 36ನೇ ಪುಟದಲ್ಲಿ ಕರ್ನಾಟಕಕ್ಕೆ ಆಗಿರುವ ನಷ್ಟ ತುಂಬಿಕೊಡಬೇಕು ಎಂದು ಬರೆದಿರುವುದು ಸುಳ್ಳೇ ಎಂದು ಅವರು ಉತ್ತರಿಸಲಿ ಎಂದು ಸಾಕ್ಷಿ ಸಮೇತ ತಿರುಗೇಟು ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ತೆರಿಗೆ ಪಾಲಿನ ಅನ್ಯಾಯದ ಬಗ್ಗೆ ಪತ್ರ ಬರೆದರೆ ಬಿಜೆಪಿಗರು ಸುಳ್ಳು ಎನ್ನುತ್ತಾರೆ. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ 20200 ಸೆ.17ರಂದು ಕೇಂದ್ರ ಹಣಕಾಸು ಸಚಿವರನ್ನು ಭೇಟಿಯಾಗಿ ವಿಶೇಷ ಅನುದಾನ ಬಿಡುಗಡೆ ಮಾಡಲು ಕೋರಿದ್ದರು. ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದಾಗಲೂ ಸೀತಾರಾಮನ್ ಅವರಿಗೆ ಪತ್ರ ಬರೆದಿದ್ದರು. ಹಾಗಾದರೆ ಅವರು ಸಹ ಸುಳ್ಳು ಹೇಳಿದ್ದರಾ ಎಂದು ಸಚಿವ ಕುಟುಕಿದರು.

ಸಚಿವೆ ನಿರ್ಮಲಾ ಒಂದೆಡೆ ಹಣಕಾಸು ಆಯೋಗದ ಒಂದೇ ಒಂದು ಶಿಫಾರಸ್ಸನ್ನು ಸಹ ನಾವು ತಿದ್ದಲು ಹೋಗುವುದಿಲ್ಲ ಎನ್ನುತ್ತಾರೆ. ಮತ್ತೊಂದೆಡೆ ರಾಜ್ಯಗಳಿಗೆ ನೀಡುವ ವಿಶೇಷ ಅನುದಾನವನ್ನು ಹಿಂಪಡೆಯುವಂತೆ ಹಣಕಾಸು ಆಯೋಗಕ್ಕೆ ಮನವಿ ಮಾಡಲಾಗಿದೆ ಎಂದು ಲೋಕಸಭೆಯಲ್ಲೇ ಉತ್ತರ ನೀಡುತ್ತಾರೆ. ಹಾಗಾದರೆ ರಾಜ್ಯದ ಪಾಲಿನ ಹಣವನ್ನು ತಡೆಹಿಡಿಯಲು ಮಾತ್ರ ಇವರ ಕಾನೂನುಗಳು ಇರುವುದಾ? ಎಂದು ಆಕ್ರೋಶ ಹೊರಹಾಕಿದರು.

## ಮಂಡ್ಯದಿಂದ ಕುಮಾರಸ್ವಾಮಿ ಸ್ಪರ್ಧೆ ಅಂತಿಮ




ಬೆಂಗಳೂರು: ಮಂಡ್ಯ ಲೋಕಸಭಾ ಕ್ಷೇತ್ರದಿಂದ ಹೆಚ್.ಡಿ. ಕುಮಾರಸ್ವಾಮಿ ಸ್ಪರ್ಧೆ ಮಾಡುವುದು ಬಹುತೇಕ ಅಂತಿಮವಾಗಿದ್ದು, ಅಧಿಕೃತ ಘೋಷಣೆ ಬಾಕಿಯಿದೆ.

ಮಾಧ್ಯಮಗಳ ಜತೆ ಮಾತನಾಡಿದ ಕುಮಾರಸ್ವಾಮಿ ಸಂಜೆ ಮಂಡ್ಯ ಭಾಗದ ಜೆಡಿಎಸ್ ನಾಯಕರ ಸಭೆಯನ್ನು ಕರೆಯುತ್ತೇನೆ. ಈ ಸಭೆಯ ಬಳಿಕ ಅಂತಿಮವಾಗಿ ಅಭ್ಯರ್ಥಿಯ ಹೆಸರನ್ನು ಆಯ್ಕೆ ಮಾಡಲಾಗುತ್ತದೆ ಎಂದು ತಿಳಿಸಿದರು.

ಜೆಡಿಎಸ್‌ನ ಹೃದಯ ಭಾಗ ಮಂಡ್ಯ. ಕಳೆದ ಚುನಾವಣೆ ನಮಗೆ ನೈತಿಕ ಸೋಲು ಅಲ್ಲ. ಈ ಚುನಾವಣೆ ಮೂಲಕ ಜೆಡಿಎಸ್ ಮುಗಿಸುತ್ತೇವೆ ಎನ್ನುವ ದುರಹಂಕಾರದ ಮಾತಿಗೆ ಚುನಾವಣೆಯಲ್ಲಿ ಉತ್ತರ ಕೊಡುತ್ತೇವೆ ಎಂದರು. ಬದುಕಿರುವವರೆಗೂ ನಾವು ರಾಮನಗರ ಜಿಲ್ಲೆಯ ಅಭಿವೃದ್ಧಿ ಕೈ ಬಿಡುವುದಿಲ್ಲ. ರಾಮನಗರ, ಚನ್ನಪಟ್ಟಣ ಜನತೆಗೆ ಮನವಿ ಮಾಡುತ್ತೇನೆ. ಈ ಪಕ್ಷ ಉಳಿಸಲು 3 ಬಾರಿ ಹೃದಯ ಚಿಕಿತ್ಸೆ, ಎರಡು ಬಾರಿ ಮೆದುಳು ಚಿಕಿತ್ಸೆ ನಡೆದಿದೆ. ಇಷ್ಟು ಆದರೂ ಬದುಕಿದರೆ ನಾಡಿಗೆ ಏನೋ ಸೇವೆ ಬೇಕು ಅಂತ ದೇವರು ಬದುಕಿಸಿದ್ದಾನೆ. ಈ ಪಕ್ಷ ಉಳಿಸೋದು ನಿಮ್ಮ ಕೈಯಲ್ಲಿ ಇದೆ. ಇದು ರೈತರ ಪಕ್ಷ ಎಂದು ಹೇಳಿದರು. ಬಿಜೆಪಿಯವರು ಮೂರು ಕ್ಷೇತ್ರಗಳನ್ನು ನಮಗೆ ಬಿಟ್ಟು ಕೊಟ್ಟಿದ್ದಾರೆ. ಹಾಸನ ಅಭ್ಯರ್ಥಿಯ ಬಗ್ಗೆ ನಮ್ಮ ವರಿಷ್ಠರಾದ ದೇವೇಗೌಡರು ತೀರ್ಮಾನ ತೆಗೆದುಕೊಂಡಿದ್ದಾರೆ. ಕೋಲಾರದಲ್ಲಿ ಮೂವರ ಹೆಸರು ಇದೆ. ಇದರ ಜೊತೆ ಬಿಜೆಪಿಯ ಹಾಲಿ ಸಂಸದ ಮುನಿಸ್ವಾಮಿ ಅವರು ಕೆಲವರ ಬಗ್ಗೆ ಹೇಳಿದ್ದಾರೆ. ಹೀಗಾಗಿ ಪಕ್ಷದ ಸಭೆ ನಡೆಸಿ ಹೆಸರನ್ನು ಅಂತಿಮಗೊಳಿಸುತ್ತೇವೆ ಎಂದು ತಿಳಿಸಿದರು.

## ಧರ್ಮಯುದ್ಧಕ್ಕೂ ಮುನ್ನ ಧರ್ಮಸ್ಥಳಕ್ಕೆ ಬರಲೇ ಬೇಕಲ್ವಾ: ಡಿಕೆಶಿ



ಬೆಂಗಳೂರು: ಯಾವಾಗಲೂ ಧರ್ಮಯುದ್ಧಕ್ಕೆ ಮುನ್ನ ಧರ್ಮಸ್ಥಳಕ್ಕೆ ಭೇಟಿ ನೀಡಿ ಮಂಜುನಾಥನ ದರುಶನ ಪಡೆಯುತ್ತೇ. ಈ ಬಾರಿ ಕೂಡ ಮಂಜುನಾಥನ ಆಶೀರ್ವಾದ ಕೋರಿ ಧರ್ಮಸ್ಥಳಕ್ಕೆ ಆಗಮಿಸಿದ್ದೇನೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ನನ್ನ ಜೀವನದಲ್ಲಿ ಮಂಜುನಾಥ, ಅಜ್ಜಯ್ಯ,ಈಶ್ವರ, ಗಂಗಾಧರ ಎಲ್ಲ ದೇವರುಗಳು ಅತಿಮುಖ್ಯರು, ಅವರ ಆಶೀರ್ವಾದ ನನ್ನ ಮೇಲಿದೆ. ಈ ಧರ್ಮಯುದ್ಧಕ್ಕೂ ಮುನ್ನ ದೇವರ ಸನ್ನಿಧಿಗೆ ಬಂದಿದ್ದೇನೆ. ಇಲ್ಲಿ ಬಂದು ಆಶೀರ್ವಾದ ಪಡೆದರೆ ಸಾಕಷ್ಟು ಸಕಾರಾತ್ಮಕ ಶಕ್ತಿ ನನ್ನೊಳಗೆ ಹರಿಯುತ್ತದೆ ಎಂದು ಹೇಳಿದ್ದಾರೆ.

ಎಲ್ಲಿಗೆ ಬಂದರೂ ಕಾಂಗ್ರೆಸ್ ಗೆಲ್ಲಲಿ ಎಂದು ಪೂಜೆ ಮಾಡುವವರೂ ಇದ್ದೇ ಇರುತ್ತಾರೆ. ಮಂಜುನಾಥ ನನಗೆ ನುಡಿದಂತೆ ನಡೆದುಕೊಳ್ಳುವ ಸ್ಥೈರ್ಯ ನೀಡಲಿ ಎಂದು ಹೇಳಿದ್ದಾರೆ.

## ಗ್ಯಾರಂಟಿ ಯೋಜನೆ ವೈಯಕ್ತಿಕ ಘೋಷಣೆಯಲ್ಲ, ಪಕ್ಷಕ್ಕೆ ಸೇರಿದ್ದು: ಹೈಕೋರ್ಟ್‌ಗೆ ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಪಕ್ಷದ ಪ್ರಣಾಳಿಕೆಯಲ್ಲಿ ಘೋಷಿಸಲಾದ ಗ್ಯಾರಂಟಿ ಯೋಜನೆಗಳನ್ನು ಸಿದ್ದರಾಮಯ್ಯ ವೈಯಕ್ತಿಕವಾಗಿ ಘೋಷಿಸಿ ಚುನಾವಣೆಯಲ್ಲಿ ಅಕ್ರಮ ಎಸಗಿ ಜಯಗಳಿಸಿದ್ದಾರೆ ಎಂಬ ಆರೋಪ ಸಮರ್ಥನೀಯವಲ್ಲ ಎಂದು ಹೈಕೋರ್ಟ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಸಿದ್ದರಾಮಯ್ಯ ಆಯ್ಕೆಯನ್ನು ಅಸಿಂಧುಗೊಳಿಸಬೇಕು ಎಂದು ಕೋರಿ ಮೈಸೂರಿನ ವರುಣಾ ಹೋಬಳಿಯ ಕೂಡನಹಳ್ಳಿ ನಿವಾಸಿ ಕೆ ಎಂ ಶಂಕರ್ ಸಲ್ಲಿಸಿರುವ ಚುನಾವಣಾ ಅರ್ಜಿಯನ್ನು ನ್ಯಾಯಮೂರ್ತಿ ಎಸ್ ಸುನಿಲ್



ದತ್ ಯಾದವ್ ಅವರ ನೇತೃತ್ವದ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಸಿದ್ದರಾಮಯ್ಯ ಪರ ಹಿರಿಯ ವಕೀಲ ಪ್ರೊ. ಕೆ ರವಿವರ್ಮ ಕುಮಾರ್ ವಾದ ಮಂಡಿಸಿದರು. ಅರ್ಜಿದಾರರ ಆರೋಪವನ್ನು ಗಮನಿಸಿದರೆ ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ ಹಾಕುವ ರೀತಿಯಂತಿದೆ. 2023ರ ವಿಧಾನಸಭಾ ಚುನಾವಣೆಯಲ್ಲಿ 5 ಗ್ಯಾರಂಟಿ ಯೋಜನೆಗಳನ್ನು ಪಕ್ಷದ ಪ್ರಣಾಳಿಕೆಯಲ್ಲಿ ಘೋಷಿಸಿ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲೂ ಪ್ರಚಾರ ಮಾಡಲಾಗಿದೆ. ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರದ ಹಣವನ್ನು ಬಳಸಲಾಗುತ್ತಿದೆಯೇ ಹೊರತು ಸಿದ್ದರಾಮಯ್ಯವರ ವೈಯಕ್ತಿಕ ಆದಾಯವನ್ನಲ್ಲ ಎಂದು ಪೀಠಕ್ಕೆ ಸ್ಪಷ್ಟಪಡಿಸಿದರು.


ಪ್ರಕರಣಕ್ಕೆ ಸಂಬಂಧಿಸಿದಂತೆ ಅರ್ಜಿದಾರರ ಪರ ವಕೀಲರು ಕೆಲವು ದಾಖಲೆಗಳನ್ನು ಸಲ್ಲಿಸಿದ್ದು, ಇದಕ್ಕೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಸಲ್ಲಿಸಿ" ಎಂದು ಪ್ರತಿವಾದಿಗಳ ಪರ ವಕೀಲರಿಗೆ 15 ದಿನಗಳ ಕಾಲಾವಕಾಶ ನೀಡಿದ ಪೀಠ ವಿಚಾರಣೆ ಮುಂದೂಡಿದೆ.



## ಪಾಕ್ ನೌಕಾ ವಾಯುನೆಲೆ ಮೇಲೆ ಬಲೂಚ್ ಉಗ್ರರ ದಾಳಿ


ಬಲೂಚಿಸ್ತಾನ: ಶಸ್ತ್ರ ಸಜ್ಜಿತ ಬಲೂಚ್ ಉಗ್ರಗಾಮಿಗಳು ಪಾಕಿಸ್ತಾನದ ಪ್ರಕ್ಷುಬ್ಧ ಬಲೂಚಿಸ್ತಾನ್ ಪ್ರಾಂತ್ಯದ ಪ್ರಮುಖ ನೌಕಾ ವಾಯುನೆಲೆಗಳಲ್ಲಿ ಒಂದನ್ನು ಒಳನುಸುಳಲು ಪ್ರಯತ್ನಿಸಿದಾಗ ಭದ್ರತಾ ಪಡೆಗಳು ದಾಳಿಯನ್ನು ವಿಫಲಗೊಳಿಸಿದ್ದಾರೆ. ಘರ್ಷಣೆಯಲ್ಲಿ ಕನಿಷ್ಠ ಆರು ಮಂದಿ ಉಗ್ರರು ಮೃತಪಟ್ಟಿದ್ದಾರೆ.

## ಚುನಾವಣಾ ಅಖಾಡಕ್ಕೆ ಎಂಟ್ರಿಕೊಟ್ಟ ವೀರಪ್ಪನ್ ಪುತ್ರಿ



ಬೆಂಗಳೂರು: ದೇಶದಲ್ಲಿ ಲೋಕಸಭೆ ಚುನಾವಣೆಯ ಕಾವು ರಂಗೇರಿದೆ. ರಾಜಕೀಯ ಪಕ್ಷಗಳು ತಮ್ಮ ಹುರಿಯಾಳುಗಳನ್ನು ಕಣಕ್ಕಿಳಿಸುವ ತಂತ್ರಗಳು ಬಹುತೇಕ ಪೂರ್ಣಗೊಳ್ಳುತ್ತಿದ್ದು, ಇನ್ನೇನು ನಾಮಿನೇಷನ್ ಆರ್ಭಟ ಜೋರಾಗಲಿದೆ. ವಿಶೇಷ ಅಂದರೆ ತಮಿಳುನಾಡು ಲೋಕಸಭೆ ಕ್ಷೇತ್ರಕ್ಕೆ ಘೋಷಣೆ ಮಾಡಿರುವ ಒಂದು ಕ್ಷೇತ್ರ ಭಾರೀ ಸುದ್ದಿಯಲ್ಲಿದೆ.

ಅದಕ್ಕೆ ಕಾರಣ ನಟೋರಿಯಸ್ ಅಡವಿಗಳ್ಳ ವೀರಪ್ಪನ್ ಪುತ್ರಿ ವಿದ್ಯಾ ರಾಣಿ ಚುನಾವಣಾ ಕಣಕ್ಕಿಳಿದಿರೋದು. ಕೃಷ್ಣಗಿರಿ ಲೋಕಸಭಾ ಕ್ಷೇತ್ರದಿಂದ ತಮಿಳುನಾಡು ನ್ಯಾಷನಲಿಸ್ಟ್ ಪಾರ್ಟಿ ಪಕ್ಷದ ಅಭ್ಯರ್ಥಿಯಾಗಿ ವಿದ್ಯಾ ರಾಣಿ ಅದೃಷ್ಟದ ಪರೀಕ್ಷೆಗಿಳಿದಿದ್ದಾರೆ. ನ್ಯಾಯವಾದಿಯಾಗಿರುವ ವಿದ್ಯಾ ರಾಣಿ 2020, ಜುಲೈನಲ್ಲಿ ಬಿಜೆಪಿ ಪಕ್ಷ ಸೇರಿದ್ದರು. ಬಳಿಕ ಅವರಿಗೆ ರಾಜ್ಯ ಬಿಜೆಪಿ ಯುವ ಘಟಕದ ಉಪಾಧ್ಯಕ್ಷೆ ಸ್ಥಾನವನ್ನೂ ನೀಡಲಾಗಿತ್ತು. ಇತ್ತೀಚೆಗೆ ನಟ–ನಿರ್ದೇಶಕ ಸೀಮನ್ ನೇತೃತ್ವದ ಎನ್ಟಿಕೆ ಪಕ್ಷವನ್ನು ಸೇರಿದ್ದಾರೆ. ಎನ್ಟಿಕೆ ಪಕ್ಷವು ತಮಿಳುನಾಡು ಮತ್ತು ಪುದುಚೆರಿ ಸೇರಿ ಒಟ್ಟು 40 ಅಭ್ಯರ್ಥಿಗಳನ್ನು ಚುನಾವಣಾ ಕಣಕ್ಕೆ ಇಳಿಸಿದೆ.



## ಕೇಜ್ರಿವಾಲ್ ಬಂಧನ ಖಂಡಿಸಿ ದೆಹಲಿಯಲ್ಲಿ ಎಎಪಿ ಪ್ರತಿಭಟನೆ

ನವದೆಹಲಿ: ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಬಂಧನ ಖಂಡಿಸಿ ಎಎಪಿ ಮುಖಂಡರು ಮತ್ತು ಕಾರ್ಯಕರ್ತರು ಮಂಗಳವಾರ ರಾಷ್ಟ್ರ ರಾಜಧಾನಿಯಲ್ಲಿ ಬೀದಿಗಿಳಿದಿದ್ದು, ಪಟೇಲ್ ಚೌಕ್‌ನ ಲೋಕ ಕಲ್ಯಾಣ್ ಮಾರ್ಗ್‌ದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರ ನಿವಾಸಕ್ಕೆ ಮುತ್ತಿಗೆ ಹಾಕಲು ಯತ್ನಿಸಿದರು. ದೆಹಲಿ ಪೊಲೀಸರು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದಿದ್ದಾರೆ.

ಈ ವೇಳೆ ಮಾತನಾಡಿದ ಆಮ್ ಆದ್ಮಿ ಪಕ್ಷದ (ಎಎಪಿ) ದೆಹಲಿ ಘಟಕದ ಸಂಚಾಲಕ ಗೋಪಾಲ್ ರೈ ಅವರು, ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ನಗರದಾದ್ಯಂತ ಸೆಕ್ಷನ್ 144 ಜಾರಿ ಮಾಡಿದೆ. ದೆಹಲಿಯನ್ನು "ಪೊಲೀಸ್ ರಾಜ್ಯವಾಗಿ" ಮಾರ್ಪಡಿಸಿದೆ ಎಂದು ಆರೋಪಿಸಿದರು.

ಆಪ್ ಕಾರ್ಯಕಾರ್ತರು ಇಂಕ್ವಿಲಾಬ್ ಜಿಂದಾಬಾದ್ ಎಂಬ ಘೋಷಣೆಗಳನ್ನು ಕೂಗುತ್ತ ಕೇಂದ್ರದ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಆಪ್ ಹಿರಿಯ ನಾಯಕ ಸೋಮನಾಥ್ ಭಾರ್ತಿ, ದೆಹಲಿ ಅಸೆಂಬ್ಲಿ ಉಪ ಸ್ಪೀಕರ್ ರಾಖಿ ಬಿರ್ಲಾ ಮತ್ತು ಪಂಜಾಬ್ ಸಚಿವ ಹರ್ಜೋತ್ ಸಿಂಗ್ ಬೇನ್ಸ್ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪೊಲೀಸ್ ಬಲ ಪ್ರಯೋಗ ಮಾಡುವ ಮೂಲಕ ನಮ್ಮ ಪ್ರತಿಭಟನೆ ತಡೆಯಲು ಸಾಧ್ಯವಿಲ್ಲ. ನಮ್ಮ ಪಕ್ಷದ ಮಹಿಳಾ ಕಾರ್ಯಕರ್ತರನ್ನು ಎಳೆದುಕೊಂಡು ಹೋಗಿ ಬಂಧಿಸಲಾಗಿದೆ ಎಂದು ಗೋಪಾಲ್ ರೈ ಹೇಳಿದ್ದಾರೆ.

"ದೆಹಲಿ ಪೊಲೀಸರು ಯಾವುದೇ ಕಾರಣವಿಲ್ಲದೆ ಡೆಪ್ಯೂಟಿ ಸ್ಪೀಕರ್ ರಾಖಿ ಬಿರ್ಲಾ ಮತ್ತು ಎಎಪಿಯ ಅನೇಕ ಕಾರ್ಯಕರ್ತರನ್ನು ಮತ್ತು ಅರವಿಂದ್ ಕೇಜ್ರಿವಾಲ್ ಬೆಂಬಲಿಗರನ್ನು ವಶಕ್ಕೆ ಪಡೆದಿದ್ದಾರೆ. ದೆಹಲಿ ಪೊಲೀಸರು ಶಾಂತಿಯುತವಾಗಿ ಪ್ರತಿಭಟಿಸುತ್ತಿರುವ ಎಎಪಿ ಬೆಂಬಲಿಗರನ್ನು ಬಂಧಿಸುತ್ತಿರುವುದು ಆಘಾತಕಾರಿ" ಎಂದು ಸೋಮನಾಥ್ ಭಾರ್ತಿ ಪೋಸ್ಟ್ ಮಾಡಿದ್ದಾರೆ.

ಏತನ್ಮಧ್ಯೆ, ಮುಖ್ಯಮಂತ್ರಿ ಕೇಜ್ರಿವಾಲ್ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿಯ ದೆಹಲಿ ಘಟಕದ ಮುಖಂಡರು ಮತ್ತು ಕಾರ್ಯಕರ್ತರು ಮಂಗಳವಾರ ಪ್ರತಿಭಟನೆ ನಡೆಸಿದರು.

## ಈ ಚುನಾವಣೆ ಬೆಳಗಾವಿ ಜನತೆಯ ಸ್ವಾಭಿಮಾನದ ಪ್ರಶ್ನೆ; ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಳಗಾವಿ: ಈ ಚುನಾವಣೆ ಬೆಳಗಾವಿ ಜಿಲ್ಲೆಯ ಜನರ ಸ್ವಾಭಿಮಾನದ ಪ್ರಶ್ನೆ. ಇದು ನಮ್ಮ ನೆಲ ಜಲದ ಹೋರಾಟ ಹಾಗೂ ಅಳಿವು ಉಳಿವಿನ ಪ್ರಶ್ನೆಯಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಂಗಳವಾರ ಮಾತನಾಡಿದ ಸಚಿವರು, ಬೆಳಗಾವಿ ಜನತೆ ಸ್ವಾಭಿಮಾನಿಗಳು, ಈ ಕ್ಷೇತ್ರದ ಮನೆ ಮಗ ಮೃಣಾಲ್ ಹೆಬ್ಬಾಳ್ಕರ್‌ಗೆ ಆಶೀರ್ವಾದ ಮಾಡಲಿದ್ದಾರೆ ಎಂದು ಹೇಳಿದರು.

ಸಾಮಾನ್ಯವಾಗಿ ಮಾತನಾಡುವಂತೆ ರಾಜಕೀಯ ಅಂದುಕೊಂಡಷ್ಟು ಸುಲಭವಲ್ಲ. 24 ಗಂಟೆ ಜನರ ಕಷ್ಟ ನಷ್ಟಗಳಿಗೆ ಸ್ಪಂದಿಸಬೇಕಾಗುತ್ತದೆ. ನಮ್ಮ ಮಕ್ಕಳು ವಿದೇಶದಲ್ಲಿ ಓದಿದ್ದಾರೆ. ವಿದೇಶದಲ್ಲೇ ನೌಕರಿ ಪಡೆದು, ಅಲ್ಲೆ ಉಳಿದುಕೊಳ್ಳಬಹುದಿತ್ತು. ಆದರೆ ನಮ್ಮ ದಾರಿಯಲ್ಲೇ ಬಂದು ಸಮಾಜ ಸೇವೆ ಮಾಡುತ್ತಿದ್ದಾರೆ ಎಂದು ಹೇಳಿದರು.

ಬೆಳಗಾವಿ ಕ್ಷೇತ್ರದ ಅಭ್ಯರ್ಥಿ, ನನ್ನ ಮಗ ಮೃಣಾಲ್ ಹೆಬ್ಬಾಳ್ಕರ್ ಹಾಗೂ ಸಚಿವ ಸತೀಶ್ ಜಾರಕಿಹೊಳಿ ಅವರ ಪುತ್ರಿ ಪ್ರಿಯಾಂಕಾ ಜಾರಕಿಹೊಳಿ ಇಬ್ಬರು ವಿದ್ಯಾವಂತರು. ಬುದ್ಧಿವಂತರಿದ್ದಾರೆ, ಪ್ರಭುದ್ಧರಿದ್ದಾರೆ ಎಂದು ಹೇಳಿದರು.

ಇಬ್ಬರಿಗೂ ಇನ್ನೂ ಚಿಕ್ಕ ವಯಸ್ಸು ಎನ್ನುವ ವಿರೋಧ ಪಕ್ಷಗಳ ಆಕ್ಷೇಪದ ಕುರಿತು ಸುದ್ದಿಗಾರರಿಗೆ ಉತ್ತರಿಸಿದ ಸಚಿವೆ



ಲಕ್ಷ್ಮೀ ಹೆಬ್ಬಾಳ್ಕರ್, ದೇಶದ ಗಡಿ ಕಾಯುವ ಸೈನಿಕರನ್ನು ಆಯ್ಕೆ ಮಾಡುವಾಗ 16ನೇ ವಯಸ್ಸನ್ನು ನಿಗದಿಪಡಿಸಲಾಗಿದೆ. ಅಲ್ಲದೆ, 18ನೇ ವಯಸ್ಸಿಗೆ ಮತದಾನದ ಹಕ್ಕನ್ನು ನೀಡಲಾಗಿದೆ. ನನ್ನ ಮಗನಿಗೆ 31 ವರ್ಷ, ಪ್ರಿಯಾಂಕಾಗೂ 27 ವರ್ಷ ವಯಸ್ಸಾಗಿದೆ. ಚುನಾವಣೆಗೆ ನಿಲ್ಲಲು ಇಬ್ಬರು ಅರ್ಹರು ಎಂದರು.

**ಅಭ್ಯರ್ಥಿ ವಿರುದ್ಧ ಬಿಜೆಪಿಯಲ್ಲೇ ಅಪಸ್ವರ:** ನಾವೆಲ್ಲಾ ಒಗ್ಗಟ್ಟಾಗಿ ಚುನಾವಣೆ ಎದುರಿಸುತ್ತಿದ್ದೇವೆ. ಅಪಸ್ವರ ಇರುವುದೇ ಬಿಜೆಪಿಯಲ್ಲಿ. ಈ ಮಾತನ್ನ ಸ್ವತಃ ಬಿಜೆಪಿಯವರೇ ಹೇಳುತ್ತಿದ್ದಾರೆ. ಇದು ಸ್ವಾಭಿಮಾನದ ಪ್ರಶ್ನೆ, ಚುನಾವಣೆಯಲ್ಲಿ ಜನರೇ ತಕ್ಕ ಉತ್ತರ ನೀಡಲಿದ್ದಾರೆ ಎಂದು ಸಚಿವರು ಹೇಳಿದರು.

**ನಾನು ಪಂಚಮಸಾಲಿ ಹೆಣ್ಣುಮಗಳು:** ಲಕ್ಷ್ಮೀ ಹೆಬ್ಬಾಳ್ಕರ್ ಕುಟುಂಬದವರು ಪಂಚಮಸಾಲಿ ಸಮುದಾಯವರಲ್ಲ ಎಂದು ಮಾಜಿ ಸಚಿವ ಮುರುಗೇಶ್ ನಿರಾಣಿ ಆರೋಪಕ್ಕೆ ಉತ್ತರಿಸಿದ ಸಚಿವರು, ನನ್ನ ಮೈಯಲ್ಲಿ ಸ್ವಾಭಿಮಾನಿ ಸಂಕೇತ ಕಿತ್ತೂರು ರಾಣಿ ಚೆನ್ನಮ್ಮನ ರಕ್ತ ಹರಿತಾ ಇದೆ. ನನ್ನ ಮಗನ ಮೈಯಲ್ಲಿ ಪಂಚಮಸಾಲಿ ರಕ್ತ ಹರೀತಿದೆ. ನಾವು ಬಸವಣ್ಣನ ತತ್ವವನ್ನು ಪಾಲಿಸಿಕೊಂಡು ಬಂದಿದ್ದೇವೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನದ ಆಶಯದಂತೆ ನಡೆಯುತ್ತಿದ್ದೇವೆ. ಪಂಚಮಸಾಲಿ ಹೋರಾಟದಲ್ಲಿ ನಾನು ಮತ್ತು ನನ್ನ ಕುಟುಂಬದ ಸದಸ್ಯರು ಸಕ್ರಿಯವಾಗಿ ಪಾಲ್ಗೊಂಡಿದ್ದೇವೆ ಎಂದು ತಿರುಗೇಟು ನೀಡಿದರು.

## ಬಿಜೆಪಿಯಿಂದ 'ಸುರಪುರ ಉಪ ಚುನಾವಣೆ'ಗೆ 'ರಾಜುಗೌಡ'ಗೆ ಟಿಕೆಟ್ ಘೋಷಣೆ

ಬೆಂಗಳೂರು: ಲೋಕಸಭಾ ಚುನಾವಣೆಯ ಜೊತೆ ಜೊತೆಗೆ ವಿಧಾನಸಭಾ ಉಚ ಚುನಾವಣೆಯನ್ನು ಚುನಾವಣಾ ಆಯೋಗವು ಘೋಷಣೆ ಮಾಡಿತ್ತು. ಹೀಗೆ ಘೋಷಣೆ ಮಾಡಲಾಗಿದ್ದಂತ ಸುರಪುರ ವಿಧಾನಸಭಾ ಉಪ ಚುನಾವಣೆಗೆ ಬಿಜೆಪಿಯಿಂದ ರಾಜುಗೌಡ ನಾಯಕ್ ಗೆ ಟಿಕೆಟ್ ಘೋಷಣೆ ಮಾಡಲಾಗಿದೆ.

ಶಾಸಕ ರಾಜಾವೆಂಕಟಪ್ಪ ನಾಯಕ್ ನಿಧನದಿಂದ ತೆರವಾಗಿದ್ದಂತ ಯಾದಗಿರಿ ಜಿಲ್ಲೆಯ ಸುರಪುರ ವಿಧಾನಸಭಾ ಕ್ಷೇತ್ರಕ್ಕೆ ಚುನಾವಣಾ ಆಯೋಗದಿಂದ ಉಪ ಚುನಾವಣೆ



ಘೋಷಣೆ ಮಾಡಲಾಗಿತ್ತು. ಮೇ.7ರಂದು ಸುರಪುರ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಮತದಾನ ನಡೆಯಲಿದೆ. ಅಂದೇ ಮೊದಲ ಹಂತದ ಲೋಕಸಭಾ ಚುನಾವಣೆಗೆ ಮತದಾನ ಕೂಡ ನಡೆಯಲಿದೆ.

ಈಗಾಗಲೇ ಕಾಂಗ್ರೆಸ್ ಪಕ್ಷದಿಂದ ಸುರಪುರ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಗೆ ದಿವಂಗತ ರಾಜಾ ವೆಂಕಟಪ್ಪ ನಾಯಕ್ ಅವರ ಪುತ್ರನಿಗೆ ಟಿಕೆಟ್ ಘೋಷಣೆ ಮಾಡಲಾಗಿತ್ತು. ಮಂಗಳವಾರ ಬಿಜೆಪಿಯಿಂದ ರಾಜುಗೌಡ ನಾಯಕ್ ಅವರಿಗೆ ಟಿಕೆಟ್ ನೀಡಲಾಗಿದೆ. ಕಳೆದ ಮೇ ನಲ್ಲಿ ನಡೆದಿದ್ದಂತ ವಿಧಾನಸಭಾ ಚುನಾವಣೆಯಲ್ಲಿ ರಾಜಾ ವೆಂಕಟಪ್ಪ ನಾಯಕ ಗೆಲುವು ಸಾಧಿಸಿದ್ದರು. ಆದರೆ ಅವರು ಅಕಾಲಿಕ ನಿಧನ ಹೊಂದಿದ್ದರು. ಅವರ ನಿಧನದಿಂದ ತೆರವಾದಂತ ಸುರಪುರ ವಿಧಾನಸಭಾ ಕ್ಷೇತ್ರಕ್ಕೆ ಮೇ. 7ರಂದು ಚುನಾವಣೆ ನಡೆಯಲಿದೆ. ಜೂನ್.4ರಂದು ಫಲಿತಾಂಶ ಪ್ರಕಟವಾಗಲಿದೆ.

## ಕಾರಿನಲ್ಲಿ ಮೂವರನ್ನು ಸುಟ್ಟಿದ್ದ ಪ್ರಕರಣ


ತುಮಕೂರು: ಕಾರಿನಲ್ಲಿ ಸುಟ್ಟು ಕರಕಲಾದ ಸ್ಥಿತಿಯಲ್ಲಿ ಪತ್ತೆಯಾದ ಮೂವರ ಕೊಲೆ ಪ್ರಕರಣವನ್ನು ಬೇಧಿಸಿರುವ ಪೊಲೀಸರು ಇಬ್ಬರನ್ನುಬಂಧಿಸಿದ್ದಾರೆ. ಇನ್ನೂ ಆರು ಮಂದಿ ತಲೆಮರೆಸಿಕೊಂಡಿದ್ದಾರೆ.

ಪ್ರಮುಖ ಆರೋಪಿ ಇಲ್ಲಿನ ಸಿರಾ ಗೇಟ್‌ನ ಸ್ವಯಂ ಘೋಷಿತ ಅರ್ಚಕ ರಾಜು ಅಲಿಯಾಸ್ ರಾಜಗುರು ಕುಮಾರ್ ಅಲಿಯಾಸ್ ಪಾತರಾಜು (35) ಮತ್ತು ಸತ್ಯಮಂಗಲದ ಗಂಗರಾಜು (35) ಎಂಬುವರನ್ನು ಬಂಧಿಸಲಾಗಿದೆ. ಬೆಳ್ತಂಗಡಿ ತಾಲೂಕಿನ ಎಸ್‌ಡಿಪಿಐ ಸದಸ್ಯ ಸಾಹುಲ್ (45), ಇಸಾಕ್ (56) ಮತ್ತು ಸಿದ್ದಿಕ್ (34) ಫೆಬ್ರವರಿ 22 ರಂದು ಹತ್ಯೆಗೀಡಾಗಿದ್ದರು. ಜಮೀನೊಂದರಲ್ಲಿ ಸಿಕ್ಕ ಚಿನ್ನದ ಒಡವೆ ನೀಡುವುದಾಗಿ ಭರವಸೆ ನೀಡಿ ಸಂತ್ರಸ್ತರಿಂದ 6 ಲಕ್ಷ ರೂ.ಗಳನ್ನು ಪಾತರಾಜು ಪಡೆದಿದ್ದರು. ಅವರು ನೀಡಿದ ಭರವಸೆಯನ್ನು ಈಡೇರಿಸದಿದ್ದಾಗ, ಸಂತ್ರಸ್ತರು ತಮ್ಮ ಹಣವನ್ನು ಹಿಂದಿರುಗಿಸುವಂತೆ ಒತ್ತಾಯಿಸಿದರು.

## ರೈತರ ಮನೆಗೆ ಶಂಕಿತ ನಕ್ಸಲರ ಭೇಟಿ: ನಾಲ್ವರ ವಿರುದ್ಧ ಪೊಲೀಸ್ ಎಫ್‌ಐಆರ್

ದಕ್ಷಿಣ ಕನ್ನಡ: ರೈತರ ಮನೆಯೊಂದಕ್ಕೆ ಶಂಕಿತ ನಕ್ಸಲರು ಭೇಟಿ ನೀಡಿದ್ದ ಅನುಮಾನದ ಮೇಲೆ ದಕ್ಷಿಣ ಕನ್ನಡ ಪೊಲೀಸರು ನಾಲ್ವರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ಸುಬ್ರಹ್ಮಣ್ಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ನಕ್ಸಲ್ ನಿಗ್ರಹ ದಳ, ಕಾರ್ಕಳ ವಿಭಾಗೀಯ ಎಸ್‌ಪಿ ಜಿತೇಂದ್ರ ದಯಾಮ ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ಗೆ ಮಾಹಿತಿ ನೀಡಿದ್ದು, ರೈತ ಅಶೋಕ್ ಎಂಬುವವರ ಮನೆಗೆ ಬಂದಿದ್ದ ಶಂಕಿತ ನಕ್ಸಲರು ಅವರ ಮನೆಯಿಂದ ಅಕ್ಕಿ, ಮೆಣಸಿನಕಾಯಿ ಹಾಗೂ ಇನ್ನಿತರ ದಿನಸಿ ಪದಾರ್ಥಗಳನ್ನು ಕೊಂಡೊಯ್ದಿದ್ದಾರೆ ಎಂದು ಹೇಳಿದ್ದಾರೆ.



ಶನಿವಾರದಂದು ಸಂಜೆ 6.30 ಕ್ಕೆ ಇಬ್ಬರು ಮಹಿಳೆಯರು ಹಾಗೂ ಇಬ್ಬರು ಪುರುಷರು ನಮ್ಮ ಮನೆಗೆ ಬಂದಿದ್ದರು. ಓರ್ವ ಮಹಿಳೆ 30–35 ವರ್ಷದ ವಯಸ್ಸಿನವರಾಗಿದ್ದು, ಮತ್ತೋರ್ವ ಮಹಿಳೆಗೆ 40–45 ವರ್ಷ ವಯಸ್ಸಾಗಿತ್ತು. ಅವರು ತಮ್ಮ ಬಳಿ ಬಂದೂಕು ಹೊಂದಿದ್ದರು. ಕನ್ನಡ, ತುಳು ಭಾಷೆಗಳಲ್ಲಿ ಮಾತನಾಡುತ್ತಿದ್ದರು. ಅವರು ತಮ್ಮನ್ನು ನಕ್ಸಲರೆಂದು ಪರಿಚಯಿಸಿಕೊಂಡು, ಬಡವರಿಗೆ ನ್ಯಾಯ ಒದಗಿಸುವುದಕ್ಕಾಗಿ ಕೆಲಸ ಮಾಡುತ್ತಿರುವುದಾಗಿ ಹೇಳಿದರು. ಅಷ್ಟೇ ಅಲ್ಲದೇ ಆಹಾರ ನೀಡುವುದಾಗಿ ಕೇಳಿಕೊಂಡ ಅವರು ಕೆಲವು ದಿನಸಿ ಪದಾರ್ಥಗಳನ್ನೂ ನೀಡುವಂತೆ ಕೇಳಿದರು. ಭಯದಿಂದ ನಾವು ಅವರು ಕೇಳಿದ್ದನ್ನು ಕೊಟ್ಟೆವು. ಈ ಬಳಿಕ ತಮ್ಮನ್ನು ಬೆಂಬಲಿಸುವಂತೆ ಕೇಳಿದ ಅವರು ಈ ಮಾಹಿತಿಯನ್ನು ಯಾರಿಗಾದರೂ ನೀಡಿದರೆ ಕೊಲ್ಲುವುದಾಗಿ ಬಂದೂಕು ತೋರಿಸಿ ಬೆದರಿಕೆ ಹಾಕಿ ಸಂಜೆ 7:30 ವೇಳೆಗೆ ಹೊರಟುಹೋದರು ಎಂದು ಅಶೋಕ್ ಹೇಳಿದ್ದಾರೆ.

ಶಂಕಿತ ನಕ್ಸಲರ ವಿರುದ್ಧ ಭಾರತೀಯ ಶಸ್ತ್ರಾಸ್ತ್ರ ಕಾಯ್ದೆ ಮತ್ತು 1967ರ ಕಾನೂನುಬಾಹಿರ ಚಟುವಟಿಕೆಗಳ (ತಡೆಗಟ್ಟುವಿಕೆ) ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ.

ಎಎನ್‌ಎಫ್ ಎಸ್‌ಪಿ ಮತ್ತಷ್ಟು ಸ್ಪಷ್ಟಪಡಿಸಿದ್ದು, "ರೈತ ನಕ್ಸಲ್ ಸಹಾನುಭೂತಿ ಹೊಂದಿರಲಿಲ್ಲ. ಅವರು (ಶಂಕಿತ ನಕ್ಸಲರು) ಆಕಸ್ಮಿಕವಾಗಿ ಅವರ ಮನೆಗೆ ಭೇಟಿ ನೀಡಿ ಕೆಲವು ದಿನಸಿ ವಸ್ತುಗಳನ್ನು ನೀಡುವಂತೆ ಒತ್ತಾಯಿಸಿದ್ದಾರೆ. ಮನೆಗೆ ಭೇಟಿ ನೀಡಿದ ವ್ಯಕ್ತಿಗಳನ್ನು ನಾವು ಇನ್ನೂ ಗುರುತಿಸಿಲ್ಲ. ನಮ್ಮ ಸಿಬ್ಬಂದಿಯಿಂದ ಕೂಂಬಿಂಗ್ ಕರ್ನಾಟಕ, ಕೇರಳ ಗಡಿಗಳಲ್ಲಿ ಮುಂದುವರಿದಿದೆ," ಎಂದರು.

# ಮೇಕೆದಾಟು ಯೋಜನೆ: ಮಾಜಿ ಪ್ರಧಾನಿ ದೇವೇಗೌಡ ನಡೆ ಸ್ವಾಗತಿಸಿದ ಡಿಕೆ.ಶಿವಕುಮಾರ್

ಬೆಂಗಳೂರು: ಜೆಡಿಎಸ್ ಪ್ರಣಾಳಿಕೆಯಲ್ಲಿ ಮೇಕೆದಾಟು ಯೋಜನೆಯನ್ನು ಪ್ರಕಟಿಸುತ್ತೇವೆ. ಇದೇ ರೀತಿ ಬಿಜೆಪಿ, ಕಾಂಗ್ರೆಸ್ ಎಲ್ಲ ಪಕ್ಷಗಳೂ ಈ ಯೋಜನೆ ಬೆಂಬಲಿಸುವ ನಿರ್ಧಾರವನ್ನು ಪ್ರಣಾಳಿಕೆಯಲ್ಲಿ ಪ್ರಕಟಿಸಬೇಕು ಎಂಬ ಮಾಜಿ ಪ್ರಧಾನಿ ಹೆಚ್, ಡಿ. ದೇವೇಗೌಡ ಅವರ ಹೇಳಿಕೆಯನ್ನು ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಸ್ವಾಗತಿಸಿದ್ದಾರೆ.

ದೇವೇಗೌಡ ಅವರ ಹೇಳಿಕೆ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಆಗ್ರಹಿಸಿ ನಾವು ಮಾಡಿದ ನಮ್ಮ ನೀರು, ನಮ್ಮ ಹಕ್ಕು ಹೋರಾಟಕ್ಕೆ ಮಾಜಿ ಪ್ರಧಾನಿ ದೇವೇಗೌಡ ಅವರು



ಧ್ವನಿಗೂಡಿಸಿರುವುದಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದ್ದಾರೆ.

ಈಗ ಉದ್ಭವಿಸಿರುವ ಕುಡಿಯುವ ನೀರಿನ ಸಮಸ್ಯೆಯನ್ನಾದರೂ ಮನಗಂಡು ಕೇಂದ್ರ ಸರಕಾರ ಮೇಕೆದಾಟು ಆಣೆಕಟ್ಟು ಯೋಜನೆಗೆ ಅನುಮತಿ ನೀಡುತ್ತದೆ ಎಂಬ ವಿಶ್ವಾಸ ನನ್ನದು. ಈ ಎಲ್ಲ ಸಮಸ್ಯೆಗಳನ್ನು ನಿರೀಕ್ಷೆ ಮಾಡಿಯೇ ಕಾಂಗ್ರೆಸ್ ಪಕ್ಷವು ನಮ್ಮ ನೀರು ನಮ್ಮ ಹಕ್ಕು ಪಾದಯಾತ್ರೆ ಮಾಡಿತ್ತು. ಆ ಮೂಲಕ ನಮ್ಮ ಹಕ್ಕೊತ್ತಾಯವನ್ನು ಕನ್ನಡಿಗರ ಮನೆ-ಮನಗಳಿಗೆ ತಲುಪಿಸಿತ್ತು" ಎಂದು ತಿಳಿಸಿದ್ದಾರೆ.

ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ತರಬೇಕೆಂಬ ಸಂಕಲ್ಪದಿಂದಲೇ ನಾನು ಜಲಸಂಪನ್ಮೂಲ ಇಲಾಖೆಯ ಜವಾಬ್ದಾರಿ ವಹಿಸಿಕೊಂಡಿದ್ದೇನೆ. ಮೇಕೆದಾಟು ಯೋಜನೆಗಾಗಿ ಕಾನೂನು ಹೋರಾಟ ಮುಂದುವರೆದಿದೆ. ನಮಗೆ ಗೆಲುವು ಸಿಕ್ಕೇ ಸಿಗುತ್ತದೆ ಎನ್ನುವ ವಿಶ್ವಾಸವಿದೆ. ಈ ಸಂದರ್ಭದಲ್ಲಿ ದೇವೇಗೌಡರು ನಮ್ಮ ಹೋರಾಟಕ್ಕೆ ಧ್ವನಿಗೂಡಿಸಿರುವುದನ್ನು ಸ್ವಾಗತಿಸುತ್ತೇನೆ ಎಂದಿದ್ದಾರೆ.

ಮೇಕೆದಾಟು ಯೋಜನೆ ಕುರಿತು ಈ ಹಿಂದೆ ಹೇಳಿಕೆ ನೀಡಿದ್ದ ದೇವೇಗೌಡ ಅವರು, ಮೇಕೆದಾಟು ಯೋಜನೆ ರಾಜ್ಯಕ್ಕೆ ಅತ್ಯಗತ್ಯ. ಈ ಬಗ್ಗೆ ರಾಜ್ಯದ ಎಲ್ಲ ಪಕ್ಷಗಳೂ ಅಚಲ ನಿರ್ಧಾರವನ್ನು ಪ್ರಣಾಳಿಕೆಯಲ್ಲಿ ಪ್ರಕಟಿಸಲಿ. ಕಾಂಗ್ರೆಸ್, ಬಿಜೆಪಿ ಸೇರಿ ಎಲ್ಲ ಪಕ್ಷಗಳೂ ಈ ವಿಚಾರದಲ್ಲಿ ಒಟ್ಟಿಗೆ ಹೆಜ್ಜೆಯಿಡಬೇಕು ಎಂದು ಸಲಹೆ ನೀಡಿದ್ದರು.

ಮೇಕೆದಾಟು ಯೋಜನೆ ವಿರೋಧಿಸಿರುವ ತಮಿಳುನಾಡಿನ ಆಡಳಿತಾರೂಢ ಡಿಎಂಕೆ ನಿಲುವು ಖಂಡನೀಯ. ಈ ಯೋಜನೆ ಅನುಷ್ಠಾನ ಸಂಬಂಧ ಜೆಡಿಎಸ್ ತನ್ನ ಪ್ರಣಾಳಿಕೆಯಲ್ಲಿ ಸೇರಿಸಲಿದೆ. ಕಾಂಗ್ರೆಸ್, ಬಿಜೆಪಿ ಕೂಡ ಬದ್ಧತೆ ಪ್ರದರ್ಶಿಸಲಿ. ಪ್ರಧಾನಿಯವರೂ ಮಧ್ಯಸ್ಥಿಕೆ ವಹಿಸಲಿ ಎಂದಿದ್ದರು.

# ಬೆಳಗಾವಿ: ಕರ್ತವ್ಯದಲ್ಲಿದ್ದಾಗಲೇ ಗಡದ್ದಾಗಿ ನಿದ್ದೆ ಹೊಡೆದ ಅಧಿಕಾರಿ



ಚಿಕ್ಕೋಡಿ: ಅಸಿಸ್ಟೆಂಟ್ ಎಂಜಿನಿಯರೊಬ್ಬರು ಕರ್ತವ್ಯದಲ್ಲಿದ್ದಾಗಲೇ ಗಡದ್ದಾಗಿ ನಿದ್ದೆ ಹೊಡೆಯುತ್ತಿರುವ ಘಟನೆ ಜಿಲ್ಲೆಯ ರಾಯಬಾಗ ತಾಲೂಕಿನ ನೀರಾವರಿ ಉಪವಿಭಾಗದ ಕಚೇರಿಯಲ್ಲಿ ನಡೆದಿದೆ.

ಒಂದು ಕಡೆ ಭೀಕರ ಬರಗಾಲದಿಂದ ರೈತಾಪಿ ವರ್ಗ ತತ್ತರಿಸಿದೆ. ಹೀಗಿರುವಾಗ ಅಸಿಸ್ಟೆಂಟ್ ಎಂಜಿನಿಯರ್ ವರ್ತನೆ ಎಲ್ಲರ ಕೋಪಕ್ಕೆ ಕಾರಣವಾಗಿದೆ. ಘಟಪ್ರಭಾ ಎಡದಂಡೆ ಕಾಲುವೆ ಉಪವಿಭಾಗ ರಾಯಬಾಗ ಕಚೇರಿಯಲ್ಲಿ ಘಟನೆ ಇದಾಗಿದ್ದು, ಅಸಿಸ್ಟೆಂಟ್ ಎಂಜಿನಿಯರ್ ಸಂಜಯಕುಮಾರ್ ಅಮ್ಮಿನಭಾವಿ ಎಂಬ ಅಧಿಕಾರಿ ಕಚೇರಿಯಲ್ಲಿ ಗಡದ್ದಾಗಿ ನಿದ್ದೆ ಹೊಡೆದಿದ್ದಾರೆ.

ಇನ್ನು ಕಚೇರಿಯಲ್ಲಿ ನಿದ್ದೆ ಮಾಡಬೇಡಿ ಎಂದು ಮುಖ್ಯ ಎಂಜಿನಿಯರ್ ಅನೇಕ ಬಾರಿ ಹೇಳಿದ್ದಾರಂತೆ. ಆದರೂ ಸಹ ಅವರ ಮಾತು ಕೇಳದೆ ಸಂಜಯಕುಮಾರ್ ನಿದ್ದೆ ಮಾಡುತ್ತಿದ್ದರು. ಇದೀಗ ಅಧಿಕಾರಿಯ ಬೇಜವಾಬ್ದಾರಿ ನಡೆಗೆ ರೈತಾಪಿ ವರ್ಗ ಆಕ್ರೋಶ ಹೊರಹಾಕಿದೆ. ಚಿಂತೆ ಇಲ್ಲದವನಿಗೆ ಸಂತೆಯಲ್ಲೂ ನಿದ್ದೆ ಎಂದು ಹೇಳಿದ್ದಾರೆ.

# ಬೆಂಗಳೂರು: ಅನುಮತಿ ಇಲ್ಲದೆ 20 ಕೊಳವೆ ಬಾವಿ ಕೊರೆದವರ ವಿರುದ್ಧ ಕ್ರಮಕ್ಕೆ ಆದೇಶ

ಬೆಂಗಳೂರು: ನಗರದಲ್ಲಿ ನೀರಿನ ಸಮಸ್ಯೆ ತಲೆದೋರಿದ್ದು, ಈ ನಡುವಲ್ಲೇ ಅನುಮತಿ ಇಲ್ಲದೆ 20 ಕೊಳವೆ ಬಾವಿಗಳನ್ನು ಕೊರೆದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯುಎಸ್ಎಸ್‌ಬಿ) ಎಂಜಿನಿಯರ್‌ಗಳಿಗೆ ಸೂಚನೆ ನೀಡಿದೆ.

ಬೋರ್‌ವೆಲ್ ಕೊರೆಯುವವರು ಮಂಡಳಿಯಿಂದ ಅನುಮತಿ ಪಡೆಯುವುದನ್ನು ಕಡ್ಡಾಯ ಮಾಡಲಾಗಿದೆ. ಅನುಮತಿ ಪಡೆಯದಿದ್ದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಬಿಡಬ್ಲ್ಯುಎಸ್ಎಸ್‌ಬಿ ಇತ್ತೀಚೆಗೆ ಹೊರಡಿಸಿದ ಆದೇಶದಲ್ಲಿ ತಿಳಿಸಿದೆ. ಆದರೆ, ಕಟ್ಟುನಿಟ್ಟಿನ ಸೂಚನೆಗಳ ಹೊರತಾಗಿಯೂ, ಕೆಲವರು ಆದೇಶವನ್ನು ಉಲ್ಲಂಘಿಸುತ್ತಿರುವುದು ಕಂಡುಬಂದಿದೆ.

ಪ್ರಕರಣವೊಂದರಲ್ಲಿ ಸ್ಥಳೀಯ ಕಾಂಗ್ರೆಸ್ ಮುಖಂಡ ಮನೋಜ್ ಕುಮಾರ್ ಅವರು ತಲಕಾವೇರಿ ಲೇಔಟ್‌ನ ವಿಭೂತಿಪುರದ ಕೆರೆ ಬಳಿ ಬೋರ್‌ವೆಲ್ ಕೊರೆಸುತ್ತಿದ್ದಾರೆಂದು ಆರೋಪಿಸಲಾಗಿತ್ತು. ಈ ವಿಚಾರ ವೈರಲ್ ಆಗುತ್ತಿದ್ದಂತೆಯೇ ಸ್ಥಳಕ್ಕೆ ಭೇಟಿ ನೀಡಿದ



ಬಿಡಬ್ಲ್ಯೂಎಸ್ಎಸ್‌ಬಿ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಸೈಯದ್ ಮುದಸ್ಸಿರ್ ಅವರು, ಕಾಮಗಾರಿಯನ್ನು ಸ್ಥಗಿತಗೊಳಿಸಿದರು.

ಈ ಬಗ್ಗೆ ಎಚ್‌ಎಎಲ್ ಪೊಲೀಸ್ ಠಾಣೆಗೆ ದೂರು ನೀಡಲಾಗಿತ್ತು. ದೂರ ಬಳಿಕ ಬೋರ್‌ವೆಲ್ ವಾಹನ ಸಿಬ್ಬಂದಿ ಮತ್ತು ಮಾಲೀಕರು ಠಾಣೆಗೆ ಆಗಮಿಸಿ, ಮಾಹಿತಿ ನೀಡಿದ್ದರು ಎಂದು ಮುದಾಸಿರ್ ಹೇಳಿದ್ದಾರೆ,

ಮನೋಜ್ ಕುಮಾರ್ ಅವರು ಮಾತನಾಡಿ, ನಾನು ಬೋರ್‌ವೆಲ್ ಕೊರೆಸುತ್ತಿರಲಿಲ್ಲ. ಹಳೆಯ ಬೋರ್‌ವೆಲ್ ಬತ್ತಿಹೋಗಿದ್ದ ಹಿನ್ನೆಲೆಯಲ್ಲಿ ಮರಳಿ ಭೂಮಿಯನ್ನು ಕೊರೆಸಲಾಗುತ್ತಿತ್ತು. ನಾನು ತಪ್ಪು ಮಾಡಿಲ್ಲ ಎಂದು ಹೇಳಿದ್ದಾರೆ.ಜಿಎ

# ಚೀನಾಗೆ 'ಬಲೂಚಿ' ಕಂಟಕ: ಆತ್ಮಾಹುತಿ ಬಾಂಬ್ ದಾಳಿಯಲ್ಲಿ ಐವರು ಚೀನಿಯರು ಸೇರಿ 6 ಮಂದಿ ದುರ್ಮರಣ

ಪಾಕಿಸ್ತಾನದ ಖೈಬರ್ ಪಖ್ತುಂಖ್ವಾದಲ್ಲಿ ಆತ್ಮಾಹುತಿ ದಾಳಿಯಲ್ಲಿ ಆರು ಚೀನೀ ಪ್ರಜೆಗಳು ಸಾವನ್ನಪ್ಪಿದ್ದಾರೆ. ದಾಳಿಕೋರರು ಚೀನಿ ಬೆಂಗಾವಲು ಪಡೆಯನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿದ್ದರು ಎಂದು ಹೇಳಲಾಗುತ್ತಿದೆ.

ಸ್ಥಳೀಯ ಅಧಿಕಾರಿಗಳ ಪ್ರಕಾರ, ವಾಯುವ್ಯ ಪಾಕಿಸ್ತಾನದ ಖೈಬರ್ ಪಖ್ತುಂಖ್ವಾದ ಶಾಂಗ್ಲಾದಲ್ಲಿ ಆತ್ಮಾಹುತಿ ಬಾಂಬರ್ ನಡೆಸಿದ ಬಾಂಬ್ ಸ್ಫೋಟದಲ್ಲಿ ಆರು ಚೀನೀ ಪ್ರಜೆಗಳು ಸಾವನ್ನಪ್ಪಿದ್ದಾರೆ. ಮತ್ತೊಂದೆಡೆ ದಾಳಿಕೋರರು ನೌಕಾ ವಾಯು ನೆಲೆಯ ಮೇಲೆ ದಾಳಿ ಮಾಡಿದ್ದು ಇದರಲ್ಲಿ ಒಬ್ಬ ಯೋಧ ಸಹ ಸಾವನ್ನಪ್ಪಿದ್ದಾರೆ. ಚೀನಾ ಪಾಕಿಸ್ತಾನ ಆರ್ಥಿಕ ಕಾರಿಡಾರ್‌ಗೆ ಈ ವಾಯುನೆಲೆ ಮಹತ್ವದ್ದಾಗಿದೆ ಎಂದು ಹೇಳಲಾಗುತ್ತಿದೆ.

ಪಾಕಿಸ್ತಾನದಲ್ಲಿ ಪ್ರತಿದಿನ ಭಯೋತ್ಪಾದಕ ದಾಳಿಗಳು ನಡೆಯುತ್ತಿವೆ. ಇದಕ್ಕೂ ಮೊದಲು ಮಾರ್ಚ್ 20ರಂದು ಬಲೂಚಿಸ್ತಾನ್ ಲಿಬರೇಶನ್ ಆರ್ಮಿ ಯೋಧರು ಗ್ವಾದರ್ ಬಂದರನ್ನು ಗುರಿಯಾಗಿಸಿಕೊಂಡಿದ್ದರು. ಪಾಕಿಸ್ತಾನವು ಚೀನಾದ ಸಹಾಯದಿಂದ ಈ ಬಂದರನ್ನು ಅಭಿವೃದ್ಧಿಪಡಿಸುತ್ತಿದೆ. ಇದನ್ನು ಸ್ಥಳೀಯ ಬಲೂಚ್



ಜನಸಂಖ್ಯೆಯು ವಿರೋಧಿಸುತ್ತಿದೆ. ಚೀನೀ ನಾಗರಿಕರು ಸಾಮಾನ್ಯವಾಗಿ ಃಐಂ ಅಥವಾ ಬಲೂಚಿಸ್ತಾನ್ ಲಿಬರೇಶನ್ ಆರ್ಮಿಯಿಂದ ಗುರಿಯಾಗುತ್ತಾರೆ.

ಬಲೂಚಿಗರು ದಶಕಗಳಿಂದ ಪಾಕಿಸ್ತಾನ ಸರ್ಕಾರದ ವಿರುದ್ಧ ಬಂಡಾಯವೆದ್ದಿದೆ. ಆದರೆ ಇದರ ಹೊರತಾಗಿಯೂ, ಚೀನಾ ಇಲ್ಲಿ ಭಾರಿ ಹೂಡಿಕೆ ಮಾಡಿದೆ. ಉದಾಹರಣೆಗೆ, ಚೀನಾವು ಪಾಕಿಸ್ತಾನದಿಂದ ತನ್ನ ದೇಶಕ್ಕೆ ಆರ್ಥಿಕ ಕಾರಿಡಾರ್ ಅನ್ನು ನಿರ್ಮಿಸುತ್ತಿದೆ. ಇದರಲ್ಲಿ ಗ್ವಾದರ್ ಬಂದರು ಮತ್ತು ಸುತ್ತಮುತ್ತಲಿನ ಪ್ರದೇಶಗಳನ್ನು ಅಭಿವೃದ್ಧಿಪಡಿಸಲಾಗುವುದು. ಬಲೂಚಿಸ್ತಾನದ ಬಹುಪಾಲು ಭಾಗವು ಈ ಸಿಪಿಇಸಿ ಯೋಜನೆಯ ಭಾಗವಾಗಿದೆ. ಇದನ್ನು ಬಲೂಚಿಸ್ತಾನ್ ಲಿಬರೇಶನ್ ಆರ್ಮಿಯ ಹೋರಾಟಗಾರರು ವಿರೋಧಿಸುತ್ತಾರೆ ಮತ್ತು ಪ್ರತಿನಿತ್ಯ ದಾಳಿಗಳನ್ನು ನಡೆಸುತ್ತಾರೆ.

## ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರ ತಾತ್ಕಾಲಿಕ ಪ್ರವಾಸ ಪಟ್ಟಿ

ಬೆಳಗಾವಿ:ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ಶಿಂಧೆ ಅವರು ಮಾ.25 ರಿಂದ ಮಾ.31ರ ವರೆಗೆ ಜಿಲ್ಲೆಯಲ್ಲಿ ತಾತ್ಕಾಲಿಕ ಪ್ರವಾಸವನ್ನು ಕೈಗೊಳ್ಳಲಿದ್ದಾರೆ.

ಮಾ. 27 ರಂದು ಬೆಳಗ್ಗೆ 10 ರಿಂದ 11 ಗಂಟೆಯವರೆಗೆ ಕಚೇರಿಯ ಕೆಲಸದಲ್ಲಿ ಭಾಗವಹಿಸಲಿದ್ದಾರೆ. ಬೆಳಿಗ್ಗೆ 11 ರಿಂದ 12 ಗಂಟೆಯವರೆಗೆ ಅನಾಧಿಕೃತ ನಗದು ಜಪ್ತಿ ಸಮಿತಿ ಸಭೆ; ಮಧ್ಯಾಹ್ನ 12 ರಿಂದ 1 ಗಂಟೆಯವರೆಗೆ ಗೂಗಲ್ ಮಿಟ್‌ನಲ್ಲಿ ಸಭೆ: ಮಧ್ಯಾಹ್ನ 3 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅವರ ಅಧ್ಯಕ್ಷತೆಯಲ್ಲಿ ವಿಡಿಯೋ ಸಂವಾದ ಜರಗುವ ಪ್ರಗತಿ ಪರಿಶೀಲನೆ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಮಾ. 27 ರಂದು ಬೆಳಗ್ಗೆ 10 ರಿಂದ 1 ಗಂಟೆಗೆ ಕಚೇರಿ ಕೆಲಸ; ಮಧ್ಯಾಹ್ನ 2 ರಿಂದ ಸಂಜೆ 6 ಗಂಟೆಯವರೆಗೆ ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಕುರಿತು ಚುನಾವಣೆ ಕಾರ್ಯ ನಡೆಸಲಿದ್ದಾರೆ.

ಮಾ.28 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಕುರಿತು ಚುನಾವಣೆ ಕೆಲಸ ನಡೆಸಲಿದ್ದಾರೆ.

ಮಾ. 30 ರಂದು ಬೆಳಗ್ಗೆ 11 ರಿಂದ 12ವರೆಗೆ ಜಿಲ್ಲಾಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ಹಸಿರುಕ್ರಾತಿ ಹರಿಕಾರ ಡಾ.ಬಾಬು ಜಗಜೀವನರಾಮ ಅವರ 117ನೇ ಜನ್ಮ ದಿನಾಚರಣೆ ಆಚರರಿಸುವ ಸಂಬಂಧ ಪೂರ್ಣ ಭಾವಿ ಸಭೆ; ಮಧ್ಯಾಹ್ನ 1 ರಿಂದ 2 ವರೆಗೆ ಜಿಲ್ಲಾಧಿಕಾರಿಗಳಿ ಅವರ ಅಧ್ಯಕ್ಷತೆಯಲ್ಲಿ ಭಾರತರತ್ನ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಬೇಡ್ಕರ್ ಅವರ 133 ನೇ ಜನ್ಮ ದಿನಾಚರಣೆ ಆಚರಿಸುವ ಸಂಬಂಧ ಪೂರ್ವ ಭಾವಿ ಸಭೆ; ಮಧ್ಯಹ್ನ 3 ರಿಂದ ಸಂಜೆ 6 ರವರೆಗೆ ಗ್ರಮ ಪಂಚಾಯತ ಸಿಬ್ಬಂದಿಗಳ ಮೇಲ್ಮನವಿ ಕುರಿತು ಚರ್ಚೆ ಹಾಗೂ ಪಿಡಿಓ ಜಿ1, ಜಿ2, ಎರಡನೇ ವಿಭಾಗಿ ಸಹಾಯಕರ ಇಲಾಖೆಯ ವಿಚಾರಣೆ **(SDAA);** ಮಾ.31 ರಂದು ಸಾರ್ವತ್ರಿಕ ರಜೆ ಇರುತ್ತದೆ ಪ್ರಕಟಣೆ ತಿಳಿಸಿದೆ.

# ವಯೋವೃದ್ಧ ದಂಪತಿ ಮೇಲೆ ಚರ್ಚ್ ಪಾದ್ರಿ ದೌರ್ಜನ್ಯ; ದಂಪತಿಯನ್ನು ಬಹಿಷ್ಕರಿಸಿದ ಕ್ರೈಸ್ತ ಸಮುದಾಯ

ಮಂಗಳೂರು: ಬಂಟ್ವಾಳ ತಾಲೂಕಿನ ಪರಿಯಾಲತಡ್ಕ ಗ್ರಾಮದಲ್ಲಿ ಈ ತಿಂಗಳ ಆರಂಭದಲ್ಲಿ ಚರ್ಚ್‌ನ ಪಾದ್ರಿಯೊಬ್ಬರಿಂದ ಹಲ್ಲೆಗೊಳಗಾದ ವೃದ್ಧ ದಂಪತಿಯನ್ನು ಗ್ರಾಮದ ಕ್ರೈಸ್ತ ಸಮುದಾಯದವರು ಬಹಿಷ್ಕರಿಸಿದ್ದಾರೆ.

ಚರ್ಚ್ ಪಾದ್ರಿ ಫಾದರ್ ನೆಲ್ಸನ್ ಒಲಿವೆರಾ ವಿರುದ್ಧ ದೂರು ನೀಡಿದ ಕೂಡಲೇ ಕಿರುಕುಳ ಆರಂಭವಾಯಿತು ಎಂದು ದಂಪತಿ ಗ್ರೆಗೊರಿ ಮೊಂಥೇರೊ ಮತ್ತು ಫಿಲೋಮಿನಾ ಕೊಯೆಲೊ ಇಂದು ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು. ಮೊದಲಿಗೆ, ಚರ್ಚ್‌ಗೆ ಸಂಪರ್ಕ ಹೊಂದಿದ ಎಲ್ಲಾ ವಾಟ್ಸಾಪ್ ಗುಂಪುಗಳಿಂದ ನಮ್ಮನ್ನು ತೆಗೆದುಹಾಕಲಾಯಿತು. ನಂತರ ಹಳ್ಳಿಯ ಸಮುದಾಯದ ಜನರು ಇದ್ದಕ್ಕಿದ್ದಂತೆ ನಮ್ಮೊಂದಿಗೆ ಮಾತನಾಡುವುದನ್ನು ನಿಲ್ಲಿಸಿದರು. ಪ್ರಕರಣವನ್ನು ದುರ್ಬಲಗೊಳಿಸಲು ಮಂಗಳೂರು ಧರ್ಮಪ್ರಾಂತ್ಯವು ಪೊಲೀಸರ ಮೇಲೆ ಒತ್ತಡ ಹೇರುವ ಮೂಲಕ ಆರೋಪಿ ಪಾದ್ರಿಯನ್ನು ರಕ್ಷಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು.

ಏತನ್ಮಧ್ಯೆ, ಪಾದ್ರಿಯ ವಿರುದ್ಧ ಎಫ್‌ಐಆರ್ ದಾಖಲಿಸಲು ದಂಪತಿಗೆ ಸಹಾಯ ಮಾಡಿದ ಸಾಮಾಜಿಕ ಕಾರ್ಯಕರ್ತರಾದ ರಾಬರ್ಟ್ ರೊಸಾರಿಯೊ ಮತ್ತು ಮಾರಿಸ್ ಮಸ್ಕರೇನ್ಹಸ್ ಅವರು ದಂಪತಿಗಳಿಗೆ ಸಹಾಯ ಮಾಡಿದ್ದಕ್ಕಾಗಿ ಟಾರ್ಗೆಟ್ ಆಗಿದ್ದಾರೆ ಎಂದು ಹೇಳಿದರು. ಮಂಗಳೂರಿನಾದ್ಯಂತ ನಮ್ಮನ್ನು ಕ್ರೈಸ್ತ ವಿರೋಧಿಗಳೆಂದು ಬಿಂಬಿಸಿ ನಮ್ಮ ವಿರುದ್ಧ ಸುಳ್ಳು ದೂರು ದಾಖಲಿಸಲು ಪ್ರಚೋದನೆ ನೀಡಲಾಗುತ್ತಿದೆ. ಆದರೆ ಸಮುದಾಯದ ಜನರಲ್ಲಿ ಜಾಗೃತಿ ಹೆಚ್ಚಿರುವುದರಿಂದ ಈವರೆಗೆ ಯಾವುದೇ



ಕ್ರೈಸ್ತರು ಒತ್ತಡಕ್ಕೆ ಮಣಿದಿಲ್ಲ ಎಂದರು.

ದಂಪತಿಗೆ ಸಹಾಯ ಮಾಡಿದ್ದಕ್ಕಾಗಿ ಪುತ್ತೂರು ಚರ್ಚ್‌ನ ಪ್ಯಾರಿಷ್ ಕೌನ್ಸಿಲ್‌ನಿಂದ ನನ್ನನ್ನು ತೆಗೆದುಹಾಕಲಾಗಿದೆ ಎಂದು ಮಾರಿಸ್ ಮಸ್ಕರೇನ್ಹಸ್ ಹೇಳಿದ್ದಾರೆ. ಬಿಷಪ್ ರೆವ್ ಪೀಟರ್ ಪಾಲ್ ಸಲ್ಡಾನ್ಹಾ ಅವರಿಗೆ ಪತ್ರ ಬರೆದರೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಹೇಳಿದ ಅವರು, ಬಿಷಪ್ ಅವರು ಪ್ಯಾರಿಷ್ ಪಾದ್ರಿ ಫಾದರ್ ನೆಲ್ಸನ್ ಒಲಿವೆರಾ ಜೊತೆ ಕೈಜೋಡಿಸಿದ್ದಾರೆ ಎಂದು ಆರೋಪಿಸಿದರು.

ಮಂಗಳೂರು ಧರ್ಮಾಲಯಗಳು ಸಂಕಷ್ಟದಲ್ಲಿರುವ ವೃದ್ಧ ದಂಪತಿಗಳಿಗೆ ನೆರವು ನೀಡದಿರುವುದನ್ನು ರೊಸಾರಿಯೋ ಖಂಡಿಸಿದರು. ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿರುವ ಘಟನೆ ಸಾರ್ವಜನಿಕರಿಂದ ತೀವ್ರ ಟೀಕೆಗೆ ಕಾರಣವಾಯಿತು. ಆದರೆ ಸಂತ್ರಸ್ತರನ್ನು ಭೇಟಿ ಮಾಡಲು ಬಿಷಪ್ ತಲೆಕೆಡಿಸಿಕೊಂಡಿಲ್ಲ, ಅವರಿಗೆ ನೈತಿಕ ಬೆಂಬಲ ನೀಡುವ ಸಲುವಾಗಿ ಯಾರನ್ನೂ ಕಳುಹಿಸಲಿಲ್ಲ. ಘಟನೆಗೆ ಸಂಬಂಧಿಸಿದಂತೆ ನನ್ನ ಪತ್ರಕ್ಕೂ ಅವರು ಪ್ರತಿಕ್ರಿಯಿಸಲಿಲ್ಲ ಎಂದು ಮಾರಿಸ್ ಮಸ್ಕರೇನ್ಹಸ್ ಆರೋಪಿಸಿದರು.

ಘಟನೆ ನಡೆದ ಕೆಲವು ದಿನಗಳ ನಂತರ ಮಂಗಳೂರು ಕ್ಯಾಥೋಲಿಕ್ ಸಭಾದ ಸದಸ್ಯರೊಬ್ಬರೊಂದಿಗೆ ಮಂಗಳೂರು ಧರ್ಮಾಲಯದ ಪಿಆರ್‌ಓ ರಾಯ್ ಕ್ಯಾಸ್ತಲಿನೊ ಅವರ ಮನೆಗೆ ಭೇಟಿ ನೀಡಿ ಅವರ ಗುರುತು ರಹಸ್ಯವಾಗಿಟ್ಟಿದ್ದರು ಎಂದು ಗ್ರೆಗೊರಿ ಹೇಳಿದ್ದಾರೆ. ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಿದ ಅವರು ನಮ್ಮ ವಿರುದ್ಧವಾಗಿ ಏನೂ ಸಿಗದಿದ್ದಾಗ ಅವರು ಸದ್ದಿಲ್ಲದೆ ಹೊರಟರು. ನಿಷ್ಪಕ್ಷಪಾತ ತನಿಖೆ ನಡೆಸಿ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದರು.

## ವಿಮ್ಸ್: ಮಾ.28 ರಂದು 63ನೇ ಪದವಿ ಪ್ರದಾನ ಸಮಾರಂಭ

ಬಳ್ಳಾರಿ: ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯ 63ನೇ ಪದವಿ ಪ್ರದಾನ ಸಮಾರಂಭವು ಮಾ.28 ರಂದು ಬೆಳಿಗ್ಗೆ 10 ಗಂಟೆಗೆ ವಿಮ್ಸ್ನ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಸಮಾರಂಭದಲ್ಲಿ ಪ್ರಧಾನ ಪೋಷಕರಾದ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹ್ಸಿನ್ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪ ಕುಲಪತಿಗಳಾದ ಡಾ.ಎಂ.ಕೆ. ರಮೇಶ್ ಅವರು ಆಗಮಿಸುವರು.

ಸಮಾರಂಭದ ಜಿಲ್ಲಾಧಿಕಾರಿ ಹಾಗೂ ವಿಮ್ಸ್ ಆಡಳಿತ ಮಂಡಳಿಯ ಸದಸ್ಯರಾದ ಪ್ರಶಾಂತ್ ಕುಮಾರ್ ಮಿಶ್ರಾ, ಸಹ ಪೋಷಕರಾಗಿ ವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕರಾದ ಡಾ.ಬಿ.ಎಲ್.ಸುಜಾತ ರಾಥೋಡ್, ಅವರು ಉಪಸ್ಥಿತರಿರುವರು.

ತಮಿಳುನಾಡು ಸರ್ಕಾರದ ಲೋಕೋಪಯೋಗಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಡಾ. ಚಂದ್ರಮೋಹನ್.ಬಿ, ಯು.ಎಸ್.ಎ.ನ ವಾಸ್ಕ್ಯುಲರ್ ಶಸ್ತ್ರ ಚಿಕಿತ್ಸಕರಾದ ಡಾ.ಪಿ.ವಿ.ಪತಂಜಲಿ ಶರ್ಮಾ ಹಾಗೂ ಕರ್ನಾಟಕ ವೈದ್ಯಕೀಯ ಮಂಡಳಿಯ ಸದಸ್ಯರಾದ ಡಾ.ವೈ.ಸಿ ಯೋಗಾನಂದ ರೆಡ್ಡಿ ಅವರು ಅವರು ಮುಖ್ಯ ಅತಿಥಿಯಾಗಿ ಭಾಗವಹಿಸುವರು.

ವಿಮ್ಸ್ನ ಡೀನ್ ಹಾಗೂ ನಿರ್ದೇಶಕ ಡಾ.ಟಿ.ಗಂಗಾಧರ ಗೌಡ ಅವರು ಅಧ್ಯಕ್ಷತೆ ವಹಿಸುವರು.

ವಿಮ್ಸ್ನ ಪ್ರಾಚಾರ್ಯರಾದ ಡಾ.ಕೃಷ್ಣಸ್ವಾಮಿ.ಡಿ, ವಿಮ್ಸ್ನ ಮುಖ್ಯ ಆಡಳಿತಾಧಿಕಾರಿ ಶೀಲವಂತ ಶಿವಕುಮಾರ್ ಸೇರಿದಂತೆ ಉಪನ್ಯಾಸ ವೃಂದ, ಸಿಬ್ಬಂದಿ ವರ್ಗ ಹಾಗೂ ವೈದ್ಯಕೀಯ ವಿದ್ಯಾರ್ಥಿಗಳು ಉಪಸ್ಥಿತರಿರುವರು ಎಂದು ವಿಮ್ಸ್ ಪ್ರಕಟಣೆ ತಿಳಿಸಿದೆ.

# ಬಿಎಂಟಿಸಿ ಬಸ್ ನಲ್ಲಿ ಮಹಿಳೆ ಮೇಲೆ ಹಲ್ಲೆ: ಕಂಡಕ್ಟರ್ ಬಂಧನ

ಬೆಂಗಳೂರು: ಬಿಎಂಟಿಸಿ ಬಸ್ ನಲ್ಲಿ ಟಿಕೆಟ್ ಕೇಳಿದ ಮಹಿಳೆ ಮೇಲೆ ಹಲ್ಲೆ ನಡೆಸಿದ ಕಂಡಕ್ಟರ್ ಹೊನ್ನಪ್ಪನನ್ನ ಸಿದ್ದಾಪುರ ಪೊಲೀಸರು ಮಂಗಳವಾರ ಬಂಧಿಸಿದ್ದಾರೆ.

ಹಲ್ಲೆಗೊಳಗಾಗಿದ್ದ ತನ್ಜಿಲಾ ಇಸ್ಮಾಯಿಲ್ ಎಂಬ ಮಹಿಳೆ ಬಸ್ಸಿನಲ್ಲಿ ಪ್ರಯಾಣ ಮಾಡಲು ಟಿಕೆಟ್ ಕೇಳಿದ್ದಾರೆ. ಈ ವೇಳೆ ಕಂಡಕ್ಟರ್, ಕೊಡ್ತಿನಿ ಇರಿ ಎಂದಿದ್ದಾನೆ. ಇದೇ ವಿಚಾರಕ್ಕೆ ಮಾತಿಗೆ ಮಾತು ಬೆಳೆದು ರೊಚ್ಚಿಗೆದ್ದ ಕಂಡಕ್ಟರ್, ಮಹಿಳೆ ಮೇಲೆ ಹಲ್ಲೆ ನಡೆಸಿದ್ದಾರೆ ಎನ್ನಲಾಗಿತ್ತು.

ಮಹಿಳೆ ಮೇಲೆ ಬಿಎಂಟಿಸಿ ಕಂಡಕ್ಟರ್ ಹಲ್ಲೆ ನಡೆಸಿದ ವಿಡಿಯೋ ಮಾಧ್ಯಮಗಳಲ್ಲಿ ಪ್ರಸಾರವಾದ ನಂತರ, ಪ್ರಕರಣಕ್ಕೆ ಸಂಬಂಧಿಸಿದಂತೆ ಕಂಡಕ್ಟರ್ ಹೊನ್ನಪ್ಪನನ್ನ ಸಿದ್ದಾಪುರ ಪೊಲೀಸರು ಬಂಧಿಸಿದ್ದಾರೆ.

ಗಲಾಟೆಗೆ ಸಂಬಂಧಿಸಿದಂತೆ ಕಂಡಕ್ಟರ್ ಹೊನ್ನಪ್ಪ ಅವರ ಹೇಳಿಕೆ ದಾಖಲಿಸಿಕೊಂಡಿರುವ ಪೊಲೀಸರು,



ಇದಕ್ಕೆಲ್ಲ ಉಚಿತ ಬಸ್ ಪ್ರಯಾಣವೇ ಕಾರಣವಾಗಿದೆ. ಹೌದು, ಬಿಳೆಕಳ್ಳಿ ಬಳಿ ಬಸ್ ಹತ್ತಿದ್ದ ಮಹಿಳೆಗೆ ಟಿಕೆಟ್ ನೀಡಲು ಆಧಾರ್ ಕಾರ್ಡ್ ತೋರಿಸುವಂತೆ ಕಂಡಕ್ಟರ್ ಹೇಳಿದ್ದಾರೆ. ಆದರೆ, ಎರಡು ಸ್ಟಾಪ್ ಬಂದರೂ ಯುವತಿ ತನ್ನ ಆಧಾರ್ ಕಾರ್ಡ್ ತೋರಿಸಿಲ್ಲ. ಬಳಿಕ ನಿಮ್ಮ ಸ್ಟೇಜ್ ಮುಕ್ತಾಯವಾಗುತ್ತೆ ಬೇಗ ಆಧಾರ್ ಕಾರ್ಡ್ ತೋರಿಸಿ, ಇಲ್ಲದಿದ್ದರೆ ಹಣ ಕೊಟ್ಟು ಟಿಕೆಟ್ ತೆಗೆದುಕೊಳ್ಳುವಂತೆ ಕಂಡಕ್ಟರ್ ಸೂಚಿಸಿದ್ದಾರೆ. ಇದರಿಂದ ಕೆಂಡಾಮಂಡಲವಾದ ಮಹಿಳೆ, ಮಾತಿಗೆ ಮಾತು ಬೆಳೆದು ಕಂಡಕ್ಟರ್‌ಗೆ ಕಪಾಳ ಮೋಕ್ಷ ಮಾಡಿದ್ದಾರೆ. ಇದರಿಂದ ರೊಚ್ಚಿಗೆದ್ದ ಕಂಡಕ್ಟರ್ ಕೂಡ ಮಹಿಳೆ ಮೇಲೆ ಹಲ್ಲೆ ನಡೆಸಿದ್ದಾರೆ.

ಇನ್ನು ಘಟನೆ ಬೆನ್ನಲ್ಲೇ ಕಂಡಕ್ಟರ್‌ನನ್ನು ಅಮಾನತುಗೊಳಿಸಲಾಗಿದೆ. ಈ ಕುರಿತು ಬಿಎಂಟಿಸಿ ಮಾಧ್ಯಮ ಪ್ರಕಟಣೆ ಹೊರಡಿಸಿದ್ದು, 'ಘಟಕ -34 ನಿರ್ವಾಹಕರಾಗಿರುವ ಹೊನ್ನಪ್ಪ ನಾಗಪ್ಪ ಅಗಸರ್ ಅವರು ಇಂದು ಮಾರ್ಗ ಸಂಖ್ಯೆ 368/6 ರಲ್ಲಿ ಕರ್ತವ್ಯದಲ್ಲಿದ್ದ ವೇಳೆ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಹೊರ ರಾಜ್ಯದ ಓರ್ವ ಮಹಿಳಾ ಪ್ರಯಾಣಿಕರೊಂದಿಗೆ ಟಿಕೆಟ್ ಪಡೆಯುವ ನೀಡುವ ವಿಚಾರವಾಗಿ ಮಾತಿನ ಚಕಮಕಿ ನಡೆದಿದ್ದು, ಹಲ್ಲೆ ಮಾಡಿರುತ್ತಾರೆ. ಈ ಘಟನೆಯ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ಹರಿದಾಡಿರುವ ಹಿನ್ನೆಲೆಯಲ್ಲಿ ಸದರಿ ಅಂತರ್ಜಾಲದ ಸುದ್ದಿಯ ಆಧಾರದ ಮೇಲೆ ಹೊನ್ನಪ್ಪ ನಾಗಪ್ಪ ಅಗಸರ್ ರನ್ನು ಅಮಾನತ್ತು ಮಾಡಲಾಗಿದೆ ಎಂದು ತಿಳಿಸಿದೆ.

# ತೋಟಗಾರಿಕೆ ಇಲಾಖೆ: ವಿವಿಧ ಯೋಜನೆಗಳಡಿ ರೈತರಿಂದ ಅರ್ಜಿ ಆಹ್ವಾನ

ಬಳ್ಳಾರಿ: ಸಿರುಗುಪ್ಪ ತೋಟಗಾರಿಕೆ ಇಲಾಖೆ ವತಿಯಿಂದ 2024-25 ನೇ ಸಾಲಿಗಾಗಿ ಅನುಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಡಿ ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಿರುಗುಪ್ಪ (ಜಿಪಂ) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಮಹಾಂತೇಶ ಅವರು ತಿಳಿಸಿದ್ದಾರೆ.

**ಸೌಲಭ್ಯಗಳು:**

ಫಲಾನುಭವಿ ಆಧಾರಿತ ನರೇಗಾ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಸಣ್ಣ, ಅತಿ ಸಣ್ಣ ರೈತರಿಗೆ ಬಾಳೆ, ಅಂಜೂರ, ತಾಳೆಬೆಳೆ, ದಾಳಿಂಬೆ, ಸಪೋಟ, ಮಾವು, ನುಗ್ಗೆ, ತೆಂಗು, ಪಪ್ಪಾಯ ಮತ್ತು ಪೇರಲ ಬೆಳೆಗಳನ್ನು ಬೆಳೆಯಲು ಹಾಗೂ ಕೊಳವೆ ಬಾಯಿ ಮರುಪೂರ್ಣ ಘಟಕ ಮಾಡಲು ಸಹಾಯಧನ ನೀಡಲಾಗುವುದು.

ನೀರಾವರಿ ಸೌಕರ್ಯವುಳ್ಳ ರೈತರು ತಮ್ಮ ಜಮೀನುಗಳಲ್ಲಿ ಕಾಮಗಾರಿ ಕೈಗೊಂಡಲ್ಲಿ ನರೇಗಾ ಯೋಜನೆಯ ಅನುದಾನ ಬಳಸಿ ಕೂಲಿ ಮೊತ್ತವನ್ನು ಮತ್ತು ಸಾಮಗ್ರಿ ವೆಚ್ಚವನ್ನು ಆನ್ಲೈನ್ ಮೂಲಕ ಪಾವತಿ ಮಾಡಲಾಗುತ್ತದೆ.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸಮುದಾಯ ಕೃಷಿಹೊಂಡ, ಹೊಸ ಪ್ರದೇಶ ವಿಸ್ತರಣೆ, ದಾಳಿಂಬೆ, ಅಂಜೂರ, ಈರುಳ್ಳಿ ಶೇಖರಣಾ ಘಟಕ, ಪಾಲಿಹೌಸ್ ನಿರ್ಮಾಣ ಮಾಡಿಕೊಳ್ಳಲು ಸಹಾಯಧನ ನೀಡಲಾಗುವುದು.

ಪ್ರಧಾನಮಂತ್ರಿ ಕೃಷಿ ಸಿಂಚಾಯನ ಯೋಜನೆಯಡಿ ತೋಟಗಾರಿಕೆ ಬೆಳೆ ಬೆಳೆಯುವ ರೈತರಿಗೆ ಹನಿ ನೀರಾವರಿ ಸೌಲಭ್ಯವನ್ನು ನೀಡಲಾಗುವುದು. ಅರ್ಹ ರೈತರು ಸದುಪಯೋಗಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.28 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ: ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯ 110 ಕೆ.ವಿ ಮೋಕಾ-ಮೀನಹಳ್ಳಿ ಮಾರ್ಗದಲ್ಲಿ ಲಿಲೋ ನಿರ್ಮಾಣ ಕಾರ್ಯವನ್ನು ತುರ್ತಾಗಿ ಕೈಗೆತ್ತಿಕೊಳ್ಳುತ್ತಿರುವುದರಿಂದ ಮಾ.28 ರಂದು ಬೆಳಿಗ್ಗೆ 8 ರಿಂದ ಸಂಜೆ 6 ರ ವರೆಗೆ ಗ್ರಾಮೀಣ ಪ್ರದೇಶಗಳ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ಗ್ರಾಮೀಣ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮೋಹನ್ ಬಾಬು ಅವರು ತಿಳಿಸಿದ್ದಾರೆ.


**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

110/11 ಕೆ.ವಿ ವಿದ್ಯುತ್ ಉಪ-ಕೇಂದ್ರ ಮೋಕಾ ಮಾರ್ಗದ ಮೋಕಾ ಉಪ-ಕೇಂದ್ರದಿಂದ ಹೊರಡುವ ಎಲ್ಲಾ 11 ಕೆ.ವಿ ವಿದ್ಯುತ್ ಮಾರ್ಗಗಳು, 110/11 ಕೆ.ವಿ ವಿದ್ಯುತ್ ಉಪ-ಕೇಂದ್ರ ಮೀನಹಳ್ಳಿ ಮಾರ್ಗದ ಮೀನಹಳ್ಳಿ ಉಪ-ಕೇಂದ್ರದಿಂದ ಹೊರಡುವ ಎಲ್ಲಾ ಕೆ.ವಿ ವಿದ್ಯುತ್ ಮಾರ್ಗಗಳು, 33/11 ವಿದ್ಯುತ್ ಉಪ-ಕೇಂದ್ರ ಯರ್ರಗುಡಿ ಮಾರ್ಗದ ಯರ್ರಗುಡಿ ಉಪ-ಕೇಂದ್ರದಿಂದ ಹೊರಡುವ ಎಲ್ಲಾ 11.ಕೆ.ವಿ ವಿದ್ಯುತ್ ಮಾರ್ಗಗಳು, ಮೆ.ಜಾನಕಿ ಕಾರ್ಪೇ.ಪ್ರೈ.ಲಿ, ಮೆ.ಬಸಾಯಿ ಸ್ಟೀಲ್ ಪ್ರೈ.ಲಿ, ಮೆ.ಕ್ಲೀನ್ ಮ್ಯಾಕ್ಸ್ ಸೋಲಾರ್, ಮೆ.ಕ್ಲೀನ್ ಸೋಲಾರ್, ಮೆ.ಕ್ಲೀನ್ ಸೋಲಾರ್, ಮೆ. ಮೌರ್ಯ ಸೀಲಾಮ್ ಸೋಲಾರ್ ಐ.ಪಿ.ಪಿ ಮಾರ್ಗಗಳು ಸೇರಿದಂತೆ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನಾಮಧೇಯ ಕರೆ ಬಂದಲ್ಲಿ ಎಚ್ಚರದಿಂದಿರಿ: ಬಳ್ಳಾರಿ ಮಹಾನಗರ ಪಾಲಿಕೆಯ ಮನವಿ

ಬಳ್ಳಾರಿ: ಮಹಾನಗರ ಪಾಲಿಕೆಯ ವ್ಯಾಪ್ತಿಯ ಸಾರ್ವಜನಿಕರು ಹಾಗೂ ಉದ್ದಿಮೆದಾರರಿಗೆ ಅನಾಮಧೇಯ ವ್ಯಕ್ತಿಗಳಿಂದ ಕರೆ ಬಂದಲ್ಲಿ ಎಚ್ಚರದಿಂದ ಉತ್ತರಿಸಬೇಕು ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಆಯುಕ್ತ ಜಿ.ಖಲೀಲ್ಸಾಬ್ ಅವರು ಮನವಿ ಮಾಡಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಅನಾಮಧೇಯ ವ್ಯಕ್ತಿಗಳು ಬಳ್ಳಾರಿ ಮಹಾನಗರ ಪಾಲಿಕೆ ಹಾಗೂ ಗ್ರಾಹಕರ ನ್ಯಾಯಾಲಯ ಹೆಸರಿನಲ್ಲಿ ಕರೆಮಾಡಿ ನಿಮ್ಮ ಟ್ಯಾಕ್ಸ್, ಉದ್ದಿಮೆ ಪರವಾನಿಗೆ




ನವೀಕರಣ ಇತ್ಯಾದಿಗಳು ಬಾಕಿ ಇದ್ದು, ತುರ್ತಾಗಿ ಫೋನ್ಪೇ ಮೂಲಕ ಹಣ ಪಾವತಿಸಬೇಕು.

ಇಲ್ಲದಿದ್ದಲ್ಲಿ ಜಪ್ತಿ ಮಾಡಿ, ಪ್ರಕರಣ ದಾಖಲಿಸಲಾಗುವುದು ಎಂದು ಬೆದರಿಸಿ ಹಣವಸೂಲಿ ಮಾಡುತ್ತಿರುವ ಪ್ರಕರಣಗಳು ಪಾಲಿಕೆಯ ಗಮನಕ್ಕೆ ಬಂದಿವೆ.

ಇದಕ್ಕೆ ಸಂಬಂಧಿಸಿದಂತೆ ಈಗಾಗಲೇ ಕೆಲವು ಸಾರ್ವಜನಿಕರಿಂದ ಸೈಬರ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಸಾರ್ವಜನಿಕರು ಈ ರೀತಿ ಕರೆ ಬಂದಲ್ಲಿ ವಂಚನೆಗೆ ಒಳಗಾಗದೇ ಪಾಲಿಕೆಗೆ ಸಂಪರ್ಕಿಸಿ ಖಚಿತಪಡಿಸಿಕೊಳ್ಳಬೇಕು.

ಫೋನ್ಪೇ ಅಥವಾ ಇತರೆ ಡಿಜಿಟಲ್ ಪೇಮೆಂಟ್ ಮೂಲಕ ಪಾವತಿಸಿ ಮೋಸ ಹೋಗಬಾರದು ಎಂದು ಅವರು ತಿಳಿಸಿದ್ದಾರೆ.

ಸಾರ್ವಜನಿಕರು ತಮಗೆ ಬಾಕಿ ಇರುವ ಯಾವುದೇ ಬಿಲ್‌ಅನ್ನು ಆನ್ಲೈನ್ ಮೂಲಕ ಪಾವತಿಸಲು ಇಚ್ಛಿಸಿದಲ್ಲಿ ಭಾರತ್ ಬಿಲ್ ಪೇಮೆಂಟ್ ಸಿಸ್ಟಮ್ (ಬಿಬಿಪಿಎಸ್) ಮೂಲಕ ಪಾವತಿಸುವವರು ಪೌರಾಡಳಿತ ನಿರ್ದೇಶನಾಲಯ ಕರ್ನಾಟಕ ಬಿಲ್ಲರ್ ಐಡಿ ಮೂಲಕ ಮಾತ್ರ ಪಾವತಿಸಬೇಕುಮ ಅಥವಾ ನಗದು ರೂಪದಲ್ಲಿ ಪಾವತಿಸುವವರು ಪಾಲಿಕೆಯ ಕಚೇರಿಯ ಬ್ಯಾಂಕ್ ಆಫ್ ಬರೋಡಾ ನಗದು ಶಾಖೆಯಲ್ಲಿ ಸಂದಾಯ ಮಾಡಬೇಕು.

ಸಾರ್ವಜನಿಕರು ಈ ರೀತಿಯ ಕರೆ ಬಂದಲ್ಲಿ ಜಾಗರೂಕರಾಗಿರಬೇಕು. ಮೋಸ ಹೋಗದೇ ಸೈಬರ್ ಕ್ರೈಂ ಸಹಾಯವಾಣಿ ಸಂಖ್ಯೆ 1930ಕ್ಕೆ ಕರೆಮಾಡಿ ದೂರು ದಾಖಲಿಸಬಹುದು ಎಂದು ಪಾಲಿಕೆಯ ಆಯುಕ್ತ ಜಿ.ಖಲೀಲ್ಸಾಬ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

NEWS

ಬೆಳಗಾವಿ ವರದಿ
WEDNESDAY, 27 MARCH 2024

# ಸಿ-ವಿಜಿಲ್: ಚುನಾವಣಾ ಅಕ್ರಮ ತಡೆಯಲು ಸಾರ್ವಜನಿಕರು ಸಿ-ವಿಜಿಲ್ ಆಪ್‌ನಲ್ಲಿ ದೂರು ಸಲ್ಲಿಸಿ; 100 ನಿಮಿಷದೊಳಗೆ ಸಿಗಲಿದೆ ಪರಿಹಾರ


ಬಳ್ಳಾರಿ: ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣೆಗಳನ್ನು ನಡೆಸಲು ಸಾರ್ವಜನಿಕರ ಪಾತ್ರ ಅತ್ಯಮೂಲ್ಯವಾಗಿದೆ. ಅದೇರೀತಿಯಾಗಿ ಮುಕ್ತ, ಪಾರದರ್ಶಕ ಚುನಾವಣೆ ನಡೆಸಲು ಮತ್ತು ಚುನಾವಣಾ ಅಕ್ರಮ ತಡೆಯಲು ಭಾರತದ ಚುನಾವಣಾ ಆಯೋಗವು ಸಿ-ವಿಜಿಲ್ (C-Vigil) ಮೊಬೈಲ್ ಅಪ್ಲಿಕೇಶನ್ ಅನ್ನು ಅಭಿವೃದ್ಧಿಪಡಿಸಿದೆ.

ಇತ್ತೀಚಿನ ದಿನಗಳಲ್ಲಿ ಎಲ್ಲರ ಬಳಿಯು ಸ್ಮಾರ್ಟ್‌ಫೋನ್ ಇರುವುದು ಸಹಜ. ಅಂಗೈ ತುದಿಯಲ್ಲಿ ಎಲ್ಲ ವಿಕ್ಷೀಸಬಹುದು ಮತ್ತು ಸೆರೆಹಿಡಿಯಬಹುದು. ಸಿ-ವಿಜಿಲ್ ನೊಂದಿಗೆ, ನಿಮ್ಮ ಸ್ಮಾರ್ಟ್‌ಫೋನ್‌ನಿಂದ ನೇರವಾಗಿ ಮಾದರಿ ನೀತಿ ಸಂಹಿತೆಯ ಯಾವುದೇ ಉಲ್ಲಂಘನೆಗಳನ್ನು ನೀವು ವರದಿ ಮಾಡಬಹುದು. ಅದು ಮತದಾರರ ಯಾವುದೇ ಆಮಿಷಗಳ ಅಥವಾ ಅಕ್ರಮ ಪ್ರಚಾರ ಹಾಗೂ ಸರ್ಕಾರಿ ಸಂಪನ್ಮೂಲಗಳ ದುರುಪಯೋಗ ಅಥವಾ ಯಾವುದೇ ರೀತಿಯ ಉಲ್ಲಂಘನೆಯಾಗಿರಬಹುದು. ನಿಮ್ಮ ವರದಿಯು ನಮ್ಮ ಚುನಾವಣೆಗಳ ಸಮಗ್ರತೆಯನ್ನು ಎತ್ತಿಹಿಡಿಯಲು ಸಹಾಯ ಮಾಡುತ್ತದೆ.

ಮತಕ್ಕಾಗಿ ಮತದಾರರನ್ನು ಸೆಳೆಯಲು ಹಣ, ಮದ್ಯ, ಉಡುಗೊರೆಗಳನ್ನು ಹಂಚುವವರನ್ನು ಪೊಲೀಸರಿಗೆ ತಿಳಿಸುವುದು ಹೇಗೆ? ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗುವುದನ್ನು ಹೇಗೆ ತಡೆಗಟ್ಟಬೇಕು ಎಂಬ ಹಲವು ಪ್ರಶ್ನೆಗಳು ಇದ್ದಲ್ಲಿ ಸಿ-ವಿಜಿಲ್ ಆಪ್ (ಸಿಟಿಜನ್-ವಿಜಿಲ್) ಮೂಲಕ ದೂರು ನೀಡಬಹುದು.

**ಸಿ-ವಿಜಿಲ್ ಆಪ್ ಡೌನ್ಲೋಡ್ ಮಾಡಿಕೊಳ್ಳುವುದು ಹೇಗೆ?:**

ಮೊದಲು ಗೂಗಲ್ ಪ್ಲೇಸ್ಟೋರ್ ಅಥ-'ವಾ ಆಪಲ್ ಆಪ್ ಸ್ಟೋರ್‌ನಿಂದ ಸಿ-ವಿಜಿಲ್ ಅಪ್ಲಿಕೇಶನ್ ಅನ್ನು ಡೌನ್ಲೋಡ್ ಮಾಡಿ. ನೀವು ಸಾಕ್ಷಿಯಾಗಿರುವ ಯಾವುದೇ ಚುನಾವಣಾ ಸಂಬಂಧಿತ ಉಲ್ಲಂಘನೆಗಳ ಫೋಟೋಗಳು ಅಥವಾ ವೀಡಿಯೊಗಳನ್ನು ಸೆರೆಹಿಡಿಯಿರಿ. ನಿಮ್ಮ ವರದಿಯನ್ನು ಅಪ್ಲಿಕೇಶನ್ ಮೂಲಕ ಅಪ್ಲೋಡ್ ಮಾಡಿ, ಘಟನೆ ಮತ್ತು ಸ್ಥಳದ ವಿವರಗಳನ್ನು ಒದಗಿಸಿ. ನಿಮ್ಮ ವರದಿಯನ್ನು ಕ್ರಮಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ತ್ವರಿತವಾಗಿ ರವಾನಿಸಲಾಗುತ್ತದೆ.



**ಸಿ-ವಿಜಿಲ್ ಆಪ್ ಕಾರ್ಯ ಹೇಗೆ?:**

ಆಪ್ ಓಪನ್ ಮಾಡಿದಾಗ ನಿಮ್ಮ ಹೆಸರು ಹಾಗೂ ಮೊಬೈಲ್ ಸಂಖ್ಯೆಯ ಹಾಕಿ ರಿಜಿಸ್ಟರ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳು ಮತ್ತು ಅವರ ಬೆಂಬಲಿಗರು ಹಣ, ಮದ್ಯ, ಉಡುಗೊರೆಗಳನ್ನು ಹಂಚುವ ಸಂದರ್ಭದಲ್ಲಿ ಸಾರ್ವಜನಿಕರು ಫೋಟೋ ಮತ್ತು ವಿಡಿಯೋವನ್ನು (2 ನಿಮಿಷ) ಸೆರೆಹಿಡಿದು ಈ ಆಪ್ನಲ್ಲಿ ಅಪ್ಲೋಡ್ ಮಾಡಬಹುದು. ಅಲ್ಲಿನ ವಿಳಾಸವನ್ನು ನಮೂದಿಸಬೇಕು. ಜೊತೆಗೆ ಇದು ಸಂಪೂರ್ಣ ಉಚಿತವಾಗಿರಲಿದೆ.

**ಏನೆಲ್ಲಾ ದೂರು ನೀಡಬಹುದು?:**

ವ್ಯಕ್ತಿಯೊಬ್ಬರು ನಿರ್ದಿಷ್ಟ ವ್ಯಕ್ತಿ ಅಥವಾ ಪಕ್ಷಕ್ಕೆ ಹಣ ವಿತರಣೆ ಮಾಡಿದರೆ, ಉಡುಗೊರೆ, ಮದ್ಯ ಹಂಚಿಕೆ, ಅನುಮತಿ ಪಡೆಯದೇ ಬ್ಯಾನರ್ ಅಥವಾ ಪೋಸ್ಟರ್, ಬೆದ-ರಿಕೆ ಹಾಕುವುದು, ಬಂದೂಕು ಪ್ರದರ್ಶನ, ಧಾರ್ಮಿಕ ಅಥವಾ ಕೋಮು ಕುರಿತು ಪ್ರಚೋದಾರಿತ ಭಾಷಣ, ಮತಗಟ್ಟೆಯ 200 ಮೀಟರ್ ಪ್ರದೇಶದಲ್ಲಿ ನಿಗಧಿಥದ ಅವಧಿಯಲ್ಲೂ ಪ್ರಚಾರ, ಮತದಾನದ ದಿನದಂದು ಮತದಾರರನ್ನು ಸಾಗಿಸುವುದು.. ಹೀಗೆ ಯಾವುದೇ ರೀತಿ ಅಕ್ರಮ ಚಟುವಟಿ-ಕೆಗಳು ಕಂಡು ಬಂದಲ್ಲಿ ಈ ಆಪ್ನಲ್ಲಿ ದೂರು ಕೊಡಬಹುದು. ಒಟ್ಟು 16 ರೀತಿಯ ದೂರುಗಳನ್ನು ನೀಡಬಹುದು.

**100 ನಿಮಿಷಗಳಲ್ಲಿ ಸಿಗಲಿದೆ ಉತ್ತರ:**

ಆಪ್ನಲ್ಲಿ ದಾಖಲಿಸುವ ದೂರುಗಳ ಬಗ್ಗೆ ಜಿಲ್ಲಾ ಮಟ್ಟದ ಸಿ-ವಿಜಿಲ್ ನೋಡೆಲ್ ಅಧಿಕಾರಿಗಳು ಕ್ರಮ ಕೈಗೊಳ್ಳಲಿದ್ದಾರೆ. ಸಾರ್ವಜನಿಕರ ದೂರುಗಳಿಗೆ 100 ನಿಮಿಷಗಳ ಒಳಗೆ ಅಧಿಕಾರಿಗಳ ಉತ್ತರ ಸಿಗಲಿದೆ. ಇದ-ರಿಂದ ಅಭ್ಯರ್ಥಿಗಳು ಮತ್ತು ಕಾರ್ಯಕರ್ತರು ಆಮಿಷಗಳು ಸಾಕ್ಷಿ ಸಮೇತ ದಾಖಲಾಗಲಿವೆ.

ದೂರಿನೊಂದಿಗೆ ಸೆರೆಹಿಡಿಯಲಾದ ಜಿಪಿಎಸ್ ಮಾಹಿತಿಯು ಅದನ್ನು ಸಂಬಂಧಪಟ್ಟ ಜಿಲ್ಲಾ ನಿಯಂತ್ರಣ ಕೊಠಡಿಗೆ ಸ್ವಯಂಚಾಲಿತವಾಗಿ ಫ್ಲಾಗ್ ಮಾಡುತ್ತದೆ. ಫ್ಲೈಯಿಂಗ್ ಸ್ಕ್ವ್ಯಾಡ್ ತಂಡಗಳನ್ನು ಕೆಲವೇ ನಿಮಿಷಗಳಲ್ಲಿ ಸ್ಥಳಕ್ಕೆ ರವಾನಿಸಲು ಅನುವು ಮಾಡಿಕೊಡುತ್ತದೆ.

ಬಳ್ಳಾರಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಈಗಾಗಲೇ ಕಂಟ್ರೋಲ್ ರೂಂ ಮತ್ತು ಸಿ-ವಿಜಿಲ್ ತಂಡ ಕಾರ್ಯಗತವಾಗಿದೆ. ಮಾದರಿ ನೀತಿ ಸಂಹಿತೆ ಜಾರಿಯಾದಾಗಿನಿಂದ ಇಲ್ಲಿಯ (ಮಾ.26)ವರೆಗೆ ಒಟ್ಟು 37 ದೂರುಗಳು ಸಿ-ವಿಜಿಲ್ ಮುಖಾಂತರ ದಾಖಲಾಗಿದ್ದು, 19 ಪ್ರಕರಣಗಳು ವಿಲೇ ಮಾಡಲಾಗಿದೆ.

'ದೂರು ನೀಡುವಾಗ ದೂರುದಾರರ ಹೆಸರು, ವಿಳಾಸವನ್ನು ಗೌಪ್ಯವಾಗಿ ಇಡಲಾಗುತ್ತದೆ. ಚುನಾವಣೆ ಮುಗಿಯುವವರೆಗೂ ಮೂರು ಪಾಳಿಗಳಲ್ಲಿ 24 ಗಂಟೆಗೂ ಚುನಾವಣಾ ಸಿಬ್ಬಂದಿ ಕಾರ್ಯ ನಿರ್ವಹಿಸುವರು' ಎಂದು ಜಿಲ್ಲಾ ಸಿ-ವಿಜಿಲ್ ನೋಡೆಲ್ ಅಧಿಕಾರಿಯಾದ ಸಕೀನಾ ಅವರು ತಿಳಿಸಿದ್ದಾರೆ.

'ಪ್ರಜಾಪ್ರಭುತ್ವಪ್ರಕ್ರಿಯೆಯಲ್ಲಿ ಚುನಾವಣೆಯನ್ನು ಮುಕ್ತ ಮತ್ತು ನ್ಯಾಯಯುತವಾಗಿ ನಡೆಸಲು ಯಾವುದೇ ಚುನಾವಣೆ ಅಕ್ರಮ, ಆಮಿಷ ತಡೆಲು ಸಿವಿಜಿಲ್ ಬಳಸುವ ಮೂಲಕ ಎಲ್ಲರೂ ಒಟ್ಟಾಗಿ ಪ್ರಜಾಪ್ರಭುತ್ವದ ರಕ್ಷಕರಾಗೋಣ' ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

## ಲಂಚ ಪಡೆಯುತ್ತಿದ್ದ ಪಂಚಾಯತ ರಾಜ್ ಅಭಿಯಂತರರ ಬಂಧನ

ಬೆಳಗಾವಿ: ಆಪಾದಿತ ಅಧಿಕಾರಿಯು ಮಾ. 26 ರಂದು ತನ್ನ ಕೊಠಡಿಯಲ್ಲಿ ಫಿರ್ಯಾದಿಯಿಂದ ಲಂಚದ ಹಣವನ್ನು ಸ್ವೀಕ-ರಿಸುವ ವೇಳೆ ಯಶಸ್ವಿಯಾಗಿ ಟ್ರ್ಯಾಪ್ ಮಾಡಿ ಸದರಿ ಸಹಾಯಕ ಕಾರ್ಯಪಾಲಕ ಅಭಿಯಂತರ, ಪಂಚಾಯತ ರಾಜ್ ಉಪವಿಭಾಗ ಖಾನಾಪೂರ ದುರದುಂಡೇಶ್ವರ ಬನ್ನೂರ ರವರನ್ನು ಬಂಧಿಸಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗಿರುತ್ತದೆ.

ಸದರಿ ಕಾಮಗಾರಿಗಳಿಗೆ ತಾಂತ್ರಿಕ ಅನುಮೋದನೆ ನೀಡಲು ಸಹಾಯಕ ಕಾರ್ಯಪಾಲಕ ಅಭಿಯಂತರರಾದ ದುರದುಂಡೇಶ್ವರ ಮಹಾದೇವ ಅವರು ಫಿರ್ಯಾದಿ ವಿನಾಯಕ ಮುತಗೇಕರ ರವ-ರಿಗೆ ರೂ. 10,000 ಲಂಚದ ಹಣಕ್ಕೆ ಬೇಡಿಕೆ ಇಟ್ಟ ಹಿನ್ನೆಲೆಯಲ್ಲಿ ಈ ಬಗ್ಗೆ ಲಂಚ ಕೊಡಲು ಮನಸ್ಸಿಲ್ಲದೇ ಫಿರ್ಯಾದಿದಾರರು ಆಪಾದಿತ ಅಧಿಕಾರಿಯ ಲಂಚ ಬೇಡಿಕೆಯ ಬಗ್ಗೆ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ ಹಿನ್ನೆಲೆಯಲ್ಲಿ ಲೋಕಾಯುಕ್ತರು ದಾಳಿ ಮಾಡಿ ದುರದುಂಡೇಶ್ವರ ಬನ್ನೂರ ಅವರನ್ನು ಬಂಧಿಸುವಲಿ ಯಶಸ್ವಿಯಾಗಿದ್ದಾರೆ.

ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲೂಕಿನ ಕಾಂಜಳೆ ಗ್ರಾಮದ ಸದಸ್ಯನಾಗಿರುವ ನೀಲಾವಡೆ ಗ್ರಾಮ ಪಂಚಾಯತಿಯ 2ನೇ ವಾರ್ಡನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ನರೇಗಾ ಯೋಜನೆಯಡಿ ಮಂಜೂರಾದ ಕಾಮಗಾರಿಗಳಿಗೆ ತಾಂತ್ರಿಕ ಅನುಮೋದನೆ ಮಂಜೂರಾತಿ ಪಡೆಯುವ ಕುರಿತು ನೀಲಾವಡೆ ಗ್ರಾಮ ಪಂಚಾಯತಿಯಿಂದ ಪಂಚಾಯತ ರಾಜ್ ಇಂಜಿನೀಯರಿಂಗ ಉಪವಿಭಾಗ, ಖಾನಾಪೂರ ಕಛೇರಿಗೆ ಆನಲೈನ್ ಮುಖಾಂತರ ಕಳುಹಿಸಲಾಗಿತ್ತು.

ಸದರಿ ಟ್ರ್ಯಾಪ್ ಕಾರ್ಯಾಚರಣೆಯನ್ನು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಹನಮಂತರಾಯ ಮಾರ್ಗದರ್ಶನದಲ್ಲಿ ಡಿ.ಎಸ್.ಪಿ, ಭರತ್. ಎಸ್. ಆರ್, ಪೊಲೀಸ್ ಇನ್ಸ್‌ಪೆಕ್ಟರ್ ರವಿಕುಮಾರ ಧರ್ಮಟ್ಟಿ, ಉಸ್ಮಾನ ಅವಟಿ, ಲೋಕಾಯುಕ್ತ ಪೊಲೀಸ್ ಸಿಬ್ಬಂದಿಗಳಾದ ವಿಠ್ಠಲ ಬಸಕ್ರಿ, ಸಂತೋಷ ಬೇಡಗ, ಗಿರೀಶ ಪಾಟೀಲ, ಲಗಮಣ್ಣಾ ಹೊಸಮನಿ, ಬಸವರಾಜ ಹುದ್ದಾರ, ಬಸವರಾಜ ಕೊಡೊಳ್ಳಿ ತಂಡದವರಿಂದ ಕೈಗೊಳ್ಳಲಾಗಿರುತ್ತದೆ ಎಂದು ಕರ್ನಾಟಕ ಲೋಕಯುಕ್ತ ಬೆಳಗಾವಿ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತದಾನ ಪ್ರಮಾಣ ಹೆಚ್ಚಳಕ್ಕೆ ಸ್ವೀಪ್ ಚಟುವಟಿಕೆ ಪರಿಣಾಮಕಾರಿ ಅನುಗಣ್ಣನಕ್ಕೆ ಸೂಚನೆ: ಜಿಪಂ ಸಿಇಒ

ಬಳ್ಳಾರಿ: ಲೋಕಸಭಾ ಚುನಾವಣೆಯ ಸಂಬಂಧ 92-ಸಿರುಗುಪ್ಪ ಕ್ಷೇತ್ರದಲ್ಲಿ ಮತದಾನದ ಶೇಕಡಾವಾರು ಪ್ರಮಾಣ ಹೆಚ್ಚಿಸಲು ಮತ್ತು ಮತದಾರರಲ್ಲಿ ನೈತಿ-ಕ ಮತದಾನದ ಕುರಿತು ಶಿಕ್ಷಣ ಹಾಗೂ ಜಾಗೃತಿ ಮೂಡಿಸಲು ಪರಿಣಾಮಕಾರಿ ಸ್ವೀಪ್ ಕಾರ್ಯಕ್ರಮ ಅನುಗಣ್ಣನಕ್ಕೆ ಅಧಿಕಾರಿಗಳು ಮುಂದಾಗಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿಯೂ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ತಿಳಿಸಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ತಾಲ್ಲೂಕು ಪಂಚಾಯತ್ ಸಿರುಗುಪ್ಪ, ತಾಲ್ಲೂಕು ಸ್ವೀಪ್ ಸಮಿತಿ ಇವರ ಸಂಂ-ಯುಕ್ತಾಶ್ರಯದಲ್ಲಿ ಮಂಗಳವಾರ ಸಿರುಗುಪ್ಪ ತಾಪಂ ಸಭಾಂಗಣದಲ್ಲಿ ಬೂತ್ಮಟ್ಟದ ಅಧಿಕಾರಿಗಳಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಸಿರುಗುಪ್ಪ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಬಾರಿ ಕಡಿಮೆ ಮತದಾನಗೊಂಡ ವ್ಯಾಪ್ತಿಯ ಸಾರ್ವಜನಿಕರಲ್ಲಿ ನೈಜ ಮತದಾನದ ಅರಿವು ಮೂಡಿಸಬೇಕು. ಮತದಾನದ ಪ್ರಮಾಣ ಹೆಚ್ಚಿಸುವಲ್ಲಿ ಸ್ವೀಪ್ ಸಮಿತಿಯಿಂದ ಸ್ವೀಪ್ ಚಟುವಟಿ-ಕೆ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಹಾಗೂ ಪರಿಣಾಮಕಾರಿಯಾಗಿ ನಿರ್ವಹಿಸಬೇಕು ಎಂದು ಬಿಎಲ್ಓ, ಎಆರ್ಓ, ಸೆಕ್ಟರ್ ಅಧಿಕಾರಿಗಳಿಗೆ ತಿಳಿಸಿದರು.

ವಿಶೇಷ ಚೇತನರು, ಹಿರಿಯ ನಾಗ-ರಿಕರು, ತೃತೀಯಲಿಂಗಿಗಳು ಹಾಗೂ ವಲಸೆ ಕಾರ್ಮಿಕರು ಮತದಾರರ ಪಟ್ಟಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸೇರ್ಪಡೆಗೊಳ್ಳುವ ಸಲುವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಉತ್ತಮ ಯೋಜನೆಗಳನ್ನು ರೂಪಿಸಿಕೊಳ್ಳೂವಂತೆ ಸೂಚಿಸಿದರು.

ಮತದಾನಕ್ಕಿಂತ ಕಡಿಮೆ ಮತದಾನವಾಗಿರುವ ಮತಗಟ್ಟೆಗಳನ್ನು ಗುರುತಿಸಿ ಆ ಭಾಗದಲ್ಲಿ ಸೂಕ್ತ ಯೋಜನೆಗಳನ್ನು ರೂಪಿಸಿಕೊಂಡು ಸ್ವಿಪ್ ಚಟುವಟಿಕೆಗಳನ್ನು ನಡೆಸುವ ಮೂಲಕ ಮತದಾನದ ಪ್ರಮಾಣ ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ಜನಸಾಮಾನ್ಯರಿಗೆ ಮತದಾನದ ಮಹತ್ವದ ಬಗ್ಗೆ ಮತದಾನದ ಹಾಡುಗಳ ಬಗ್ಗೆ ಬೀದಿ ನಾಟಕ, ಕಿರು ನಾಟಕಗಳ ಮೂಲಕ ಜಾಗೃತಿಯನ್ನು ಮೂಡಿಸುವಂತೆ ಸಲಹೆ ನೀಡಿದರು.

ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಜನಸಾಮಾನ್ಯರಿಗೆ ಮನೆ ಮನೆಗಳಿಗೆ ತೆರಳಿ ಮತದಾನದ ಮಹತ್ವದ ಬಗ್ಗೆ ಅರಿವು ಮೂಡಿಸುವಂತೆ ಸೂಚಿಸಿದರು.

ಎಲ್ಲಾ ಸಮಿತಿ ಸದಸ್ಯರು ತಮಗೆ ವಹಿಸಿದ ಕಾರ್ಯಹಂಚಿಕೆ ವ್ಯಾಪ್ತಿಯಲ್ಲಿ ನಡೆಸುವ ಸ್ವೀಪ್ ಚಟುವಟಿಕೆಗಳ ಸಂಬಂಧ ಪ್ರತಿನಿತ್ಯ ಚಟುವಟಿಕೆಗಳನ್ನು ಕೈಗೊಳ್ಳುವ ಮೂಲಕ ಮತದಾರ-ರಿಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ತಹಶೀಲ್ದಾರ ವಿಶ್ವನಾಥ, ತಾಪಂ ಇಓ ಸೇರಿದಂತೆ ಬಿಎಲ್ಓ ಅಧಿಕಾರಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಮೀನು ಹಿಡಿಯಲು ಹೋದ ಇಬ್ಬರು ಯುವಕರು ನೀರಿನಲ್ಲಿ ಮುಳುಗಿ ಸಾವು

ಉಡುಪಿ: ಮೀನು ಹಿಡಿಯಲು ಹೋದ ಇಬ್ಬರು ಯುವಕರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ ಘಟನೆ ಉಡುಪಿ ಜಿಲ್ಲೆಯ ಬ್ರಹ್ಮಾವರ ತಾಲೂಕಿನ ಹೊಸಾಳ ಗ್ರಾಮದ ಸೀತಾ ನದಿಯಲ್ಲಿ ನಡೆದಿದೆ.

ಹೊಸಾಳ ಗ್ರಾಮದ ಶ್ರೀಶ (21) ಹಾಗೂ ಪ್ರಶಾಂತ್ ಪೂಜಾರಿ (30) ಮೃತ ದುರ್ದೈವಿಗಳು. ಮೀನು ಹಿಡಿಯಲೆಂದು ಮಂಗಳವಾರ (ಮಾ.26) ಬೆಳಿಗ್ಗೆ ನಾಗರ ಮಠದ ಸೀತಾ ನದಿಗೆ ಹೋಗಿದ್ದರು. ಈ ವೇಳೆ ಮೀನಿಗೆ ಬಲೆ ಹಾಕುವಾಗ ನೀರಿನ ಸೆಳೆತಕ್ಕೆ ಸಿಲುಕಿ ಇಬ್ಬರು ನೀರು ಪಾಲಾಗಿದ್ದಾರೆ. ಈ ಕುರಿತು ಬ್ರಹ್ಮಾವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

## ಪಿಲಾ ನದಿ ನೀರಿಗೆ ಇಳಿದ ಮೂವರು ಯುವಕರು ನೀರು ಪಾಲು: ಓರ್ವನ ಮೃತದೇಹ ಪತ್ತೆ

ಮೈಸೂರು: ಬಿಸಿಲಿನ ತಾಪ ತಡೆಯಲಾಗದೇ ಈಜಲು ಕಪಿಲಾ ನದಿ ನೀರಿಗೆ ಇಳಿದ ಮೂವರು ಕಾರ್ಮಿಕರು ಸಾವನ್ನಪ್ಪಿರುವ ಘಟನೆ ನಂಜನಗೂಡು ತಾಲೂಕಿನ ಗೊದ್ದನಪುರ ಗ್ರಾಮದ ಬಳಿ ನಡೆದಿದೆ.

ಬಿಹಾರ ಮೂಲದ ಮಿಲನ್ (25), ಮೋಹನ್ (19), ತರುಣ್ (19) ಮೃತ ಕಾರ್ಮಿಕರು. ಮೂಲತಹ ಬಿಹಾರ್ ರಾಜ್ಯದವರಾದ ಇವರು ಮೈಸೂರಿ ನೆಸ್ಲೆ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದರು. ಬಿಸಿಲಿನ ಸೆಕೆ ತಾಳಲಾರದೆ ಈಜಲು ಎಂದು ಕಪಿಲ ನದಿ ನೀರಿಗೆ ಇಳಿದಿದ್ದಾರೆ. ಆದರೆ ಈ ವೇಳೆ ನದಿ ನೀರಿನ ಸುಳಿಗೆ ಸಿಕ್ಕ ಮೂವರು ಯುವರಕು ಹೊರ ಬರಲಾಗಿಲ್ಲ. ಇದರಿಂದ ನೀರಿನಲ್ಲಿ ಮುಳುಗಿ ಮೂವರು ಸಾವನ್ನಪ್ಪಿದ್ದಾರೆ.

ಸದ್ಯ ಈ ಮಾಹಿತಿ ತಿಳಿಯುತ್ತಿದ್ದಂತೆ ಘಟನಾ ಸ್ಥಳಕ್ಕೆ ನಂಜನಗೂಡು ಗ್ರಾಮಾಂತರ ಠಾಣೆಯ ಪೊಲೀಸರು, ಅಗ್ನಿಶಾಮಕ ಸಿಬ್ಬಂದಿ ಆಗಮಿಸಿ ನೀರಿನಲ್ಲಿ ಶೋಧ ಕಾರ್ಯ ಆರಂಭಿಸಿದ್ದಾರೆ.

ಈ ವೇಳೆ ಮಿಲನ್ ಮೃತದೇಹ ಪತ್ತೆಯಾಗಿದ್ದು ಹೊರ ತೆಗೆಯಲಾಗಿದೆ. ಆದರೆ ಇನ್ನಿಬ್ಬರ ಮೃತದೇಹಗಳಿಗಾಗಿ ಪೊಲೀಸರು ಕಾರ್ಯಾಚರಣೆ ಮುಂದುವರೆಸಿದ್ದಾರೆ.

## ಇಂಡಿಯಾ ಬುಕ್ ಆಫ್ ರೆಕಾರ್ಡ್‌ಗೆ ಮತ್ತೆ ಆಯ್ಕೆಯಾದ ಬಾಲಕಿ ಅಧಿತ್ರಿ




ಶಿರಸಿ: ತಾಲೂಕಿನ ಹುಣಸೇಕೊಪ್ಪದ ಐದೂವರೆ ವರ್ಷದ ಅಧಿತ್ರಿ ನಾಗರಾಜ ಹೆಗಡೆ ಇವಳು ಎರಡನೆಯ ಬಾರಿ ಇಂಡಿಯಾ ಬುಕ್ ಆಫ್ ರೆಕಾರ್ಡ್ ಗೆ ಆಯ್ಕೆಯಾಗಿದ್ದಾಳೆ.

ಕರ್ನಾಟಕದ ಇತಿಹಾಸ, ರಾಜಮನೆತನಗಳು ,ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು, ದೇವಸ್ಥಾನಗಳು, ಪ್ರಸಿದ್ಧ ಕಂಪನಿಗಳು, ಕರ್ನಾಟಕದ ಚಿಹ್ನೆಗಳು, ವಿಧಾನಸಭಾ ಕ್ಷೇತ್ರಗಳು ಹೀಗೆ ಕರ್ನಾಟಕದ ಕುರಿತು 700ಕ್ಕೂ ಹೆಚ್ಚು ರಸಪ್ರಶ್ನೆಗಳನ್ನು ಕನ್ನಡದಲ್ಲಿ ಉತ್ತರಿಸುವ ಮೂಲಕ ಇಂಡಿಯಾ ಬುಕ್ ಆಫ್ ರೆಕಾರ್ಡ್ಗೆ ಆಯ್ಕೆಯಾಗಿದ್ದಾಳೆ. ಕರ್ನಾಟಕದ ಬಗ್ಗೆ ಹೆಚ್ಚು ಜ್ಞಾನಹೊಂದಲು ತುಂಬಾ ಆಸಕ್ತಿ ಹೊಂದಿದ್ದಾಳೆ.

ಎರಡು ವರ್ಷದ ಹತ್ತು ತಿಂಗಳಾಗಿದ್ದಾಗ ಮೊದಲ ಬಾರಿ ಇಂಡಿಂ-ಯಾ ಬುಕ್ ಆಫ್ ರೆಕಾರ್ಡಗೆ ಆಯ್ಕೆ ಆಗಿದ್ದಳು.

ಶಂಕರಹೆಗಡೆ ಮತ್ತು ಮಂಜುಳಾ ಹೆಗಡೆಯವರ ಮೊಮ್ಮಗಳು. ಉಡುಪಿಯಲ್ಲಿ ನೆಲೆಸಿರುವ ನಾಗರಾಜ ಹೆಗಡೆ ಮತ್ತು ಸುಚೇತಾ ಹೆಗಡೆಯವರ ಮಗಳಾಗಿದ್ದಾಳೆ.

## ಅಂಚೆ ಮತ ಪತ್ರ ವಿತರಣೆ ಕಾರ್ಯ ವ್ಯವಸ್ಥಿತವಾಗಿರಲಿ: ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ

ಬಳ್ಳಾರಿ: ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ಜಿಲ್ಲೆಯಲ್ಲಿ ಅಗತ್ಯ ಸೇವೆಗಳಡಿ ಕಾರ್ಯನಿರ್ವಹಿಸುತ್ತಿರುವ ಕೇಂದ್ರ ಮತ್ತು ರಾಜ್ಯ ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಅಂಚೆ ಮತ ಪತ್ರಗಳ ವಿತರಣಾ ಕಾರ್ಯವನ್ನು ಅತ್ಯಂತ ವ್ಯವಸ್ಥಿತವಾಗಿ ಕೈಗೊಳ್ಳಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ನಿರ್ದೇಶನ ನೀಡಿದರು.



ಅವರು, ಮಂಗಳವಾರ ಜಿಲ್ಲಾಧಿಕಾ-ರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಅಂಚೆ ಮತ ಪತ್ರ ವಿತರಣೆ ಕುರಿತು ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಚುನಾವಣಾ ಪ್ರಕ್ರಿಯೆಯಲ್ಲಿ ತೊಡಗಿರುವವರಿಗೆ ಹಾಗೂ ಅಗತ್ಯ ಸೇವೆಗಳಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ನೌಕರರಿಗೆ ಅಂಚೆ ಮತ ಪತ್ರದ ಮೂಲಕ ಮತದಾನ ಸೌಲಭ್ಯ ಲಭ್ಯವಿದೆ. ಎಲ್ಲರೂ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಅಗತ್ಯ ಸೇವೆಗಳಡಿ ಬರುವ ಜೆಸ್ಕಾಂ, ಬಿಎಸ್‌ಎನ್‌ಎಲ್, ರೈಲ್ವೇ, ಅಂಚೆ ಇಲಾಖೆ, ದೂರದರ್ಶನ, ಆಲ್ ಇಂಡಿಯಾ ರೇಡಿಯೋ, ಆರೋಗ್ಯ ಸೇವೆ, ಸಾರಿಗೆ, ಟ್ರಾಫಿಕ್, ಕೆಪಿಸಿಎಲ್, ಬಿಟಿಪಿಎಸ್, ಅಂಬುಲೆನ್ಸ್ ಹಾಗೂ ಇತರೆ ಸೇವೆಗಳಡಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಮಾತ್ರ ಅಂಚೆ ಮತ ಪತ್ರ ವಿತರಣೆ ಮಾಡಬೇಕು ಎಂದರು.

ಅಗತ್ಯ ಸೇವೆಗಳಡಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ, ಉಳಿದೆಲ್ಲವರೂ ಕಡ್ಡಾಯವಾಗಿ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕು. ಈ ಕುರಿತು ನಿಗಾವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಒಮ್ಮೆ ಅಂಚೆ ಮತದಾನಕ್ಕೆ ಅರ್ಜಿ ಸಲ್ಲಿಸಿದಲ್ಲಿ ಮತಕೇಂದ್ರಕ್ಕೆ ಬಂದು ಮತದಾನ ಮಾಡಲು ಚುನಾವಣಾ ಅಯೋಗವು ಅವಕಾಶ ಕಲ್ಪಿಸುವುದಿಲ್ಲ. ಈ ವಿಷಯವನ್ನು ಮನವರಿಕೆ ಮಾಡಿಕೊಡಬೇಕು ಎಂದು ತಿಳಿಸಿದರು.

ಚುನಾವಣಾ ಆಯೋಗದ ಸೂಚನೆಯಂತೆ ಅಂಚೆ ಮತ ಪತ್ರ ವಿತರಣೆ ಮಾಡಲಾಗಿದ್ದು, ನಿಗಧಿತ ದಿನದೊಳಗೆ ಅಂಚೆ ಮತಪತ್ರ ಸ್ವೀಕಾರ ಮಾಡಿಕೊಳ್ಳಬೇಕು. ನಮೂನೆ-12 ಡಿ ಸರಿಯಾಗಿ ಭರ್ತಿ ಮಾಡಿ ಸಂಬಂಧಿಸಿದ ನೋಡೆಲ್ ಅಧಿಕಾರಿಗಳಿಗೆ ಹಾರ್ಡ್ ಮತ್ತು ಸ್ಕ್ಯಾನ್ ಮಾಡಿದ ಸಾಫ್ಟ್ ಕಾಪಿ ಪತ್ರಗಳನ್ನು ಮೇಲ್ ಮೂಲಕ ಸಲ್ಲಿಸಬೇಕು. ಇದರಿಂದ ಆಯಾ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಗೆ ಸಲ್ಲಿಸಲು ಅನುಕೂಲವಾಗಲಿದೆ ಎಂದು ತಿಳಿಸಿದರು.

ನಿಗದಿತ ಅವಧಿಯೊಳಗೆ ನಮೂನೆ 12-ಡಿ ಸಂಗ್ರಹಿಸುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು, ಯಾವುದೇ ಅರ್ಹ ಮತದಾರರು ಈ ಸೌಲಭ್ಯದಿಂದ ವಂಚಿತರಾಗದಂತೆ ಎಚ್ಚರವಹಿಸುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಅಂಚೆ ಪತ್ರ ವಿತರಣೆ ನೋಡೆಲ್ ಅಧಿಕಾರಿ ಚಂದ್ರಶೇಖರ್, ಮೌನೇಶ್ ಸೇರಿದಂತೆ ಕೇಂದ್ರ, ರಾಜ್ಯ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು: ಮಹಾಂತೇಶ ಭಜಂತ್ರಿ

ಬೆಳಗಾವಿ: ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ನೀಡುವ ಈ ತರಬೇತಿ ಜಿಲ್ಲಾ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು/ಅಧಿಕಾ-ರಿಗಳಿಗೆ ಹಾಗೂ ಶುಶ್ರೂಷಕಿಯರಿಗೆ ತುಂಬಾ ಮಹತ್ವವಾಗಿದ್ದು, ದತ್ತು ಅಧಿನಿಯಮ ಕಾಯ್ದೆ-2022ರ ತಿದ್ದುಪಡಿಯು ತುಂಬಾ ಮಹತ್ವವಾಗಿದ್ದು, ಈ ವಿಷಯದ ಬಗ್ಗೆ ಎಲ್ಲ ಶಿಬಿರಾರ್ಥಿಗಳು ಚೆನ್ನಾಗಿ ತಿಳಿದುಕೊಳ್ಳಬೇಕು ಎಂದು ಬೆಳಗಾವಿಯ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕರಾದ ಡಾ.ಅಶೋಕ ಕುಮಾರ ಶೆಟ್ಟಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಬೆಳಗಾವಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವೈದ್ಯಕೀಯ ವಿಜ್ಞಾನ ಸಂಸ್ಥೆ ಬೆಳಗಾವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಬೆಳಗಾವಿ ಇವರ ಸಂಯುಕ್ತಾಶ್ರಯದಲ್ಲಿ ಮಾ. 21 ರಂದು ನಿರ್ದೇಶನಾಲಯದಲ್ಲಿ ದತ್ತು ಅದಿನಿಯಮ ಕಾಯ್ದೆ-2022ರ ಹಾಗೂ ಮಮತೆಯ ತೊಟ್ಟಿಲು ಮತ್ತು 18 ವರ್ಷದೊಳಗಿನ ಗರ್ಭಿಣಿಯರಿಗೆ ಮಕ್ಕಳ ರಕ್ಷಣಾ ಸೌಲಭ್ಯಗಳ ಕುರಿತು ಜಿಲ್ಲಾ ಆಸ್ಪತ್ರೆಯ ವೈದ್ಯರಿಗೆ, ಅಧಿಕಾರಿಗಳಿಗೆ, ಶುಶ್ರೂಷಕಿಯರಿಗೆ ಮತ್ತು ಸಿಬ್ಬಂದಿಗಳಿಗೆ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾ-ರಿಗಳಾದ ಮಹಾಂತೇಶ ಭಜಂತ್ರಿ ಅವರು ಮಾತನಾಡಿ, ಭಾವಿ ದತ್ತು ತಂದೆ ತಾಯಂದಿರು ಕಾನೂನು ಬದ್ಧವಾಗಿ ಒಂದು ಮಗುವಿನ ಜವಾಬ್ದಾರಿ, ಆ ಮಗುವಿನ ಹಕ್ಕು ಸವಲತ್ತುಗಳು ಮತ್ತು ಜವಾಬ್ದಾರಿಗಳ ಸಹಿತ ತೆಗೆದುಕೊಳ್ಳುವ ಪ್ರಕ್ರಿಯವನ್ನು ದತ್ತು ಸ್ವೀಕಾರ ಮಾಡಬೇಕು. ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು, ಅವಶ್ಯವಿರುವ ಪ್ರೀತಿ ಮತ್ತು ಆರೈಕೆಯನ್ನು ಕುಟುಂಬದ ವಾತಾವರಣವು ಕಲ್ಪಿಸುತ್ತದೆ ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ ಪರಿತ್ಯಕ್ತ ನಿರ್ಗತಿಕ ಮಕ್ಕಳ ಪುನರ ವಸತಿಗೆ ನೆರವಾಗುವ ಒಂದು ಸೂಕ್ತ ಕಾರ್ಯಕ್ರಮವಾಗಿದೆ ಎಂದರು.

ಕಾನೂನು ಬಾಹಿರ ದತ್ತು ಆಗುವುದಿಲ್ಲಾ ನಿಮ್ಮ ಸ್ವತ್ತು ಕಾನೂನುನಡಿ ಪಡೆದ ದತ್ತು ಜೀವನವಿಡೀ ಸುಖದ ಸಂಪತ್ತು ಮಕ್ಕಳನ್ನು ಮಾರುವುದು, ಕೊಳ್ಳುವುದು ಅಥ-'ವಾ ಕಾನೂನು ಬಾಹಿರ ದತ್ತು ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದು ಕಾನೂನು ರೀತಿ ಶಿಕ್ಷಾರ್ಹ ಅಪರಾದ ಒಂದು ವೇಳೆ ಈ ಅಪರಾಧದಲ್ಲಿ ಬಾಗಿಯಾದಲ್ಲಿ 05 ವ್ಥರ್ಷದವರಿಗೆ ಕಠಿಣ ಶಿಕ್ಷೆ ಹಾಗೂ ರೂ. 1.00 ಲಕ್ಷ ದಂಡ. ಆಸ್ಪತ್ರೆ ಸಿಬ್ಬಂದಿಗಳು ಬಾಗಿಯಾದಲ್ಲಿ 07 ವ್ಥರ್ಷದವ-ರಿಗೆ ಕಠಿಣ ಶಿಕ್ಷೆ ಹಾಗೂ ರೂ. 1.00 ಲಕ್ಷ ದಂಡ. ಇರುತ್ತದೆ ಹಾಗೂ ಮಮತೆಯ ತೊಟ್ಟಿಲು ಕಾರ್ಯಕ್ರಮವು ತುಂಬಾ ಮಹತ್ವವಾಗಿದೆ ಎಂದರು.



ಮಗು ಬೇಡವಾದಲ್ಲಿ ಕಸದ ತೊಟ್ಟಿ ,ಆಸ್ಪತ್ರೆ ಆವರಣಾ, ಶೌಚಾಲಯ, ರಸ್ತೆ ಬದಿ ಹಾಗೂ ಪೊದೆಗಳಲ್ಲಿ ಬಿಸಾಡಿ ಎಳೆಯ ಜೀವಗಳನ್ನು ಹಿಂಸಿಸಬೇಡಿ, ಪರಿತ್ಯಕ್ತ ಮಕ್ಕಳ ರಕ್ಷಣೆಗಾಗಿ ಇರುವ ಮಮತೆಯ ತೊಟ್ಟಿಲುಗಳಲ್ಲಿ ಮಕ್ಕಳನ್ನು ಬಿಡಿ. ಮಕ್ಕಳನ್ನು ಸಂರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಆಗಿರುತ್ತದೆ ಹಾಗೂ 1989 ನವೆಂಬರ್ 20 ರಂದು ವಿಶ್ವಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಡಿಕೆ ಜಾರಿ ಮಾಡಿದ್ದು, ಮಕ್ಕಳ ಹಿತರಕ್ಷಣೆ ಕಾರ್ಯಕ್ಷೇತ್ರಕ್ಕೆ ಮುಖ್ಯಬೆಂಬಲ ಹಾಗೂ ಚಿಂತನೆ ನೀಡಿದ್ದು ಮಕ್ಕಳೇ ದೇಶದ ಆಸ್ತಿ ಮತ್ತು 196 ದೇಶಗಳು ಈ ಒಡಂಬಿಕೆಗೆ ಸಹಿ ಹಾಕಿದ್ದು, ಅತೀ ಹೆಚ್ಚು ದೇಶಗಳು ಸಹಿ ಮಾಡಿದ ಐತಿಹಾಸಿಕ ಒಡಂಬಡಿಕೆಯಾಗಿದೆ ಎಂದು ಮಹಾಂತೇಶ ಭಜಂತ್ರಿ ಅವರು ಹೇಳಿದರು.

ಇಂದಿನ ಮಕ್ಕಳೇ ಇಂದಿನ ದೇಶದ ಪ್ರಜೆಗಳು, ಈ ದೇಶದ ಭವಿಷತ್ತು ತಮ್ಮ ಹಕ್ಕುಗಳನ್ನು ಪ್ರತಿದಿನ ಅನುಭವಿಸುವಂತಾಗಬೇಕು. ಆದ್ದರಿಂದ ಈ ದೇಶ ಅಭಿವೃದ್ಧಿ ಹೊಂದ ಬೇಕಾದರೆ ನಮ್ಮ ಮಕ್ಕಳ ಅಭಿವೃದ್ಧಿ ಹೊಂದಬೇಕು. ಯಾವ ಮಕ್ಕಳು ಸಹ ರಕ್ತ ಹಿನತೆಯಿಂದ, ಮಾನಸಿಕ ಕಾಯಿಲೆಗಳಿಂದ, ಇತರೆ ಯಾವುದೇ ಖಾಯಿಲೆಗಳಿಂದ ಬಳಲಬಾರದು ಹಾಗೂ ನಿಮ್ಮ ಸುತ್ತ ಮುತ್ತಲಿನ ಪ್ರದೇಶದಲ್ಲಿ ಯಾರಾದರು ಅನಾಥ ಏಕಪೋಷಕ, ಪರಿತ್ಯಕ್ತ ಮಕ್ಕಳು, ಬಾಲಕಾರ್ಮಿಕ ವಿಶೇಷ ನ್ಯೂನ್ಯತೆ ಹೊಂದಿರುವವರು, ಜೈಲು ಖೈದಿವಾಸಿ ಮಕ್ಕಳು, ಸಾಂಕ್ರಾಮಿಕ ರೋಗಳನ್ನು ಹೊಂದಿರುವ ಮಕ್ಕಳು ಕಂಡು ಬಂದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಕರೆ ಮಾಡಿ ನಾವು ನಿಮ್ಮ ಸೇವೆಗೆ 24/07ಘಂಟೆಗಳ ಕಾಲ ಸದಾ ಸಿದ್ದರಿದ್ದೇವೆ. ಯಾವ ಮಕ್ಕಳು ಸಹ ಸೌಲಭ್ಯಗಳಿಂದ ವಂಚಿತರಾಗಬಾರದು ಎಂದು ತಿಳಿಸಿದರು.

ಬೇಳಗಾವಿಯ ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿಗಳಾದ ಸರೋಜಾ ತಿಗಡಿ ಮಾತನಾಡಿ, ಇತ್ತಿಚಿನ ದಿನಗಳಲ್ಲಿ ಮಕ್ಕಳಿಗೆ ಯಾವುದೇ ಸ್ಥಳದಲ್ಲಿ ರಕ್ಷಣೆ ಇಲ್ಲದಂತಾಗಿದೆ. ಬಹಳ ಹತ್ತಿರ ಇರುವ ಜನರಿಂದ ಮಕ್ಕಳ ಮೇಲೆ ತೊಂದರೆ, ದೌರ್ಜನ್ಯ ಆಗುತ್ತಿರುವುದು ಕಂಡು ಬರುತ್ತಿದೆ.

ಮಕ್ಕಳು ಸರಿಯಾದ ರೀತಿಯಲ್ಲಿ ಆಹಾರ ಸೇವಿಸುತ್ತಿಲ್ಲ. ಆದ್ದರಿಂದ ಸಾಕಷ್ಟು ಮಕ್ಕಳು ರಕ್ತ ಹೀನತೆಯಿಂದ ಬಳಲುತ್ತಿದ್ದು, ಅವರ ಆರೋಗ್ಯದಲ್ಲಿ ಪೌಷ್ಠಿಕಾಂಶ ತುಂಬಾ ಕಡಿಮೆ ಇರುತ್ತದೆ.

ಆದ್ದರಿಂದ ಎಲ್ಲ ಮಕ್ಕಳು ಒಳ್ಳೆಯ ಪೌಷ್ಠಿಕ ಆಹಾರವಾದ ಮೊಳಕೆ ಬಂದಿರುವ ಕಾಳುಗಳು, ಹಾಲು, ಹಣ್ಣು, ಹಸರು ತರಕಾರಿ, ದ್ರಾಕ್ಷಿ, ಗೊಡಂಬಿ, ಕಜೂರ, ಶೇಂಗಾ, ಬೆಲ್ಲ ಹೀಗೆ ಮಕ್ಕಳ ಆರೋಗ್ಯದಲ್ಲಿ ಶಕ್ತಿ ಬರುವ ಆಹಾರವನ್ನು ಕೊಡಬೇಕು ಅಂದಾಗ ಮಾತ್ರ ಮಕ್ಕಳು ದೈಹಿಕವಾಗಿ ಸದೃಢವಾಗಿರುತ್ತಾರೆ. ಗರ್ಭಿಣಿಯರು ಸಮಯಕ್ಕೆ ಸರಿಯಾಗಿ ಪೌಷ್ಠಿಕ ಆಹಾರ ಹಾಗೂ ಮಾತ್ರೆಗಳನ್ನು/ಟಿಟಿ ಇಂಜಕ್ಸನ್ ತೆಗೆದುಕೊಂಡು ಸರಿಯಾಗಿ ತಮ್ಮ ಆರೋಗ್ಯ ಕಾಪಾಡಿಕೊಂಡು "ಆರೋಗ್ಯವೇ ಭಾಗ್ಯ" ಎಂಬ ನಾನ್ನುಡಿಯಂತೆ ನಿಮ್ಮ ಆರೋಗ್ಯ ಬಗ್ಗೆ ಕಾಳಜಿ ವಹಿಸಬೇಕು ಎಂದು ಹೇಳಿದರು.

ಬೆಳಗಾವಿ ಜಿಲ್ಲಾ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕರು ಈರಣ್ಣಾ ಪಲ್ಲೇದ ಮಾತನಾಡಿ, ಇತ್ತೀಚಿನ ದಿನದಲ್ಲಿ ಮಕ್ಕಳ ಮೇಲಾಗುವ ದೌರ್ಜನ್ಯಗಳು ಹೆಚ್ಚಾಗುತ್ತಿದ್ದು, ಅದನ್ನು ತಡೆಯುವ ನಿಟ್ಟನಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕವು ಕಾರ್ಯ ಮಾಡಬೇಕಿದೆ. ಇತ್ತೀಚೆಗೆ 15-16 ವರ್ಷದೊಳಗಿನ ಹೆಣ್ಣು ಮಕ್ಕಳು ಗರ್ಭಿಣಿಯಾಗುತ್ತಿದ್ದು, ಅವರ ಗರ್ಭಕೋಶ ಸರಿಯಾಗಿ ಬೆಳವಣಿಗೆ ಆಗಿರುವುದಿಲ್ಲ, ಅವರ ಹೆರಿಗೆ ಸಮಯದಲ್ಲಿ ಸಾಯುವ ಸಂದರ್ಭ ಇರುತ್ತದೆ. ಅವರಿಗೆ ಮುಂದೆ ಜನಿಸುವ ಮಕ್ಕಳು ಅಪೌಷ್ಠಿಕತೆಯಿಂದ ರಕ್ತಹೀನತೆಯಿಂದ ದೈಹಿಕವಾಗಿ ಅಂಗವಿಕಲತೆಯಿಂದ ಮಾನಸಿಕವಾಗಿ ಅಸ್ಥವ್ಯಸ್ಥ ನ್ಯೂನ್ಯತೆಯಿಂದ ಜನಿಸುವ ಸಾಧ್ಯತೆ ತುಂಬಾ ಇರುತ್ತದೆ. ಆದ್ದರಿಂದ ಹೆಣ್ಣುಮಕ್ಕಳಿಗೆ 18 ವರ್ಷ ಮುಗಿಯುವವರೆಗೆ ವಿವಾಹ ಮಾಡಬಾರದು ಎಂದು ಹೇಳಿದರು.

ರಮೇಶ ಕೊರಿದರು, ಮಕ್ಕಳ ಸಹಾಯವಾಣಿ ಸಂಯೋಜಕರು ಮಲ್ಲಪ್ಪಾ ಕುಂದರಗಿ, ಮಹೇಶ ಸಂಗಾನಟ್ಟಿ ಜಿಲ್ಲಾ ಆಸ್ಪತ್ರೆಯ ವೈದ್ಯರು, ಅಧಿಕಾರಿಗಳು, ಶುಶ್ರೂಷಕಿಯರಿಗೆ" ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕಾಂಗ್ರೆಸ್ ಮಾಡಿದ ಅಭಿವೃದ್ಧಿಯಿಂದ ಇಂದು ಭಾರತ ವಿಶ್ವಗುರು ಆಗಿದೆ

## ಬೆಳಗಾವಿ– ಚಿಕ್ಕೋಡಿ ಎರಡೂ ಕ್ಷೇತ್ರಗಳನ್ನು ಗೆಲ್ಲಿಸುವ ಸಂದೇಶ ನಮಗೆ ಬಂದಿದೆ: ಸತೀಶ್ ಜಾರಕಿಹೊಳಿ

ಬೆಳಗಾವಿ: ಬೆಳಗಾವಿ ಮತ್ತು ಚಿಕ್ಕೋಡಿ ಎರಡೂ ಕ್ಷೇತ್ರಗಳನ್ನು ಗೆಲ್ಲಿಸುವ ಸಂದೇಶ ನಮಗೆ ಬಂದಿದ್ದು, ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆ ಉತ್ತಮ ವಾತಾವರಣವಿದೆ ಎಂದು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ನಗರದ ಗಾಂಧಿ ಭವನದಲ್ಲಿ ಇಂದು ನಡೆದ ಬೆಳಗಾವಿ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಬೆಳಗಾವಿ ಉತ್ತರ ಕಾರ್ಯಕರ್ತರ ಸಭೆಯಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಬೆಳಗಾವಿ ಮತ್ತು ಚಿಕ್ಕೋಡಿಯಲ್ಲಿ ಆಂತರಿಕ ಸಮೀಕ್ಷೆ ನಡೆಸಿದೆ. ಎರಡೂ ಕಡೆ ಹೆಚ್ಚಿನ ಅಂತರದಿಂದ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲುವ ಭರವಸೆ ಮೂಡಿದೆ. ಕಳೆದ 50 ವರ್ಷಗಳಲ್ಲಿ ಅನೇಕ ಅಭಿವೃದ್ಧಿ ಮಾಡಿದ್ದೇವೆ. ಜನರ ಜೀವನ ಮಟ್ಟ ಎತ್ತರಿಸಿದ್ದೇವೆ. ಈಗ ನಮ್ಮ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳ ಲಾಭದ ಬಗ್ಗೆ ಜನರಿಗೆ ಮನವರಿಕೆ ಮಾಡಿಕೊಡುವ ಕೆಲಸವನ್ನು ಕಾರ್ಯಕರ್ತರು ಮಾಡಬೇಕು. 10 ವರ್ಷಗಳ ಮೋದಿ ಸರ್ಕಾರದ ವೈಫಲ್ಯಗಳನ್ನು ಜನರಿಗೆ ತಿಳಿಸಬೇಕು ಎಂದು ಕರೆ ನೀಡಿದರು.

ಬಿಜೆಪಿಯವರು ನೀಡಿದ್ದ ಒಂದೇ ಒಂದು ಭರವಸೆ ಈಡೇರಿಸಿಲ್ಲ. ಬುಲೆಟ್ ಟ್ರೇನ್, ರೈತರ ಆದಾಯ ದ್ವಿಗುಣ, ಪ್ರತಿಯೊಬ್ಬರಿಗೆ 15 ಲಕ್ಷ ರೂ. ಸ್ವಿಸ್ ಬ್ಯಾಂಕ್ ನಿಂದ ಹಣ ವಾಪಸ್ಸು ತರುವುದು ಸೇರಿ ಅನೇಕ ಭರವಸೆ ಕೊಟ್ಟಿದ್ದರು. ಆದರೆ, ಏನೂ ಮಾಡಿಲ್ಲ. ಮಹಿಳೆಯರು, ಬಡವರು, ಎಸ್ಸಿ, ಎಸ್ಟಿಗಳಿಗೆ ಏನು ಮಾಡಿದ್ದಾರೆ? ಪುಷ್ಪಕ ವಿಮಾನ ಕಥೆ ಅಷ್ಟೇ ಹೇಳಿದ್ದಾರೆ. ಜಲಾಶಯ, ಇಸ್ರೋ, ವಿಶ್ವವಿದ್ಯಾಲಯ, ಐಐಟಿ ಸೇರಿ ಅನೇಕ ಸಂಸ್ಥೆಗಳನ್ನು ಕಟ್ಟಿದ್ದು ಕಾಂಗ್ರೆಸ್. ಕಾಂಗ್ರೆಸ್ ಮಾಡಿದ ಅಭಿವೃದ್ಧಿಯಿಂದ ಇಂದು ಭಾರತ ವಿಶ್ವಗುರು ಆಗಿದೆ. ಮೃಣಾಲ್ ಭವಿಷ್ಯದ ನಾಯಕ. ಮುಂದೆ ಪಕ್ಷ ಮತ್ತು ಜಿಲ್ಲೆಗೆ ದೊಡ್ಡ ಆಸ್ತಿಯಾಗಲಿದ್ದಾರೆ. ಅವರನ್ನು ಎಲ್ಲರೂ ಬೆಂಬಲಿಸಬೇಕು ಎಂದರು.

ಮೃಣಾಲ್ ಮತ್ತು ಪ್ರಿಯಾಂಕಾ ಇಬ್ಬರೂ ತಮ್ಮ ಭವಿಷ್ಯವನ್ನು ತ್ಯಾಗ ಮಾಡಿ ಲೋಕಸಭೆಗೆ ಸ್ಪರ್ಧಿಸುತ್ತಿದ್ದಾರೆ. ಅವರಿಗೆ ಎಂಪಿ ಆಗುವ ಅವಶ್ಯಕತೆ ಇರಲಿಲ್ಲ. ವಿದೇಶದಲ್ಲಿ ಉನ್ನತ ಹುದ್ದೆಯಲ್ಲಿ ಆರಾಮವಾಗಿ ಇರಬಹುದಿತ್ತು. ಆದರೆ, ನಮ್ಮ ಒತ್ತಾಯಕ್ಕೆ ಜನರ ಸೇವೆ ಮಾಡಲು ಚುನಾವಣೆ ಕಣಕ್ಕೆ ಧುಮುಕಿದ್ದಾರೆ. ಒಂದಿಷ್ಟು ಜನರು ಇವ್ರು ಸಣ್ಣವರು ಎನ್ನುತ್ತಿದ್ದಾರೆ. ಈಗ ಸಣ್ಣವರೇ ಮುಂದೆ ದೊಡ್ಡವರಾಗುತ್ತಾರೆ. ರಾಜಕೀಯ ಹೊಸದಾಗಿ ಇರಬಹುದು. ಆದರೆ, ನಾಲ್ಕೈದು ವರ್ಷಗಳಿಂದ ಸಮಾಜಸೇವೆ ಮಾಡುತ್ತಿದ್ದಾರೆ. ಕೊರೊನಾ, ಪ್ರವಾಹ ಸಂದರ್ಭದಲ್ಲಿ ಜನರ ಪರವಾಗಿ ಕೆಲಸ ಮಾಡಿದ್ದಾರೆ ಎಂದು ಜಾರಕಿಹೊಳಿ ಹೇಳಿದರು.

ದೇಶದಲ್ಲಿ ವಿರೋಧ ಪಕ್ಷವನ್ನು ಸಂಪೂರ್ಣವಾಗಿ ನಾಶ ಮಾಡುವ ಹುನ್ನಾರ ನಡೆದಿದೆ. ಜನ ಮನಸ್ಸು ಮಾಡಿದರೆ ಯಾವ ಬದಲಾವಣೆ ಬೇಕಾದರೂ ಆಗುತ್ತದೆ. ಮೃಣಾಲ್, ಪ್ರಿಯಾಂಕಾ ಎಂಪಿ ಆಗುವುದರಲ್ಲಿ ಸಂಶಯವೇ ಇಲ್ಲ. ಚಿಕ್ಕ ವಯಸ್ಸಿನ ಸಂಸದರನ್ನು ಸಂಸತ್ತಿಗೆ ಕಳಿಸಿ ಕೊಟ್ಟ ಶ್ರೇಯ ಬೆಳಗಾವಿ ಮತ್ತು ಚಿಕ್ಕೋಡಿಗೆ ಸಲ್ಲಲಿದೆ ಎಂದು ಸತೀಶ ಜಾರಕಿಹೊಳಿ ಹೇಳಿದರು.



**ಬೆಳಗಾವಿ ಪುತ್ರ ಮೃಣಾಲ್ ಆಯ್ಕೆ ಮಾಡಿ – ಲಕ್ಷ್ಮೀ ಹೆಬ್ಬಾಳಕರ್**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾತನಾಡಿ, ಬೆಳಗಾವಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಬೆಳಗಾವಿ ಪುತ್ರ, ಲೋಕಲ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಗೆ ಆಶೀರ್ವಾದ ಮಾಡುವಂತೆ ಮನವಿ ಮಾಡಿಕೊಂಡರು.

ಬೆಳಗಾವಿ ಮತ್ತು ಚಿಕ್ಕೋಡಿ ಲೋಕಸಭೆ ಕ್ಷೇತ್ರಗಳು ಇಡೀ ದೇಶದ ಗಮನ ಸೆಳೆದಿವೆ. ಯಾಕೆಂದರೆ ಇಲ್ಲಿ ಕಾಂಗ್ರೆಸ್ ಯುವಕ–ರಿಗೆ ಅವಕಾಶ ಮಾಡಿಕೊಟ್ಟಿದೆ. ಸತೀಶ ಜಾರಕಿಹೊಳಿ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ ಸೇರಿದಂತೆ ಜಿಲ್ಲೆಯ ಎಲ್ಲ ನಾಯಕರ ಆಶೀರ್ವಾದದಿಂದ ನನ್ನ ಪುತ್ರನಿಗೆ ಟಿಕೆಟ್ ಸಿಕ್ಕಿದ್ದು, ಇವರಿಗೆಲ್ಲಾ ನಾನು ಚಿರಋಣಿ ಆಗಿರುತ್ತೇನೆ. ಇನ್ನು ಬೆಳಗಾವಿ ಮತ್ತು ಚಿಕ್ಕೋಡಿ ಕ್ಷೇತ್ರಗಳನ್ನು ಖಂಡಿತವಾಗಲೂ ಕಾಂಗ್ರೆಸ್ ತೆಕ್ಕೆಗೆ ತೆಗೆದುಕೊಳ್ಳುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನಮ್ಮ ಗ್ಯಾರಂಟಿ ಯೋಜನೆಗಳಿಂದ ತಮಗೆ ಉಪಯೋಗ ಆಗಿದೆಯೋ ಇಲ್ಲವೋ ಎಂದು ನೆರೆದಿದ್ದ ಮಹಿಳೆಯರನ್ನು ಕಾರ್ಯಕ್ರಮದಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಶ್ನಿಸಿದಾಗ ಕೈ ಮೇಲೆ ಎತ್ತಿ ನಮಗೆ ಉಪಯೋಗ ಆಗಿದೆ ಎಂಬ ಉತ್ತರ ಮಹಿಳೆಯರಿಂದ ಕೇಳಿ ಬಂತು.

ಇಡೀ ವಿಶ್ವದಲ್ಲೇ ಜನರಿಗೆ ಅನುಕೂಲ ಆಗುವ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆ ಕೊಟ್ಟಿದ್ದು ನಮ್ಮ ಕಾಂಗ್ರೆಸ್ ಸರ್ಕಾರ. ಎರಡನೇ ರಾಜಧಾನಿ ಬೆಳಗಾವಿ ಅಭಿವೃದ್ಧಿ ಬಗ್ಗೆ ದೆಹಲಿಯಲ್ಲಿ ಗಟ್ಟಿಯಾಗಿ ಧ್ವನಿ ಎತ್ತುವ ಸಂಸದರ ಅವಶ್ಯಕತೆಯಿದೆ. ಬೆಳಗಾವಿಗೆ ಏನಾದರೂ ಮಾಡಬೇಕು ಎಂಬ ತುಡಿತ ಹೊಂದಿರುವ ಯುವಕ ಮೃಣಾಲ್ ಗೆ ಆಶೀರ್ವಾದ ಮಾಡಬೇಕು. ಬೆಳಗಾವಿ ಜಿಲ್ಲೆ ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಇಲ್ಲಿ ಅಷ್ಟೊಂದು ಅಭಿವೃದ್ಧಿ ಆಗಿಲ್ಲ. ಇದಕ್ಕೆ ಅನುದಾನ ತೆಗೆದುಕೊಂಡು ಬರುವಷ್ಟು ಇಚ್ಛಾಶಕ್ತಿ ಹೊಂದಿರುವ ಸಂಸದರು ಇರಲಿಲ್ಲ. ನಾನು ಹೇಗೆ ಕೆಲಸ ಮಾಡುತ್ತೇನೋ ಅದೇ ರೀತಿ ನನ್ನ ಪುತ್ರ ಕೂಡ ಒಳ್ಳೆಯ ಕೆಲಸ ಮಾಡುವ ಮೂಲಕ ಜನರ ಮನಸ್ಸನ್ನು ಗೆಲ್ಲುತ್ತಾನೆ ಎಂದರು.

ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಮಾತನಾಡಿ, ಯುವಕರೇ ಈ ದೇಶದ ಆಸ್ತಿ, ಭವಿಷ್ಯ ಎಂದು ಬೆಳಗಾವಿಯಲ್ಲಿ ನನಗೆ ಮತ್ತು ಚಿಕ್ಕೋಡಿಯಲ್ಲಿ ಸಹೋದರಿ ಪ್ರಿಯಾಂಕಾಗೆ ಪಕ್ಷದ ವ–ರಿಷ್ಠರು ಅವಕಾಶ ಮಾಡಿಕೊಟ್ಟಿದ್ದಾರೆ. ಕೊಟ್ಟ ಮಾತಿನಂತೆ ಗ್ಯಾರಂಟಿ ಯೋಜನೆಗಳನ್ನು ಮನೆ ಮನೆಗೆ ನಮ್ಮ ಕಾಂಗ್ರೆಸ್ ಸರ್ಕಾರ ತಲುಪಿಸಿದೆ. ಇದರಿಂದ ಜನ ತುಂಬಾ ಖುಷಿಯಲ್ಲಿದ್ದಾರೆ. ನನಗೊಂದು ಸುವರ್ಣಾವಕಾಶ ಸಿಕ್ಕಿದ್ದು, ದಯವಿಟ್ಟು ನನಗೆ ನೀವು ಆಶೀರ್ವಾದ ಮಾಡಬೇಕು ಎಂದು ಕೇಳಿಕೊಂಡರು.

**ಸಂಸತ್ತಿನಲ್ಲಿ ನಿಂತು ಮಾತಾಡುವ ಧೈರ್ಯ ಬಿಜೆಪಿ ಸಂಸದರಿಗಿಲ್ಲ – ಚನ್ನರಾಜ ಹಟ್ಟಿಹೊಳಿ**

ವಿಧಾನಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಅತ್ಯಂತ ಮಹತ್ವದ ಲೋಕಸಭೆ ಚುನಾವಣೆ ಬಂದಿದೆ. ದೇಶ, ರಾಜ್ಯ ಸಂಕಷ್ಟದಲ್ಲಿದೆ. ಸಂವಿಧಾನ, ಪ್ರಜಾಪ್ರಭುತ್ವ ಅಪಾಯದಲ್ಲಿದೆ. ಇಲ್ಲಿ ನಾವೆಲ್ಲಾ ಪ್ರಜ್ಞಾವಂತರು ಸೇರಿದ್ದೇವೆ. ಬೆಳಗಾವಿ ಉತ್ತರ ಪ್ರಜ್ಞಾವಂತ ಮತದಾರರನ್ನು ಹೊಂದಿರುವ ಕ್ಷೇತ್ರ. ಐದು ವರ್ಷ ಯಾವ ಪಕ್ಷ ದೇಶದ ಚುಕ್ಕಾಣಿ ಹಿಡಿಬೇಕು ಎಂಬುದನ್ನು ನಿರ್ಧ–ರಿಸಲು ಈಗ ಅವಕಾಶ ಬಂದಿದೆ. ನಾವು ಲೋಕಸಭೆ ಚುನಾವಣೆಯಲ್ಲಿ ಯೋಚಿಸಿ ಮತ ಹಾಕಬೇಕಿದೆ. ಸಂವಿಧಾನ, ಪ್ರಜಾಪ್ರಭುತ್ವದ ರಕ್ಷಣೆ ಮಾಡೋಣ, ಸರ್ವಾಧಿಕಾರವನ್ನು ತೊಡೆದು ಹಾಕಿ. ಬೆಳಗಾವಿ ಮತ್ತು ಚಿಕ್ಕೋಡಿ ಎರಡೂ ಕ್ಷೇತ್ರದಲ್ಲಿ ನಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸೋಣ ಎಂದರು.

ಬೆಲೆ ಏರಿಕೆ ನೀತಿ, ನಿರುದ್ಯೋಗ ಸಮಸ್ಯೆ ಬಗ್ಗೆ ಯಾರೂ ಮಾತಾಡುತ್ತಿಲ್ಲ. ಇಡಿ, ಐಟಿ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ದೇಶವನ್ನು ತಪ್ಪು ದಾರಿಗೆ ಇವ್ರು ತೆಗೆದುಕೊಂಡು ಹೋಗುತ್ತಿದ್ದಾರೆ. ಮೋದಿಯನ್ನು ನೋಡಿ ವೋಟ್ ಹಾಕುವಂತೆ ಕೇಳಿಕೊಳ್ಳುವ ಇವರಿಗೆ ಸಂಸತ್ತಿನಲ್ಲಿ ನಿಂತು ಮಾತಾಡುವ ಧೈರ್ಯ ಇಲ್ಲ. ಕೇಂದ್ರದಿಂದ ರಾಜ್ಯಕ್ಕೆ ಬರಬೇಕಿರುವ ತೆರಿಗೆ ಹಣದ ಬಗ್ಗೆ ಪ್ರಶ್ನೆ ಮಾಡುವ ಶಕ್ತಿ ರಾಜ್ಯದ ಸಂಸದರಿಗಿಲ್ಲ. ತಮ್ಮದೇ ಪಕ್ಷದ ಪ್ರಧಾನಮಂತ್ರಿ ಮುಂದೆ ಮಾತಾಡುವ ತಾಕತ್ತು ಬಿಜೆಪಿ ಸಂಸದರಿಗಿಲ್ಲ ಎಂದು ಚನ್ನರಾಜ ಹಟ್ಟಿಹೊಳಿ ಹರಿಹಾಯ್ದರು.

ಕೇಂದ್ರ, ರಾಜ್ಯ ನಾಯಕರು ಒಮ್ಮತದಿಂದ ಯುವಕ ಮೃಣಾಲ್ ಗೆ ಟಿಕೆಟ್ ನೀಡಿದ್ದಾರೆ. ಮೃಣಾಲ್ ಜೊತೆ ನಾವೆಲ್ಲಾ ನಿಂತು ಆಶೀರ್ವಾದ ಮಾಡಿದರೆ ಮುಂದೆ ಜಿಲ್ಲೆಯ ಆಸ್ತಿಯಾಗಲಿದ್ದಾರೆ ಎಂದು ಚನ್ನರಾಜ ಹಟ್ಟಿಹೊಳಿ ವಿಶ್ವಾಸ ವ್ಯಕ್ತಪಡಿಸಿದರು.

ಈ ವೇಳೆ ಬೆಳಗಾವಿ ಉತ್ತರ ಶಾಸಕ ಆಸೀಫ್(ರಾಜು) ಸೇಠ್, ಮಾಜಿ ಸಚಿವರಾದ ಎ.ಬಿ.ಪಾಟೀಲ, ಶಶಿಕಾಂತ ನಾಯಿಕ, ಮಾಜಿ ಶಾಸಕ ಕಾಕಾಸಾಹೇಬ ಪಾಟೀಲ, ಬೆಳಗಾವಿ ಗ್ರಾಮೀಣ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ಚಿಕ್ಕೋಡಿ ಜಿಲ್ಲಾಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಬಾರ್ ಅಸೋಸಿಯೇಷನ್ ಅಧ್ಯಕ್ಷ ಎಸ್.ಎಸ್. ಕಿವಡಸಣ್ಣವರ, ಆರ್ಪಿ.ಪಾಟೀಲ, ಯುವರಾಜ ಕದಂ, ಕಿರಣ ಸಾಧುನವರ್, ಸುನಿಲ್ ಹನಮಣ್ಣವರ್, ಮುಜಮಿಲ್ ಡೋಣಿ, ಸಿ.ಬಿ.ಪಾಟೀಲ್, ಬೈರೆಗೌಡ ಕಣಬರ್ಗಿ, ಸುಧೀರ್ ಗಡ್ಡೆ, ಮಲ್ಲೇಶ್ ಚೌಗುಲೆ, ರಾಜದೀಪ್ ಕೌಜಲಗಿ, ಸೇವಾದಳ ಹಾಗೂ ಪಕ್ಷದ ಕಾರ್ಯಕರ್ತರು ಇದ್ದರು.

## ಚುನಾವಣಾ ಕಾರ್ಯಗಳಿಗೆ ಮಕ್ಕಳನ್ನು ಬಳಸದಂತೆ ಆದೇಶ

ಬೆಳಗಾವಿ: ಲೋಕಸಭಾ ಚುನಾವಣೆಯಲ್ಲಿ ಚುನಾವಣಾ ಕಾರ್ಯಗಳಿಗೆ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಷೇಧಿಸಲು ಮುಖ್ಯ ಚುನಾವಣಾಧಿಕಾರಿಯವರು ಕಛೇರಿ ಬೆಂಗಳೂರುರವರು ಸೂಚಿಸಿರುತ್ತಾರೆ.

ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ & ನಿಯಂತ್ರಣ) ಕಾಯ್ದೆ 1986 ರನ್ವಯ ಯಾವುದೇ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಹಾಗೂ 14 ರಿಂದ 18 ವಯಸ್ಸಿನ ಕಿಶೋರ ಕಾರ್ಮಿಕ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನಿಯೋಜಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ.

ಬಾಲ ನ್ಯಾಯ (ಆರೈಕೆ & ರಕ್ಷಣೆ) ಕಾಯ್ದೆ 2015 ಹಾಗೂ ರಾಷ್ಟ್ರೀಯ ಮಕ್ಕಳ ಹಕ್ಕುಗಳ ಒಡಂಬಡಿಕೆ 1989ರನ್ವಯ ಮಕ್ಕಳನ್ನು ಅವರ ಅಭಿವೃದ್ದಿಗೆ ಹಾನಿ ಮಾಡುವ ಯಾವುದೇ ಚಟುವಟಿ–ಕೆಗಳಿಂದ ರಕ್ಷಿಸಬೇಕು ಎಂದು ತಿಳಿಸುತ್ತದೆ.

ಈಗ ಲೋಕಸಭಾ ಚುನಾವಣಾ ಪ್ರಚಾರದ ಸಮಯದಲ್ಲಿ ವಿವಿಧ ರಾಜಕೀಯ ಪಕ್ಷಗಳು ಬಹು ವಿದಧ ಚಟುವಟಿಕೆಗಳಲ್ಲಿ ಬಳಸಿಕೊಳ್ಳುವುದನ್ನು ನಿಷೇಧಿಸಲಾಗಿದೆ. ಅಂದರೆ ಮಕ್ಕಳು ಯಾವುದೇ ಚುನಾವಣಾ ಪ್ರಚಾರದಲ್ಲಿ ಬಳಸದಂತೆ ಕರಪತ್ರ ಹಾಗೂ ಪೋಸ್ಟರ್ ಹಂಚಲು ಅಥವಾ ಘೋಷಣೆ ಕೂಗುವುದು, ಚುನಾವಣಾ ಸಭೆ, ಬಡಿಂಗ್ಸ ಕಟ್ಟುವುದು, ಪ್ರಚಾರ ವಾಹನದ ಮೇಲೆ ಮಕ್ಕಳನ್ನು ಕೂರಿಸುವುದು, ಪ್ರಚಾರ ಸಭೆಗಳಲ್ಲಿ ಮಕ್ಕಳನ್ನು ಬಳಸದಂತೆ ನಿರ್ದೇಶಿಸಲಾಗಿದೆ. ಮುಂದುವರಿದು ಲೋಕಸಭಾ ಸಾರ್ವತ್ರಿಕ ಚುನಾವಣೆ 2024ಗೆ ಯಾವುದೇ ಪಕ್ಷಗಳು ಚುನಾವಣೆ ಮತ್ತು ಪ್ರಚಾರ ಕಾರ್ಯಗಳಲ್ಲಿ 18 ವಯಸ್ಸಿನೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ಕ್ರಮ ವಹಿಸಲು ಹಾಗೂ ಉಲ್ಲಂಘನೆ ಕಂಡು ಬಂದಲ್ಲಿ ಕಾಯ್ದೆಯ ಕಲಂ ಅನ್ವಯ ಅಗತ್ಯ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ತಿಳಿಸಲಾಗಿದೆ. ಇಂತಹ ಪ್ರಕರಣಗಳು ಕಂಡು ಬಂದಲ್ಲಿ ಮಕ್ಕಳ ಸಹಾಯವಾಣಿ 1098/112, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಮಾಹಿತಿ ನೀಡಲು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟನೆಯಲ್ಲಿ ತಿಳಿಸಲಾಗಿದೆ.

## ಇಂದು ಮತದಾರರ ಜಾಗೃತಿ ಜಾಥಾ

ಬೆಳಗಾವಿ: ಲೋಕಸಭಾ ಚುನಾವಣೆ–2024ರ ಅಂಗವಾಗಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರಿಗೆ ಜಾಗೃತಿ ಮೂಡಿಸು ಉದ್ದೇಶದಿಂದ ಮಾ.27 ರಂದು ಬೆಳಗ್ಗೆ 8.30 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇ–ರಿಯಿಂದ ಚನ್ನಮ್ಮ ವೃತ್ತ ಮಾರ್ಗವಾಗಿ, ಕಾಕವೇಸ್ ರಸ್ತೆ, ಗಣಪತಿ ಗಲ್ಲಿ, ಕಿರ್ಲೋಸ್ಕರ್ ರಸ್ತೆ, ಬೋಗಾರ್‌ವೇಸ್ ವೃತ್ತದವರೆಗೆ ಮತದಾರರ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ ಎಂದು ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ಶಿಂಧೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ನಿಯ ಅನೈತಿಕ ಸಂಬಂಧ ಬೇಸತ್ತು ಪತಿ ಆತ್ಮಹತ್ಯೆ



ಬೆಂಗಳೂರು: ಪತ್ನಿಯ ಅನೈತಿ–ಕ ಸಂಬಂಧ ಮತ್ತು ವಿಚ್ಛೇದನ ಪಡೆಯಲು 5 ಕೋಟಿ ಹಣ–ಕ್ಕೆ ಡಿಮ್ಯಾಂಡ್ ಮಾಡಿದ ಹಿನ್ನೆಲೆ ಪತಿ ಆತ್ಮಹತ್ಯೆ ಮಾಡಿಕೊಂಡ ಆರೋಪ ಕೇಳಿಬಂದಿದೆ. ಪತ್ನಿಯ ಕಿರುಕುಳ ತಾಳಲಾಗದೆ ಗೋಡೆ ಮೇಲೆಯೇ ಡೆತ್ ನೋಟ್ ಬರೆದು ಪತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಸೈಯದ್ ಅಕ್ಮಲ್ ಅನ್ಸರ್ (34) ಆತ್ಮಹತ್ಯೆಗೆ ಶರಣಾದ ಪತಿ. ಘಟನೆ ಸಂಬಂಧ ಪತ್ನಿ ಖತೀಜತುಲ್ ಕುಬ್ರಾ, ಮಾವ ಮುನಾವರ್ ಸುಬಾನ್, ಪತ್ನಿಯ ಸಂಬಂಧಿಕರಾದ ಅಖೀಬ್, ಅಬ್ದುಲ್ ರಹಮ್ಮಾನ್ ಮನ್ಸೂರ್ ಸೇರಿದಂತೆ ಏಳು ಜನರ ಮೇಲೆ ಎಫ್‌ಐಆರ್ ದಾಖಲಾಗಿದೆ.

## ಗ್ಯಾರಂಟಿ ಯೋಜನೆಗಳೇ ಕೈ ಪಕ್ಷದ ಗೆಲುವಿಗೆ ಶ್ರೀರಕ್ಷೆ: ಯುವ ನಾಯಕ ರಾಹುಲ್ ಜಾರಕಿಹೊಳಿ

ಬೆಳಗಾವಿ: ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರ ವಿಶೇಷ ಜನಪರ ಕಾರ್ಯಕ್ರಮಗಳೊಂದಿಗೆ ಅಭಿವದ್ಧಿಯ ಕ್ರಾಂತಿ ಗೆ ಮುನ್ನುಡಿ ಬರೆದಿದೆ. ಇದು ಲೋಕಸಭೆಯ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿಗೆ ಶ್ರೀರಕ್ಷೆಯಾಗಲಿದೆ ಎಂದು ಯುವ ನಾಯಕ ರಾಹುಲ್ ಜಾರಕಿಹೊಳಿ ಹೇಳಿದರು.



ಚಿಕ್ಕೋಡಿ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ರಾಯಬಾಗ ವಿಧಾನಸಭಾ ಕ್ಷೇತ್ರದ ಹತ್ತರವಾಡ ಗ್ರಾಮದಲ್ಲಿ ಬೂತ್ ಮಟ್ಟದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿ, ರೈತರು, ಕೂಲಿ ಕಾರ್ಮಿಕರು, ಬಡವರು, ಮಧ್ಯಮ ವರ್ಗದವರು ಸೇರಿದಂತೆ ಎಲ್ಲರೂ ನೆಮ್ಮದಿಯಿಂದ ಬದುಕು ಸಾಗಿಸಲು ಈ ಬಾರಿ ಕಾಂಗ್ರೆಸ್‌ಗೆ ಮತ ನೀಡಬೇಕು. ಭ್ರಷ್ಟಾಚಾರ ಮುಕ್ತ ಅಧಿಕಾರ ನೀಡಲು ನಮ್ಮ ಸಹೋದರಿ ಪ್ರಿಯಾಂಕಾ ಜಾರಕಿಹೊಳಿ ಅವರಿಗೆ ಒಂದು ಅವಕಾಶ ಮಾಡಿಕೊಡಬೇಕು ಎಂದು ಹೇಳಿದರು.

ಕೂಲಿ ಕಾರ್ಮಿಕರು, ಗಾರ್ಮೆಂಟ್ಸ್‌ನಲ್ಲಿ ಕೆಲಸ ಮಾಡುತ್ತಿರುವ ತಾಯಂದಿರು, ಅಕ್ಕ ತಂಗಿಯರು ಬೆಲೆ ಏರಿಕೆಯಿಂದ ಜೀವನ ಸಾಗಿಸಲು ಕಷ್ಟಪಡುವಂತಾಗಿದೆ. ಅವರ ನೆರವಿಗೆ ಕಾಂಗ್ರೆಸ್ ಪಕ್ಷ ಇರಲಿದ್ದು, ಸ್ವಂತ ಮತ್ತು ಬಾಡಿಗೆ ಮನೆಯಲ್ಲಿ ವಾಸ ಮಾಡುತ್ತಿರುವ ನಾಗರಿಕರಿಗೆ ಉಚಿತ ವಿದ್ಯುತ್, ಕುಟುಂಬದ ಯಜಮಾನಿಗೆ 2 ಸಾವಿರ ರು. ತಲಾ 10ಕೆಜಿ ಅಕ್ಕಿ. ಹೈಟೆಕ್ ಮಾದರಿಯಲ್ಲಿ ಶಿಕ್ಷಣ ನೀಡುವುದಾಗಿ ಪಕ್ಷ ಘೋಷಣೆ ಮಾಡಿದೆ. ನಮ್ಮ ಪಕ್ಷ ಅಧಿಕಾರಕ್ಕೆ ಬಂದ ಕೂಡಲೇ ಎಲ್ಲಾ ಭರವಸೆಗಳನ್ನು ಈಡೇರಿಸಲು ಗ್ಯಾರಂಟಿ ಕಾರ್ಡ್ ಗಳನ್ನು ನೀಡಿದ್ದು ಈ ಎಲ್ಲ ಯೋಜನೆ ಈಡೇರಲು ಕಾಂಗ್ರೆಸ್‌ಗೆ ಬೆಂಬಲಿಸಿ ಎಂದರು.

ಇದೆ ವೇಳೆ ಯುವ ನಾಯಕ ರಾಹುಲ್ ಜಾರಕಿಹೊಳಿ ಸಮ್ಮುಖದಲ್ಲಿ ಹತ್ತರವಾಡ ಗ್ರಾಮದ ಮುಖಂಡರು ಹಾಗೂ ಯುವಕರು ಕಾಂಗ್ರೆಸ್ ಪಕ್ಷದ ಜನಪರ ಯೋಜನೆಗಳನ್ನು ಮೆಚ್ಚಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಈ ಸಂದರ್ಭದಲ್ಲಿ ಮುಖಂಡರಾದ ಮಹಾವೀರ ಮೊಹಿತೆ ಸೇರಿದಂತೆ ಹತ್ತರವಾಡ ಗ್ರಾಮದ ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

## ಸ್ವೀಪ್ ಸಮಿತಿಯಿಂದ ಸೀಗೆಹಟ್ಟಿಯಲ್ಲಿ ಮತದಾನ ಜಾಗೃತಿ

ಶಿವಮೊಗ್ಗ: ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಸೀಗೆಹಟ್ಟಿ ಇಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಚುನಾವಣೆಯ ಪ್ರಯುಕ್ತ ಮಂಗಳವಾರ ಮತದಾನ ಜಾಗೃತಿ ಕಾರ್ಯಕ್ರಮ ನಡೆಸಲಾಯಿತು.



ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆಯುತ್ತಿದ್ದ ವಾರ್ಡ್ ಸಭೆಯ ವೇಳೆಯಲ್ಲಿ ಹಾಜರಿದ್ದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ವೀಪ್ ಸಮಿತಿಯಿಂದ ಚುನಾವಣಾ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಅರ್ಹ ಮತದಾರರು ಚುನಾವಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ತಮ್ಮ ಅಂಗನವಾಡಿ ಕ್ಷೇತ್ರದಲ್ಲಿ ಬರುವಂತಹ ಮತದಾರರನ್ನು ಭೇಟಿ ಮಾಡಿ ಚುನಾವಣೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ ಮತದಾನ ಮಾಡುವಂತೆ ಅರಿವು ಮೂಡಿಸುಂತೆ ಮನವರಿಕೆ ಮಾಡಲಾಯಿತು.

## ಟ್ಯೂಷನ್‌ನ ಶಿಕ್ಷಕನ ಸಹೋದರನಿಂದ ನಾಲ್ಕು ವರ್ಷದ ಬಾಲಕಿ ಮೇಲೆ ಅತ್ಯಾಚಾರ

ದೆಹಲಿ : ಟ್ಯೂಶನ್ ಶಿಕ್ಷಕರ ಸಹೋದರನೋರ್ವ ನಾಲ್ಕು ವರ್ಷದ ಬಾಲಕಿ ಮೇಲೆ ಅತ್ಯಾಚಾರವೆಸಗಿದ ಘಟನೆ ದೆಹಲಿಯ ಪಾಂಡವನಗರದಲ್ಲಿ ನಡೆದಿದೆ ಎಂದು ವರದಿಯಾಗಿದೆ.



ಇನ್ನೂ ಘಟನೆಯ ಕುರಿತು ಮಂಡಾವಲಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದು, ಆರೋಪಿಯನ್ನು ಅರೆಸ್ಟ್ ಮಾಡಲಾಗಿದೆ. ಶಿಕ್ಷಕರು ಬೇರೆಡೆ ಇದ್ದ ವೇಳೆ ಅವರ ಸಹೋದರ ಬಾಲಕಿ ಮೇಲೆ ಅತ್ಯಾಚಾರ ಮಾಡಿದ್ದಾನೆ.

ಬಾಲಕಿಯು ಅಳುತ್ತ ಮನೆಗೆ ಬಂದಾಗ ಕೃತ್ಯ ಬಹಿರಂಗವಾಗಿದೆ ಕೂಡಲೇ ಬಾಲಕಿಯ ಪೋಷಕರು ಮಾಂಡವಲಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. 34 ವರ್ಷದ ಮೊಹಮ್ಮದ್ ಅಪ್ಪು ಎಂಬಾತನು ಅತ್ಯಾಚಾರ ಎಸಗಿದ್ದಾನೆ ಎಂಬುದಾಗಿ ದೂರಿನಲ್ಲಿ ತಿಳಿಸಲಾಗಿದೆ.

ಕೂಡಲೇ ಕಾರ್ಯಪ್ರವೃತ್ತರಾದ ಪೊಲೀಸರು ಮೊಹಮ್ಮದ್‌ನನ್ನು ಬಂಧಿಸಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿ ಸಾಗರ್ ಸಿಂಗ್ ಮಾಹಿತಿ ನೀಡಿದ್ದಾರೆ.

ಬಾಲಕಿಯ ಗುಪ್ತಾಂಗದಲ್ಲಿ ಬಾವು ಕಾಣಿಸಿಕೊಂಡಿದ್ದನ್ನು ಗಮನಿಸಿದ ಪೋಷಕರು ದೂರು ನೀಡಿದ್ದಾರೆ ಎಂದು ತಿಳಿದುಬಂದಿದೆ. ಸದ್ಯ, ಬಾಲಕಿಗೆ ಏಮ್ಸ್‌ನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ನಾಲ್ಕು ವರ್ಷದ ಬಾಲಕಿ ಮೇಲೆ ಅತ್ಯಾಚಾರ ನಡೆಸಲಾಗಿದೆ ಎಂಬ ಪ್ರಕರಣ ಬಯಲಾಗುತ್ತಲೇ ಪಾಂಡವ ನಗರದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ. ಬಾಲಕಿಯ ಸಂಬಂಧಿಕರು ಸೇರಿ ನೂರಾರು ಜನ ಪೊಲೀಸ್ ಠಾಣೆ ಸೇರಿ ಹಲವೆಡೆ ಪ್ರತಿಭಟನೆ ನಡೆಸಿದ್ದು, ಕಾರುಗಳನ್ನು ಧ್ವಂಸಗೊಳಿಸಿದ್ದಾರೆ ಎಂದು ವರದಿ ತಿಳಿಸಿದೆ.

## ಸಾರಿಗೆ ಸಂಸ್ಥೆ ಬಸ್‌ಗಳಲ್ಲಿ ನೀತಿ ಸಂಹಿತೆ ಉಲ್ಲಂಘನೆಯ ವಸ್ತು ಸಾಗಾಟ ನಿಷೇಧ



ಹುಬ್ಬಳ್ಳಿ: ಲೋಕಸಭೆ ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಸಾಗಿಸುವ ಸರಕುಗಳ ಮೇಲೆ ನಿಗಾ ವಹಿಸಲಾಗುತ್ತಿದ್ದು, ಬಸ್ಸುಗಳಲ್ಲಿ ಸೂಕ್ತ ದಾಖಲೆಗಳಿಲ್ಲದ, ನೀತಿ ಸಂಹಿತೆ ಉಲ್ಲಂಘಿಸುವ ವಸ್ತುಗಳ ಸಾಗಾಟಕ್ಕೆ ಅನುಮತಿಸದಂತೆ ನಿರ್ವಾಹಕರು ಹಾಗೂ ಚಾಲಕರಿಗೆ ಸೂಚನೆ ನೀಡಲಾಗಿದೆ. ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಮತದಾರರಿಗೆ ಆಮಿಷವೊಡ್ಡುವಂತಹ ವಸ್ತುಗಳು ಸೇರಿದಂತೆ ದಾಖಲೆಗಳಿಲ್ಲದ ಸರಕು ಸಾಗಣೆ ಮಾಡುವಂತಿಲ್ಲ. ಅಲ್ಲದೆ, ರಾಜಕೀಯ ಪ್ರಚಾರದ ವಸ್ತುಗಳನ್ನು ಬಸ್ಸಿನಲ್ಲಿ ಪ್ರದರ್ಶಿಸುವಂತಿಲ್ಲ ಹಾಗೂ ಇತರೆ ಪ್ರಯಾಣಿಕರಿಗೆ ಹಂಚುವಂತಿಲ್ಲ. ಯಾವುದೇ ರಾಜಕೀಯ ಪಕ್ಷ ಅಥವಾ ವ್ಯಕ್ತಿಗೆ ಸಂಬಧಪಟ್ಟ ಕರಪತ್ರ, ಬ್ಯಾನರ್ ಸೇರಿದಂತೆ ಇನ್ನಿತರೆ ನಿರ್ಬಂಧಿತ ವಸ್ತುಗಳನ್ನು ಸಾಗಾಣಿಕೆ ಮಾಡಲು ಅನುಮತಿಸದಂತೆ ನಿರ್ದೇಶನ ನೀಡಲಾಗಿರುತ್ತದೆ.

ಲೋಕಸಭೆ ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ನಿಷೇಧಿಸಲ್ಪಟ್ಟಿರುವ ವಸ್ತುಗಳು ಹಾಗೂ ಸೂಕ್ತ ದಾಖಲೆಗಳಿಲ್ಲದ ಹಣ, ಚಿನ್ನ, ಬೆಳ್ಳಿ ಇತ್ಯಾದಿಗಳನ್ನು ಸಾಗಾಣಿಕೆ ಮಾಡದಂತೆ ಹಾಗೂ ನಿಯಮ ಪಾಲಿಸುವಲ್ಲಿ ಸಾರ್ವಜನಿಕ ಪ್ರಯಾಣಿಕರು ಸಂಸ್ಥೆಯೊಂದಿಗೆ ಸಹಕರಿಸುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗಾ. ಎಂ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಸಭಾ ಚುನಾವಣೆ: ಮತಕ್ಷೇತ್ರಗಳಿಗೆ ಇವಿಎಂ ಸ್ಟ್ರಾಂಗ್ ರೂಮ್ ಗಳಿಗೆ ಇವಿಎಂ ರವಾನೆ: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಮೊದಲ ಹಂತದ ಯಾರ್ಂಡಮೈಜೇಷನ್ ಪ್ರಕ್ರಿಯೆ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಎಲೆಕ್ಟ್ರಾನಿಕ್ ಮತಯಂತ್ರಗಳನ್ನು ವಿಧಾನಸಭಾ ಕ್ಷೇತ್ರವಾರು ರವಾನೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.



ನಗರದ ಹಿಂಡಲಗಾ ಗ್ರಾಮದಲ್ಲಿರುವ ಭಾರತ ಚುನಾವಣಾ ಆಯೋಗದ ಉಗ್ರಾಣ(ಗೊಡೌನ್) ದಲ್ಲಿರುವ ಎಲೆಕ್ಟ್ರಾನಿಕ ಮತಯಂತ್ರಗಳನ್ನು ಮಂಗಳವಾರ (ಮಾ.26) ಬಿಗಿಭದ್ರತೆಯೊಂದಿಗೆ ಆಯಾ ವಿಧಾನಸಭಾ ಮತಕ್ಷೇತ್ರಗಳಿಗೆ ಕಳುಹಿಸಲಾಯಿತು.

ಯಾರ್ಂಡಮೈಜೇಷನ್ ಪ್ರಕ್ರಿಯೆಯಲ್ಲಿ ಹಂಚಿಕೆಗೊಂಡಿರುವ ಮತಯಂತ್ರಗಳನ್ನು ಜಿಪಿಎಸ್ ಆಧಾರಿತ ವಾಹನಗಳ ಮೂಲಕ ಪೊಲೀಸ್ ಭದ್ರತೆಯೊಂದಿಗೆ ಮಂಗಳವಾರ ಮಧ್ಯರಾತ್ರಿಯವರೆಗೆ ರವಾನೆ ಮಾಡಲಾಯಿತು.

ಆಯಾ ತಾಲ್ಲೂಕುಗಳಲ್ಲಿ ಸ್ಥಾಪಿಸಲಾಗಿರುವ ಸ್ಟ್ರಾಂಗ್ ರೂಮ್ ಗಳಲ್ಲಿ ಇವಿಎಂ ಇರಿಸಲಾಗುತ್ತದೆ. ಎರಡನೇ ಚುನಾವಣಾ ವೀಕ್ಷಕರು ಆಗಮಿಸಿದ ಬಳಿಕ ಅವರ ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಎರಡನೇ ಹಂತದ ಯಾರ್ಂಡಮೈಜೇಷನ್ ಮಾಡಲಾಗುವುದು.

ಎರಡನೇ ಹಂತದ ಯಾರ್ಂಡಮೈಜೇಷನ್ ಆದ ಬಳಿಕವೇ ಯಾವ ಮತಗಟ್ಟೆಗೆ ಯಾವ ಇವಿಎಂ ಹೋಗಲಿದೆ ಎಂಬುದು ಗೊತ್ತಾಗುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಎಲೆಕ್ಟ್ರಾನಿಕ್ ಮತಯಂತ್ರಗಳ ಪ್ರಾಥಮಿಕ ಹಂತದ ಪರಿಶೀಲನೆ(ಎಫ್.ಎಲ್.ಸಿ) ನಡೆಸಿ ಉಗ್ರಾಣದಲ್ಲಿ ಇಡಲಾಗುತ್ತದೆ. ಹೀಗೆ ಎಫ್.ಎಲ್.ಸಿ ಮಾಡಲಾಗಿರುವ ಮತಯಂತ್ರಗಳನ್ನು ಪ್ರಥಮ ಹಂತದ ಯಾರ್ಂಡಮೈಜೇಷನ್ ಪ್ರಕ್ರಿಯೆ ಮೂಲಕ ಆಯಾ ಮತಕ್ಷೇತ್ರಗಳಿಗೆ ಅಗತ್ಯಾನುಸಾರ ಶೇ.130 ರಷ್ಟು ಇವಿಎಂ ಹಂಚಿಕೆ ಮಾಡಲಾಗಿರುತ್ತದೆ ಎಂದು ವಿವರಿಸಿದರು.

ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರ ನೇತೃತ್ವದಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾ–ರಿಯೂ ಆಗಿರುವ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಸೇರಿದಂತೆ ಜಿಲ್ಲೆಯ ಎಲ್ಲ ಹದಿನೆಂಟು ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾ–ರಿಗಳು, ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರು ಇವಿಎಂ ರವಾನೆ ಕಾರ್ಯದ ಉಸ್ತುವಾರಿ ವಹಿಸಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089